ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-12 ಸಂಪುಟ:12 | ISSUE- ಸಂಚಿಕೆ: 358 | PAGE- ಪುಟ 8 | ಶುಕ್ರವಾರ 31.01.2025 | RS.ಬೆಲೆ 2/-

# ಮಾರ್ಚ್ ಅಂತ್ಯಕ್ಕೆ ಜಿಲ್ಲಾವಾರು ಅಭಿಪ್ರಾಯ ಸಂಗ್ರಹಣೆ ಕಾರ್ಯ ಪೂರ್ಣ:ಪ್ರೊ. ಎಂ.ಗೋವಿಂದರಾವ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.30: ಹಿಂದುಳಿದ ಪ್ರದೇಶದಲ್ಲಿನ ಇದೂವರೆಗೆ ಸಾಧಿಸಿದ ಪ್ರಗತಿ ಆಧಾರದ ಮೇಲೆಮುಂದೆಮಾಡಬೇಕಾಶದ ಅಭಿವೃದ್ಧಿಗೆ ಹೊಸದಾಗಿ ಸೂಚ್ಯಂಕ ನಿಗದಿಪಡಿಸುವ ನಿಟ್ಟಿನಲ್ಲಿ ಬರುವ ಮಾರ್ಚ್ ಒಳಗಾಗಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸಮಿತಿ ಸಂಚರಿಸಿ ಜಿಲ್ಲಾವಾರು ಅಭಿಪ್ರಾಯ ಸಂಗ್ರಹಣೆಮೂರ್ಣಗೊಳಿಸಲಿದೆ ಎಂದು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಅಧ್ಯಕ್ಷ ಪ್ರೋ. ಎಂ.ಗೋವಿಂದರಾವ ಹೇಳಿದರು.

ಗುರುವಾರ ಇಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಲಬುರಗಿ ಜಿಲ್ಲೆಯ ಅಭಿಪ್ರಾಯ ಸಂಗ್ರಹಣೆ ಮಾಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ಡಾ.ಡಿ.ಎಂ.ನಂಜುಂಡಪ್ಪ ಅವರ ವರದಿಯಲ್ಲಿ 35 ಇಂಡೆಕ್ಸ್ ಉಲ್ಲೇಖ ಮಾಡಲಾಗಿತು. ಇದರ ಆಧಾರದ ಮೇರೆಗೆ ಇಂದಿನ ಕಾಲಘಟಕ್ಕೆ ಅನುಗುಣವಾಗಿ ಇನ್ನು ಹೆಚ್ಚಿನ ಸೂಚ್ಯಂಕಗಳನ್ನು ಸೇರಿಸಿ ಸರ್ಕಾರಕ್ಕೆ ಸೆಪ್ಟೆಂಬರ್ ಒಳಗಾಗಿ ವರದಿ ಸಲ್ಲಿಸಲಾಗುತ್ತದೆ ಎಂದರು.

ಡಾ.ಡಿ.ಎಂ.ನಂಜುಂಡಪ್ಪ ವರದಿಯನ್ವಯ ಇದೂವರೆಗೆ ಪ್ರದೇಶಕ್ಕೆ ಬಿಡುಗಡೆಯಾದ ಸಾವಿರಾರು ಕೋಟಿ ರೂ. ಹಣದಿಂದ ಸಾಧಿಸಿರುವ ಪ್ರಗತಿಯ ನಡುವೆಯೂ ತಲಾ ಆದಾಯ ಕುಸಿದಿದೆ. ಆದಾಯ ಮತು ಫಲಿತಾಂಶದ ಅಸ್ಥಿರಗಳನ್ನು ಲೆಕ್ಕಕ್ಕೆ ತೆಗೆದುಕೊಂಡು ವರದಿ ನೀಡಲಾಗುತ್ತದೆ. ವಿಶೇಷವಾಗಿ ಶಿಕ್ಷಣ, ಆರೋಗ್ಯಕ್ಕೆ ಹೆಚ್ಚಿನ ಒತ್ತು ನೀಡಬೇಕಿರುವುದರಿಂದ ಇದರ ಬಗ್ಗೆಯೂ ವರದಿಯಲ್ಲಿ ಉಲ್ಲೇಖ ಮಾಡಲಾಗುವುದು ಎಂದರು.

ಕಳೆದ ಸೆಪ್ಟೆಂಬರ್‌ನಿಂದಲೆ ಸಮಿತಿ ಕೆಲಸ ಆರಂಭಿಸಿದೆ. ಪ್ರಶ್ನಾವಳಿಗಳನ್ನು ಇಲಾಖೆಗಗೆ ಕಳುಹಿಸಿದೆ. ಜಿಲ್ಲಾವಾರು ವಿಶ್ಲೇಷಣೆ ಕಾರ್ಯ ಮುಗಿಯುವ ಹಂತದಲ್ಲಿದ್ದು, ತಾಲೂಕುವಾರು ಮಾಡಬೇಕಿದೆ. ವಿಭಾಗಮಟ್ಟದಲ್ಲಿ ನಾನು ಮತ್ತು ಜಿಲ್ಲಾ ಮಟ್ಟದಲ್ಲಿ ಸಮಿತಿಯ ಸದಸ್ಯರು ಹೋಗಿ ಜನಪ್ರತಿನಿಧಿಗಳು, ಅಧಿಕಾರಿಗಳು, ಸಂಘ-ಸಂಸ್ಥೆಗಳು ಹಾಗೂ ಸಾರ್ವಜನಿಕರ ಅಭಿಪ್ರಾಯ ಸಂಗ್ರಹಣೆ ಮಾಡಲಿದ್ದಾರೆ. ಇದರ ಜೊತೆಗೆ ದತ್ತಾಂಶ ಸಂಗ್ರಹಣ ಕಾರ್ಯ ಭರದಿಂದ ನಡೆಯುತ್ತಿದೆ ಎಂದ ಪ್ರೊ. ಎಂ.ಗೋವಿಂದರಾವ ಅವರು, ಸಮಿತಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಸದಸ್ಯರಿಲ್ಲ ಎಂಬ ಪ್ರಶ್ನೆಗೆ ಉತ್ತರಿಸಿ ವಾಸುದೇವ ಸೇಡಂ ಅವರನ್ನು ನೇಮಕ ಮಾಡಲಾಗಿತ್ತು, ಅವರು ಅನಾರೋಗ್ಯ ಕಾರಣ ನೀಡಿ ರಾಜೀನಾಮೆ ನೀಡಿದ್ದರಿಂದ ಈ ಭಾಗದಿಂದಲೆ ಓರ್ವ ಸದಸ್ಯರನ್ನು ಆಯ್ಕೆ ಮಾಡಲಾಗುವುದು ಎಂದರು.

ನಂಜುಂಡಪ್ಪ ವರದಿಯಂತೆ ಕ.ಕ. ಭಾಗದಲ್ಲಿ 15 ಸಾವಿರ ಕೋಟಿ ಖರ್ಚು: ಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಪ್ರದೇಶಾಭಿವೃದ್ಧಿ ಮಂಡಳಿಯ ನಿರ್ದೇಶಕ ಡಿ.ಚಂದ್ರಶೇಖರಯ್ಯ ಮಾತನಾಡಿ ಡಾ.ಡಿ.ಎಂ.ನಂಜುಂಡಪ್ಪ ಅವರ ವರದಿಯಂತೆ 2007-08 ರಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಎಸ್.ಡಿ.ಪಿ. ಯೋಜನೆಯಡಿ 45 ಸಾವಿರ ಕೋಟಿ ಅನುದಾನ ಖರ್ಚು ಮಾಡಿದ್ದು, ಇದರಲ್ಲಿ 15,000 ಕೋಟಿ ರೂ. ಕಲ್ಯಾಣ ಕರ್ನಾಟಕ ಭಾಗಕ್ಕೆ ಖರ್ಚು ಮಾಡಿದೆ. ಇನ್ನು 371ಜೆ ಅನ್ವಯ ರಚನೆಗೊಂಡ ಕೆ.ಕೆ.ರ್.ಡಿ.ಬಿ. ಮಂಡಳಿಗೆ ಇದೂವರೆಗೆ 19,000 ಕೋಟಿ ರೂ.. ಹಂಚಿಕೆ ಮಾಡಿ 13,000 ಕೋಟಿ ರೂ. ಬಿಡುಗಡೆ ಮಾಡಿದೆ. ಇದರಲ್ಲಿ 11,000 ಕೋಟಿ ರೂ. ಖರ್ಚು ಮಾಡಲಾಗಿದೆ. ಕಲಬುರಗಿ ವಿಮಾನ ನಿಲ್ದಾಣ, ಜಯದೇವ

(2ನೇ ಪುಟ ನೋಡಿ)

# ಸಂಚಾರಿ ನಿಯಮ ಪಾಲಿಸದಿದ್ದರೆ ಲೈಸನ್ಸ್ ರದ್ದತಿ; ಎಸ್ಪಿ ಪ್ರದೀಪ್ ಗುಂಟಿ ಎಚ್ಚರಿಕೆ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜ.30: ವಾಹನಗಳ ಸವಾರರ ಸುರಕ್ಷಿತ ಪ್ರಯಾಣಕ್ಕಾಗಿ ರಸ್ತೆ ಸಂಚಾರ ನಿಯಮ ಕಡ್ಡಾಯವಾಗಿ ಪಾಲಿಸಬೇಕು ಎಂದು ಬೀದರ್ ಪೊಲೀಸರು ಜಾಗ್ರತಿ ಅಭಿಯಾನ ನಡೆಸಿದ್ದಾರೆ. ಬೀದರ ಸಂಚಾರ ಪೊಲಿಸರು ರಸ್ತೆ ಸುರಕ್ಷತಾ ಅಭಿಯಾನ ನಡೆಸಿದರು. ಹೆಲ್ಮೆಟ್ ಧರಿಸದೆ ದ್ವಿಚಕ್ರವಾಹನ ಚಲಾಯಿಸುತ್ತಿದ್ದ ಸವಾರರಿಗೆ ಕಡ್ಡಾಯ ವಾಗಿ ಹೆಲ್ಮೆಟ್ ಧರಿಸಿ ಎಂದು ದಂಡ ಬದಲಾಗಿ ಹೆಲ್ಮೆಟ್ ನೀಡಿ ಸಂಚಾರಿ ನಿಯಮದ ಅರಿವು ನೀಡಿದರು.

ಈ ವೇಳೆ ಭರ್ದಲ್ಲಿ ಹಲವು ವಾಹನ ಸವಾರರು ಪೋಲಿಸರ ಜೊತೆಗೆ ವಾಗ್ವಾದ ನಡೆಸಿದ ಘಟನೆಯೂ ನಡೆಯಿತು.

ಈ ವೇಳೆ ಬೀದರ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ವಾಹನ ಸವಾರರು ಸಂಚಾರಿ ನಿಯಮ ಪಾಲಿಸುವಂತೆ ಸವಾರರಿಗೆ ಸೂಚಿಸಿದರು. ವಾಹನ

(2ನೇ ಪುಟ ನೋಡಿ)

# ಹುತಾತ್ಮರಿಗೆ ಗೌರವ ನಮನ ಸಲ್ಲಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಜ.30: ವಿಧಾನ ಸೌಧ ಹಾಗೂ ವಿಕಾಸ ಸೌಧದ ಕಟ್ಟಡಗಳ ಮಧ್ಯದಲ್ಲಿರುವ ಮಹಾತ್ಮ ಗಾಂಧೀಜಿಯವರ ಪ್ರತಿಮೆಯ ಬಳಿ ಭಾರತದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹುತಾತ್ಮರಾದವರ ಸ್ಮರಣಾರ್ಥವಾಗಿ ಹುತಾತ್ಮರ ದಿನಾಚರಣೆ ಕಾರ್ಯಕ್ರಮದ ಅಂಗವಾಗಿ ಮಹಾತ್ಮ ಗಾಂಧೀಜಿಯವರ ಭಾವಚಿತ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾಲಾರ್ಪಣೆ ಮಾಡುವ ಮೂಲಕ ಗೌರವ ನಮನ

(2ನೇ ಪುಟ ನೋಡಿ)

# ಶೇಖರಪ್ಪ ಮುತ್ತೇನವರ್ ಗೆ ವಿಶ್ವವಾಣಿಯ 'ಗ್ಲೋಬಲ್ ಅಚೀವರ್ಸ್ ಅವಾರ್ಡ್'

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜ.30: ವಿಶ್ವವಾಣಿ ಪತ್ರಿಕೆಯಿಂದ ಕೊಡಮಾಡುವ 'ಗ್ಲೋಬಲ್ ಅಚೀವರ್ಸ್ ಅವಾರ್ಡ್' ಗೆ ಕೊಪ್ಪಳದ ಉದ್ಯಮಿ ಶೇಖರಪ್ಪ ಮುತ್ತೇನ್ನವರ್ ಆಯ್ಕೆ ಆಗಿದ್ದಾರೆ.

ಬೇರೆ ಬೇರೆ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕರಿಗೆ ಪ್ರತಿವರ್ಷ ವಿಶ್ವವಾಣಿ 'ಗ್ಲೋಬಲ್ ಅಚೀವರ್ಸ್ ಅವಾರ್ಡ್' ನೀಡುತ್ತದೆ. ಈ ಬಾರಿ ಕೊಪ್ಪಳದ ಉದ್ಯಮಿ ಶೇಖರಪ್ಪ ಮುತ್ತೇನ್ನವರ್ ಆಯ್ಕೆಯಾಗಿದ್ದಾರೆ. ಓಮನ್ ರಾಜಧಾನಿ ಮಸ್ಕತ್‌ನಲ್ಲಿ ನಡೆಯಲಿರುವ ಸಮಾರಂಭದಲ್ಲಿ ಇವರು ಪ್ರಶಸ್ತಿ ಸ್ವೀಕರಿಸಲಿದ್ದಾರೆ.

ಸಾಮಾನ್ಯ ಕೃಷಿಕ ಕುಟುಂಬದಲ್ಲಿ ಜನಿಸಿದ ಶೇಖರಪ್ಪ ಸದ್ಯ ಯಶಸ್ವಿ ಉದ್ಯಮಿಯಾಗಿ ಬೆಳೆದು ನಿಂತಿದ್ದಾರೆ. ಮೂಲತಃ ಕೊಪ್ಪಳ ಜಿಲ್ಲೆ ಕುಷ್ಟಗಿ ತಾಲೂಕು



ತಾವರಗೇರ ಪಟ್ಟಣದ ಇವರು ಶೇಖರಪ್ಪ ಸದ್ಯ ಕೊಪ್ಪಳದಲ್ಲಿ ನೆಲೆಸಿದ್ದಾರೆ. ಸಹಕಾರಿ ಬ್ಯಾಂಕ್ ನಲ್ಲಿ ಪಿಗ್ಮಿ ಏಜೆಂಟ್ ಆಗಿ ತಮ್ಮ ವೃತ್ತಿ ಬದುಕು ಶುರು ಮಾಡಿ, ಇದೀಗ ಹತ್ತಾರು ಜನರಿಗೆ ಕೆಲಸ ಕೊಡುವಂತೆ ಬೆಳೆದು ನಿಂತಿದ್ದಾರೆ.

ಕೊಪ್ಪಳ ಜಿಲ್ಲಾ ಕೇಂದ್ರಸೇರಿ ಜಿಲ್ಲೆಯ ಬೇರೆ ಬೇರೆ ಕಡೆಗೆ ಜಮೀನು ಖರೀದಿ ಮಾಡಿ, ಲೇ ಔಟ್ ಮಾಡುತ್ತಿದ್ದಾರೆ. ಅತ್ಯಂತ ಯೋಗ್ಯ ದರದಲ್ಲಿ ನಿವೇಶನ ನೀಡುವ ಮೂಲಕ ಸ್ವಂತಃ ಮನೆ ಕಟ್ಟಿಕೊಳ್ಳುವ ಮಧ್ಯಮ ವರ್ಗದವರ ಕನಸು ನನಸು ಮಾಡುತ್ತಿದ್ದಾರೆ.

ಇದರ ಜೊತೆಗೆ ಶೇಖರಪ್ಪ ಸಾಮಾಜಿಕಕಾರ್ಯದಲ್ಲೂತಮ್ಮನ್ನು ತಾವು ತೊಡಗಿಸಿಕೊಂಡಿದ್ದು, ನಿರಂತರವಾಗಿ ಸಮಾಜ ಮುಖಿ ಕೆಲಸ ಮಾಡುತ್ತಿದ್ದಾರೆ. ಸದ್ಯ ಭಾರತ್ ಸ್ಕೌಟ್ಸ್ ???ಂಡ್ ಗೈಡ್ಸ್‌ನ ಜಿಲ್ಲಾ ಆಯುಕ್ತರಾಗಿ, ವಿವೇಕ ಜಾಗೃತಿ ಬಳಗ ತಂಡ, ಕೊಪ್ಪಳದ ಮಳೆ ಮಲ್ಲೇಶ್ವರ ದೇವಸ್ಥಾನದ ಆಡಳಿತ ಮಂಡಳಿ ಸದಸ್ಯರಾಗಿ ಸಾಮಾಜಿಕ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ. ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜದ ಯುವ ಘಟಕದ ಪ್ರಧಾನ ಕಾರ್ಯದರ್ಶಿಯಾಗಿ ಸಮಾಜ ಸೇವೆ ಮಾಡುತ್ತಿದ್ದಾರೆ.

# ನಾಳೆಯಿಂದ ಸಂಸತ್ತಿನ ಬಜೆಟ್ ಅಧಿವೇಶನ

ನವದೆಹಲಿ,ಜ.30: ಸಂಸತ್ ತ್ತಿನ ಬಜೆಟ್ ಜಂಟಿ ಅಧಿವೇಶನವು ನಾಳೆಯಿಂದ ಆರಂಭವಾಗಲಿದ್ದು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಜಂಟಿ ಸದನ ಉದ್ದೇಶಿಸಿ ಭಾಷಣ ಮಾಡುವುದರೊಂದಿಗೆ ಅಧಿವೇಶನಕ್ಕೆ ಚಾಲನೆ ದೊರೆಯಲಿದೆ.

ಒಟ್ಟು ಎರಡು ಹಂತದಲ್ಲಿ ಅಧಿವೇಶನ ನಡೆಯಲಿದೆ. ಶನಿವಾರ 2025 - 26ನೇ ಸಾಲಿನ ಕೇಂದ್ರಬಜೆಟ್ ಮಂಡನೆಯಾಗಲಿದೆ. ರಾಷ್ಟ್ರಪತಿ ಭಾಷಣದ ಬಳಿಕ ನಾಳೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಆರ್ಥಿಕ ಸಮೀಕ್ಷೆ ಮಂಡಿಸಲಿದ್ದಾರೆ. ಶನಿವಾರ 2025 - 26ನೇ ಸಾಲಿನ ಕೇಂದ್ರ ಆಯವ್ಯಯವನ್ನು ಮಂಡಿಸಲಿದ್ದಾರೆ.

ಬಜೆಟ್ ಮಂಡನೆ ಬಳಿಕ ಮೊದಲಿಗೆ ರಾಷ್ಟ್ರಪತಿ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲೆ ಚರ್ಚೆ ನಡೆಯಲಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಉತ್ತರ ನೀಡಲಿದ್ದಾರೆ. ಬಳಿಕ ಬಜೆಟ್ ಮೇಲೆ ಚರ್ಚೆ ನಡೆಯಲಿದ್ದು, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಉತ್ತರ ನೀಡಲಿದ್ದಾರೆ.

ಶುಕ್ರವಾರದಿಂದ ಆರಂಭವಾಗುವ ಅಧಿವೇಶನದ ಮೊದಲ ಹಂತ ಫೆಬ್ರವರಿ 13ಕ್ಕೆ ಅಂತ್ಯವಾಗಲಿದೆ. ಬಜೆಟ್ ಪ್ರಸ್ತಾವನೆಗಳನ್ನು ಪರಿಶೀಲಿಸಿದ ಬಳಿಕ ಮಾರ್ಚ್ 10 ರಿಂದ ಎರಡನೇ ಹಂತದ ಸಂಸತ್ ಅಧಿವೇಶನ ಆರಂಭವಾಗಲಿದೆ. ಒಟ್ಟು 27 ದಿನಗಳ ಕಾಲ ಅಧಿವೇಶನ ನಡೆಯಲಿರುವ ಅಧಿವೇಶನ ಏಪ್ರಿಲ್ 4ಕ್ಕೆ ಕೊನೆಗೊಳ್ಳಲಿದೆ.

2025ರ ಬಜೆಟ್ ಅಧಿವೇಶನ ಆರಂಭಕ್ಕೂ ಮುನ್ನ ಜನವರಿ

(2ನೇ ಪುಟ ನೋಡಿ)

# ಹಾಡುಹಗಲೇ ಕಾಲೇಜು ಹುಡುಗಿಯ ಕತ್ತು ಸೀಳಿ ಬರ್ಬರ ಹತ್ಯೆ; ಆರೋಪಿ ಬಂಧನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು:ಜ.30: ಸಿಂಧನೂರು ಸರ್ಕಾರಿ ಕಾಲೇಜಿನಲ್ಲಿ ಎಂಎಸ್‌ಸಿ ವ್ಯಾಸಂಗ ಮಾಡುತ್ತಿದ್ದ ವಿದ್ಯಾರ್ಥಿನಿ ಕತ್ತು ಸೀಳಿ ಬರ್ಬರವಾಗಿ ಹತ್ಯೆ ಮಾಡಿರುವಂತಹ ಘಟನೆ ಜಿಲ್ಲೆಯ ಸಿಂಧನೂರಿನ ಹೊರ ಭಾಗದಲ್ಲಿ ನಡೆದಿದೆ.

ಮೃತ ವಿದ್ಯಾರ್ಥಿನಿಯನ್ನು 24 ವರ್ಷದ ಶಿಫಾ ಅಬ್ದುಲ್ ವಾಹೀದ್ ಎಂದು ಗುರುತಿಸಲಾಗಿದೆ. ಆರೋಪಿ ಮುಬಿನ್ ಇಂದು ಬೆಳಗ್ಗೆ 10 ಗಂಟೆ ಸುಮಾರಿಗೆ ಕಾಲೇಜಿಗೆ ತೆರಳುತ್ತಿದ್ದ ಶಿಫಾಳನ್ನು ಮಾತನಾಡಬೇಕೆಂದು ಕರೆದಿದ್ದಾನೆ. ಈ ವೇಳೆ ವಿದ್ಯಾರ್ಥಿನಿ ಕಾಲೇಜಿಗೆ ಹೋಗದೆ ಮುಬಿನ್ ಜೊತೆ ಮಾತನಾಡಲು ಹೋಗಿದ್ದಾಳೆ. ಈ ವೇಳೆ ಇಬ್ಬರ ಮಧ್ಯೆ ಮಾತಿಗೆ ಮಾತು ಬೆಳೆದು ಮುಬಿನ್ ಚೂರಿ ತೆಗೆದು ಶಿಫಾಳ ಕತ್ತು ಸೀಳಿ ಪರಾರಿಯಾಗಿದ್ದಾನೆ. ತೀವ್ರ ರಕ್ತಸ್ರಾವದಿಂದ ಶಿಫಾ ಮೃತಪಟ್ಟಿದ್ದಾಳೆ.

ಮಗಳ ಸಾವಿನ ವಿಷಯ ತಿಳಿಯುತ್ತಿದ್ದಂತೆ ಘಟನಾ ಸ್ಥಳಕ್ಕೆ ಆಗಮಿಸಿದ ಶಿಫಾಳ ಪೋಷಕರು ಕಣ್ಣೀರು ಹಾಕಿದರು. ಘಟನಾ ಸ್ಥಳಕ್ಕೆ ಡಿವೈಎಸ್‌ಪಿ ಬಿ ಎಸ್ ತಳವಾರ, ಗ್ರಾಮೀಣ ಠಾಣೆಯ ಸಿಪಿಐ ವೀರಾರೆಡ್ಡಿ, ಬಳಗಾನೂರು

ಪಿಎಸ್‌ಐ ಯರಿಯಪ್ಪ ಸೇರಿದಂತೆ ಪೊಲೀಸ್ ಸಿಬ್ಬಂದಿ ಘಟನಾ ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದರು. ಕೊಲೆ ಮಾಡಿದ ಬಳಿಕ ಆರೋಪಿ ಮುಬಿನ್ ಲಿಂಗಸುಗೂರು ಪೊಲೀಸ್ ಠಾಣೆಗೆ ತೆರಳಿ ಶರಣಾಗಿದ್ದಾನೆ.

# ಕ್ರಾಂತಿ ವೀರ ಬ್ರಿಗೇಡ್ ಘೋಷಿಸಿದ ಕೆಎಸ್ ಈಶ್ವರಪ್ಪ

ಮಲ್ಲಮ್ಮ ನುಡಿ ವಾರ್ತೆ

ಶಿವಮೊಗ್ಗ:ಜ.30: ಈ ಹಿಂದೆ ರಾಯಣ್ಣ ಬ್ರಿಗೇಡ್ ಆರಂಭಿಸಿ ಬಿಜೆಪಿಗೆ ಸಡ್ಡು ಹೊಡೆದಿದ್ದ ಮಾಜಿ ಉಪಮುಖ್ಯಮಂತ್ರಿ ಕೆ ಎಸ್ ಈಶ್ವರಪ್ಪ ಅವರು ಈಗ 'ಕ್ರಾಂತಿ ವೀರ ಬ್ರಿಗೇಡ್' ಸಂಘಟನೆ ಘೋಷಿಸುವ ಮೂಲಕ ಮತ್ತೊಮ್ಮೆ ಕೇಸರಿ ಪಕ್ಷಕ್ಕೆ ಸಡ್ಡು ಹೊಡೆಯಲು ಮುಂದಾಗಿದ್ದಾರೆ.

'ಕ್ರಾಂತಿವೀರ ಬ್ರಿಗೇಡ್' ಎಲ್ಲಾ ಜಾತಿಗಳ ಮಠಾಧೀಶರನ್ನು ಒಳಗೊಂಡಿದ್ದು, ಹಿಂದೂಗಳ ಏಕೀಕರಣಕ್ಕಾಗಿ ಕೆಲಸ ಮಾಡಲಿದೆ. ಈ ಸಂಘಟನೆ ಫೆಬ್ರವರಿ 4 ರಂದು ಬಸವನ ಬಾಗೇವಾಡಿಯಲ್ಲಿ ಉದ್ಘಾಟನೆಯಾಗಲಿದೆ ಎಂದು ಈಶ್ವರಪ್ಪ ಅವರು ಗುರುವಾರ ತಿಳಿಸಿದ್ದಾರೆ.

(2ನೇ ಪುಟ ನೋಡಿ)

## ಒಂದನೇ ಪುಟದಿಂದ

### ಕಾರ್ಯ ಪೂರ್ಣ:ಪ್ರೊ. ಎಂ.ಗೋವಿಂದರಾವ

ಆಸ್ಪತ್ರೆ ಇದೇ ಅನುದಾನದ ಫಲಶೃತಿ ಎಂದರು.

ಇನ್ನು ರಾಜ್ಯದಾದ್ಯಂತ 2.80 ಲಕ್ಷ ಹುದ್ದೆ ಖಾಲಿ ಇದ್ದು, ಇದರಲ್ಲಿ ಕಲ್ಯಾಣ ಕರ್ನಾಟಕ ಭಾಗಕ್ಕೆ ಸಂಬಂಧಿಸಿದ 17 ಸಾವಿರ ಹುದ್ದೆಗಳಿವೆ. ಸಚಿವ ಪ್ರಿಯಾಂಕ್ ಖರ್ಗೆ ಅಧ್ಯಕ್ಷತೆಯಲ್ಲಿಯೇ 371ಜೆ ಅನುಷ್ಠಾನಾಧಿಕಾರಿ ಸಮಿತಿ ಇರುವ ಕಾರಣ, ಹುದ್ದೆ ಭರ್ತಿಗೂ ವೇಗ ಸಿಗಲಿದೆ ಎಂದರು.

ಸಮಿತಿ ಸದಸ್ಯರಾದ ಡಾ.ಸೂರ್ಯನಾರಾಯಣ ಮುಂಗಿಲ್ ಹಿಲ್ಲೆಮನಿ, ಡಾ.ಎಸ್.ಟಿ.ಬಾಗಲಕೋಟೆ, ಕೆ ಕೆ.ಕೆ.ಆರ್.ಡಿ.ಬಿ. ಕಾರ್ಯದರ್ಶಿ ಎಂ.ಸುಂದರೇಶ ಬಾಬು ಇದ್ದರು.

### ಎಸ್ಪಿ ಪ್ರದೀಪ್ ಗುಂಟಿ ಎಚ್ಚರಿಕೆ

ಚಾಲನೆ ವೇಳೆ ಮಾಡುವಾಗ ಕಡ್ಡಾಯವಾಗಿ ಸಿಟ್ಟ ಹೆಲ್ಮೆಟ್ ಧರಿಸಬೇಕು. ನಮ್ಮ ಜೀವಕ್ಕೆ ಎಷ್ಟು ಪ್ರಾಮುಖ್ಯ ನೀಡುತ್ತೇವೆಯೋ ಅಷ್ಟೇ ಇನ್ನೊಬ್ಬರ ಜೀವಕ್ಕೂ ಬೆಲೆ ಇದೆ ಎಂಬ ವಾಸ್ತವವನ್ನು ಅರಿಯಬೇಕು. ಸಂಚಾರದ ವೇಳೆ ರಸ್ತೆ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಕಾರ್ ಪಾರ್ಕ ಮಾಡುವವರು ಸಂಚಾರಿ ಪೋಲಿಸರು ಮಾರ್ಗಸೂಚಿ ಅನುಸರಿಸಬೇಕು ಇಲ್ಲವಾದರೆ ದಂಡ ಹಾಕಲಾಗುತ್ತದೆ ನಿಯಮ ಪಾಲಿಸದಿದ್ದರೆ ಲೈಸೆನ್ಸ್ ರದ್ದತಿ ಮಾಡಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

### ಮುಖ್ಯಮಂತ್ರಿ ಸಿದ್ದರಾಮಯ್ಯ

ಸಲ್ಲಿಸಿದರು. ಬಳಿಕ ಭಾರತದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹುತಾತ್ಮರಾದವರ ಸ್ಮರಣಾರ್ಥವಾಗಿ ಮೌನಾಚರಣೆಯಲ್ಲಿ ಭಾಗವಹಿಸಿದರು.

ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಸಚಿವರಾದ ಕೆ.ಹೆಚ್.ಮುನಿಯಪ್ಪ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಚಿವರಾದ ದಿನೇಶ್ ಗುಂಡೂರಾವ್, ವಸತಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಸಚಿವರಾದ ಜಮೀರ್ ಅಹಮದ್ ಖಾನ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ನಸೀರ್ ಅಹಮದ್, ಗ್ಯಾರಂಟಿ ಯೋಜನಗಳ ಅನುಷಾ??ನ ಸಮಿತಿ ಅಧ್ಯಕ್ಷರಾದ ಹೆಚ್.ಎಂ. ರೇವಣ್ಣ, ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ. ಶಾಲಿನಿ ರಜನೀಶ್ ಸೇರಿದಂತೆ ಇತರೆ ಗಣ್ಯರು ಉಪಸ್ಥಿತರಿದ್ದರು.

### ಬಜೆಟ್ ಅಧಿವೇಶನ

30 ರಂದು ಕೇಂದ್ರ ಸರಕಾರ ಸರ್ವಪಕ್ಷ ಸಭೆ ಕರೆದಿದೆ. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಫೆಬ್ರವರಿ 1, 2025ರಂದು ಲೋಕಸಭೆಯಲ್ಲಿ 2025ನೇ ಆರ್ಥಿಕ ವರ್ಷದ ಕೇಂದ್ರ ಬಜೆಟ್ ಅನ್ನು ಮಂಡಿಸಲಿದ್ದಾರೆ.

ಬಜೆಟ್ ಅಧಿವೇಶನವು 27 ಅಧಿವೇಶನಗಳನ್ನು ಹೊಂದಿರುತ್ತದೆ. ಬಜೆಟ್ ಅಧಿವೇಶನದ ಮೊದಲ ಭಾಗವು ಜನವರಿ 31 ರಿಂದ ಫೆಬ್ರವರಿ 13 ರವರೆಗೆ ಒಂಬತ್ತು ಅಧಿವೇಶನಗಳನ್ನು ಹೊಂದಿರುತ್ತದೆ,ಸಂಸತ್ತಿನ ನಂತರ ಬಜೆಟ್ ಪ್ರಸ್ತಾವನೆಗಳನ್ನು ಪರಿಶೀಲಿಸಲು ಮತ್ತು ವಿವಿಧ ಸಚಿವಾಲಯಗಳ ಅನುದಾನದ ಬೇಡಿಕೆಗಳನ್ನು ಚರ್ಚಿಸಲು ಮತ್ತು ಬಜೆಟ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಮಾರ್ಚ್ 10 ರಿಂದ ಮತ್ತೆ ಸಭೆ ಸೇರುತ್ತದೆ. ಅಧಿವೇಶನವು ಏಪ್ರಿಲ್ 4 ರಂದು ಮುಕ್ತಾಯಗೊಳ್ಳಲಿದೆ.

### ಘೋಷಿಸಿದ ಕೆಎಸ್ ಈಶ್ವರಪ್ಪ

ರಾಜ್ಯದಲ್ಲಿ ಹಿಂದುತ್ವವನ್ನು ಉಳಿಸಲು ಕೆಲಸ ಮಾಡುವ ಮಠಾಧೀಶರ ವೇದಿಕೆ ರಚನೆಗೆ ನೇತೃತ್ವ ವಹಿಸುವಂತೆ ಉತ್ತರ ಕರ್ನಾಟಕದ ಮಠಾಧೀಶರು ತಮ್ಮನ್ನು ಕೇಳಿಕೊಂಡಿದ್ದರು ಎಂದು ಈಶ್ವರಪ್ಪ ಸುದ್ದಿಗಾರರಿಗೆ ತಿಳಿಸಿದ್ದಾರೆ.

"ಮಠಾಧೀಶರನ್ನು ಒಳಗೊಂಡ ಈ ವೇದಿಕೆಯನ್ನು ಕ್ರಾಂತಿವೀರ ಬ್ರಿಗೇಡ್ ಎಂದು ಹೆಸರಿಸಲಾಗಿದೆ. ನಾನು ಉತ್ತರ ಕರ್ನಾಟಕದ ಹಲವಾರು ಜಿಲ್ಲೆಗಳಲ್ಲಿ ಪ್ರಯಾಣಿಸಿದೆ ಮತ್ತು ಹೆಚ್ಚು ಅಭಿವೃದ್ಧಿ ಹೊಂದಿಲ್ಲದ ಎಲ್ಲಾ ಜಾತಿಗಳ ಮಠಗಳಿಗೆ ಭೇಟಿ ನೀಡಿದ್ದೇನೆ. ಅವರಿಗೆ ಮೂಲಭೂತ ಮೂಲಸೌಕರ್ಯಗಳಿಲ್ಲ. ಅವುಗಳಲ್ಲಿ ಕೆಲವು ಗುಡಿಸಲುಗಳಲ್ಲಿ ನಡೆಯುತ್ತಿವೆ.

# ಆನೆಕಾಲು ರೋಗ ನಿರ್ಮೂಲನೆಗೆ ಜಾಗೃತಿ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಜ 30: ಆನೆಕಾಲು ಮುಕ್ತ ಸಮಾಜ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಜಿಲ್ಲಾಡಳಿತ ಭವನದ ಮುಖ್ಯದ್ವಾರದಲ್ಲಿ ಜಾಗೃತಿ ಅಭಿಯಾನಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜೂನಾಥ ಡಿ.ಎನ್ ಚಾಲನೆ ನೀಡಿದರು.

ಜಿಲ್ಲಾಡಳಿತ,ಜಿಲ್ಲಾಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಜಿಲ್ಲಾ ರೋಗಗಳ ಆಶ್ರಿತರೋಗಗಳ ನಿಯಂತ್ರಣಕಾರ್ಯಾಲಯದ ಸಹಯೋಗದಲ್ಲಿ ಆನೆಕಾಲು ರೋಗ ನಿರ್ಮೂಲನೆಗೆ ಹಮ್ಮಿಕೊಂಡ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿದ ಮಾತನಾಡಿದ ಅವರು ಕ್ಯೂಲೆಕ್ಸ್ ಸೊಳ್ಳೆ ಕಚ್ಚುವದರಿಂದ ಒಬ್ಬರಿಂದ ಇನ್ನೊಬ್ಬರಿಗೆ ಹರಡುವ ರೋಗವಾಗಿದ್ದು, ಚಿಕಿತ್ಸೆ ಪಡೆದುಕೊಂಡಲ್ಲಿ ರೋಗದಿಂದ ಮುಕ್ತರಾಗಬಹುದಾಗಿದೆ.

ಈ ರೋಗ ನಿಮ್ಮ ಸುತ್ತಮುತ್ತಲಿನ ಕೊಳಚೆ ಪ್ರದೇಶದಲ್ಲಿ ಉತ್ಪತ್ತಿಯಾಗುವ ಸೊಳ್ಳೆಗಳಿಂದ ಹಾಗೂ ಹಲವು ವರ್ಷಗಳ ನಂತರ ಕೈ, ಕಾಲು ದಪ್ಪವಾಗುತ್ತವೆ. ಚಿಕಿತ್ಸೆಯಿಂದ ರೋಗ ಮುಕ್ತರನ್ನಾಗಿ ಮಾಡಲಾಗುತ್ತಿದೆ. ವರ್ಷದಲ್ಲಿ ಒಂದು ಬಾರಿ ಡಿಇಸಿ ಮತ್ತು ಅಲ್ಬೆಂಡಜೋಲ್ ಮಾತ್ರೆ ಸೇವನೆಯಿಂದ ರೋಗದಿಂದ ಮುಕ್ತರಾಗಬಹುದು. ಈ ರೋಗದ ಬಗ್ಗೆ ಜನರಲ್ಲಿ ಜಾಗೃತ ಮೂಡಿಸುವ ನಿಟ್ಟಿನಲ್ಲಿ ಅಭಿಯಾನದ ರೂಪದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅರವಿಂದ ಪಟ್ಟಣಶೆಟ್ಟಿ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಕುಸುಮಾ ಮಾಗಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಶಿಕಲಾ ಶಿನ್ನೂರ, ತಾಲೂಕಾ ವೈದ್ಯಾಧಿಕಾರಿ ಡಾ.ಸರಸ್ವತಿ ಮಾಗಿ ಸೇರಿದಂತೆ ಇತರರು ಪಾಲ್ಗೊಂಡಿದ್ದರು. ಕಾರ್ಯಕ್ರಮದ ನಂತರ ನವನಗರದ ಬಸ್ ನಿಲ್ದಾಣದಲ್ಲಿ ಗೋಂದಲಗೇರಿ ಜಾನಪದ ಕಲಾತಂಡದಿಂದ ಆನೆಕಾಲು ರೋಗದ ಕುರಿತು ಜಾಗೃತಿ ಗೀತೆಗಳನ್ನು ಹಾಡುವ ಮೂಲಕ ನೆರೆದ ಜನರಲ್ಲಿ ಜಾಗೃತಿ ಮೂಡಿಸಲಾಯಿತು.

# ಅಂದಿಗಾಲೀಶ ಗುಡ್ಡದಲ್ಲಿ ಸುದರ್ಶನ ಹೋಮ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜ.30: ಜಿಲ್ಲೆಯ ಅಗಳಕೇರಿ ಗ್ರಾಮದ ವ್ಯವಸಾಯ ಸೇವಾ ಸಹಕಾರ ಸಂಘದ ನೂತನ ಪದಾಧಿಕಾರಿಗಳು ಲೋಕ ಕಲ್ಯಾಣಾರ್ಥವಾಗಿ ಐತಿಹಾಸಿಕ ಶ್ರೀ ಅಂದಿಗಾಲೀಶ ಗುಡ್ಡದಲ್ಲಿ ಗಣಪತಿ ಹೋಮ, ಸುದರ್ಶನ ಹೋಮ ಮತ್ತು ಪವಮಾನ ಹೋಮ ನೆರವೇರಿಸಿದರು.

ಮೌನಿ ಅಮಾವಾಸ್ಯೆ ಪ್ರಯುಕ್ತ ಗುಡ್ಡದ ಶ್ರೀ ಅಂದಿಗಾಲೇಶ್ವರನ ಮೂರ್ತಿಗೆ ವಿಶೇಷ ಅಭಿಷೇಕ, ಅಲಂಕಾರ, ಪೂಜೆ, ಹೋಮಗಳನ್ನು ನೆರವೇರಿಸಿ ಜಗತ್ಕಲ್ಯಾಣಕ್ಕಾಗಿ ಪ್ರಾರ್ಥಿಸಲಾಯಿತು.

ಹೊಸಪೇಟೆಯ ಶಂಕರ್ ಭಟ್ ಇವರ ನೇತೃತ್ವದಲ್ಲಿ ಅಗಳಕೇರಿ ಗ್ರಾಮದ ಶ್ರೀ ಅಂದಿಗಾಲೇಶ್ವರ ಸೇವಾ ಸಮಿತಿ ಇವರು ಆಯೋಜಿಸಿದ್ದ ಈ ಹೋಮಯಜ್ಞಕಾರ್ಯಕ್ರಮದಲ್ಲಿ ಸಂಘದ ನೂತನ ಅಧ್ಯಕ್ಷರಾದ ಕೆಂಚಪ್ಪ ಹಿಟ್ನಾಳ, ಉಪಾಧ್ಯಕ್ಷರಾದ ವಲಿಸಾಬ್, ನಿರ್ದೇಶಕರಾದ ಪರಶುರಾಮ ವಡ್ಡರ್, ಮಾಲತೇಶ ಕೀರ್ತಿಗೌಡರ್, ಗುರುಬಸವರಾಜ ಅಳವಂಡಿ, ಹನುಮಂತಪ್ಪ ಸಿಂದೋಗಿ, ಗೀತಾ ಬಸವರಾಜ ಭಜಂತ್ರಿ, ರಾಜು ಹುಲುಗಪ್ಪ ಗಡಾದ್, ಮಂಜುನಾಥ ನಿಂಗಪ್ಪ ಕುರಿ ಶಹಪುರ, ಈಶಪ್ಪ ಬಿಸನಹಳ್ಳಿ ಮತ್ತು ಜಯಶ್ರೀ ಮಂಜುನಾಥ ಕನಕಗಿರಿ ಇವರು ಹೋಮ, ಹವನ ಯಜ್ಞ ಕಾರ್ಯದಲ್ಲಿ ಪಾಲ್ಗೊಂಡು ಲೋಕಕಲ್ಯಾಣಾರ್ಥ ಪ್ರಾರ್ಥಿಸಿದರು.

ಅಗಳಕೇರಿ, ಚಂದ್ರಗಿರಿ, ಶಹಪುರ, ಹಿಟ್ನಾಳ, ಶಿವಪುರ, ಕೆರೆಹಳ್ಳಿ, ಬೂದಗುಂಪ, ಗುಳದಳ್ಳಿ, ಲಿಂಗದಹಳ್ಳಿ ಮತ್ತು ವದ್ನಾಳ್ ಗ್ರಾಮದ ಭಕ್ತರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಶ್ರೀ ಅಂದಿಗಾಲೇಶ್ವರ ಸೇವಾ ಸಮಿತಿಯ ಧುರೀಣರಾದ ಕೃಷ್ಣ ಗಡಾದ, ಮಂಜುನಾಥ ಶೆಟ್ಟರ್, ಬಸವರಾಜ ಕರ್ಕಿಹಳ್ಳಿ, ಪರಸಪ್ಪ ಗಮಣಿ, ವೀರಣ್ಣ ಕೋಮಲಾಪು ಸೇರಿದಂತೆ ಶ್ರೀ ಅಂದಿಗಾಲೀಶ ಸ್ವಾಮಿಯ ಭಕ್ತರು ಧಾರ್ಮಿಕ ಕಾರ್ಯಕ್ರಮಕ್ಕೆ ನೆರವಾದರು.

# ತಾರತಮ್ಯ ನಿವಾರಣೆಗೆ ಸಂವಿಧಾನದಲ್ಲಿ ಸಮಾನತೆ ಪ್ರಸ್ತಾಪ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜ.30: ಲಿಂಗ, ಜಾತಿ, ಧರ್ಮ, ಬಡವ ಶ್ರೀಮಂತ ಹಾಗೂ ಇತರೆ ತಾರತಮ್ಯಗಳನ್ನು ಹೋಗಲಾಡಿಸಲು ಸಂವಿಧಾನ ರಚನೆ ಸಂದರ್ಭದಲ್ಲಿ ಡಾ. ಬಿ,ಆರ್, ಅಂಬೇಡ್ಕರ್ ಅವರು ಸಂವಿಧಾನ ಪೀಠಿಕೆಯಲ್ಲಿ ಸಮಾನತೆಯ ಅಂಶವನ್ನು ಪ್ರಸ್ತಾವನೆ ಮಾಡಿದ್ದಾರೆ ಎಂದು ಪ್ರಕ್ರಿಯೆ ಸಂಸ್ಥೆ ಮುಖ್ಯಸ್ಥ ಹೈಕೋರ್ಟ್ ನ್ಯಾಯವಾದಿ ಮಂಜುನಾಥ್ ಬಾಗೇಪಲ್ಲಿ ಹೇಳಿದರು.

ಕೊಪ್ಪಳದ ಬಹದ್ದೂರ್ ಬಂಡಿ ರಸ್ತೆಯಲ್ಲಿಯ ಸರಸ್ವತಿ ವಿದ್ಯಾಮಂದಿರ ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯಲ್ಲಿ ಪ್ರಕ್ರಿಯೆ ಸಂಸ್ಥೆ, ದರ್ಪಣ ಹಾಗೂ ಸರಸ್ವತಿ ವಿದ್ಯಾಮಂದಿರ ಆಂಗ್ಲಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆ



ಇವರ ಸಹಯೋಗದಲ್ಲಿ ಗುರುವಾರ ಸಂವಿಧಾನ ಅರಿವು ಕಾರ್ಯಕ್ರಮದಲ್ಲಿ ಶಾಲಾ ಮಕ್ಕಳೊಂದಿಗೆ ಸಂವಾದ ನಡೆಸಿದ ಪ್ರಕ್ರಿಯೆ ಸಂಸ್ಥೆಯ ಮುಖ್ಯಸ್ಥ ಹೈಕೋರ್ಟ್ ನ್ಯಾಯವಾದಿ ಮಂಜುನಾಥ್ ಬಾಗೇಪಲ್ಲಿ ಮುಂದುವರೆದು ಮಾತನಾಡಿ ಮೊಟ್ಟಮೊದಲು ಅಸಮಾನತೆ ನಾಗರಿಕತೆ ಹುಟ್ಟಿದಾಗಿನಿಂದಲೂ ಲಿಂಗ ತಾರತಮ್ಯ ನಡೆಯುತ್ತಿದೆ, ಶತಮಾನಗಳಷ್ಟು ಹಳೆಯದಾದ ಲಿಂಗ ತಾರತಮ್ಯವನ್ನು ಹೋಗಲಾಡಿಸಲು ಡಾ:ಬಿ,ಆರ್, ಅಂಬೇಡ್ಕರ್ ಅವರು ಸಂವಿಧಾನದಲ್ಲಿ ಅದರ ಬಗ್ಗೆ ಹೆಚ್ಚು ಒತ್ತು ಕೊಟ್ಟಿದ್ದಾರೆ, ಎಲ್ಲಾ ಅಸಮಾನತೆಗಳನ್ನು ಹೋಗಲಾಡಿಸಲಿಕ್ಕೆ ಬ್ರಿಟಿಷರಿಂದ ಸ್ವಾತಂತ್ರ್ಯ ಪಡೆದ ಬಳಿಕ ಡಾ: ಬಿ,ಆರ್, ಅಂಬೇಡ್ಕರ್ ಅವರು ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಸಂವಿಧಾನ ರಚನೆ ಮಾಡಿದ್ದಾರೆ, ಬುದ್ಧಿವಂತರಾದವರು ಮಾನಸಿಕವಾಗಿ ದುರ್ಬಲರಾದವರನ್ನು ಶೋಷಣೆ ಮಾಡುವುದು ಅಸಮಾನತೆಗೆ ಮೂಲ ಕಾರಣವಾಗಿದೆ, ಅದಕ್ಕಾಗಿ ಮಕ್ಕಳು ಸಂವಿಧಾನದ ಪರಿಕಲ್ಪನೆಗಳನ್ನು ಈ ವಯಸ್ಸಿನಲ್ಲಿ ಅರ್ಥೈಸಿಕೊಂಡು ಅಳವಡಿಸಿಕೊಂಡರೆ ಮುಂದಿನ ದಿನಗಳಲ್ಲಿ ಜವಾಬ್ದಾರಿಯುತ ನಾಗರಿಕರಾಗಿ ಬೆಳೆಯಲು ಸಾಧ್ಯವಾಗುತ್ತದೆ, ನಿಮ್ಮ ಭವಿಷ್ಯವನ್ನು ನೀವೇ ರೂಪಿಸಿಕೊಳ್ಳಬಹುದು, ಭ್ರಾತೃತ್ವ ಎನ್ನುವುದು ಕೂಡ ಸಂವಿಧಾನದ ಪೀಠಿಕೆಯಲ್ಲಿ ಪ್ರಸ್ತಾಪಿಸಲಾದ ಅಂಶ, ಹಾಗಾಗಿ ಎಲ್ಲರೂ ಸಹೋದರತ್ವದ ತತ್ವದಲ್ಲಿ ಜೀವನ ಮಾಡಿದರೆ ಸಮಾಜದಲ್ಲಿ ಯಾವುದೇ ಅಶಾಂತಿ ಇಲ್ಲದೆ ಸಹಜೀವನ ಮಾಡಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಭ್ರಾತೃತ್ವ ಸಮಿತಿಯ ಜಿಲ್ಲಾ ಸಂಚಾಲಕ ಎಸ್,ಎ,ಗಫಾರ್, ಪ್ರಕ್ರಿಯೆ ಸಂಸ್ಥೆಯ ಕಾರ್ಯಕರ್ತ ವೀರೇಶ್ ತೆಗ್ಗಿನಮನಿ, ಪಾರ್ಸ್ವರ್ ಅಸೋಸಿಯೇಷನ್ ಜಿಲ್ಲಾ ಅಧ್ಯಕ್ಷ ಚನ್ನಬಸಪ್ಪ ಅಪ್ಪಣ್ಣವರ್, ಮುಖ್ಯಶಿಕ್ಷಕಿ ಶ್ರೀಮತಿ ರೇಣುಕಾ ಆರ್,ಹಚ್, ಅತ್ತನೂರ, ಶಾಲಾ ಮಕ್ಕಳು ಪಾಲ್ಗೊಂಡಿದ್ದರು.

# ಬಾಧಿತ ಪ್ರದೇಶಗಳಲ್ಲಿ ಹೆಚ್ಚಿನ ಜಾಗೃತಿ ಮೂಡಿಸಿ: ಜಿಲ್ಲಾಧಿಕಾರಿ ನಲಿನ್ ಅತುಲ್

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜ.30:ಜಿಲ್ಲೆಯಲ್ಲಿ ಕುಷ್ಠರೋಗ ಪ್ರಕರಣಗಳು ಕಂಡುಬಂದ ಪ್ರದೇಶಗಳಲ್ಲಿ ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿದರು.



ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ–2025ರ ಕಾರ್ಯಕ್ರಮದ ಜಿಲ್ಲಾ ಮಟ್ಟದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಕುಷ್ಠರೋಗ ಪ್ರಕರಣಗಳು ಪತ್ತೆಯಾದ ಪ್ರದೇಶ, ವಾರ್ಡುಗಳಿಗೆ ಹೆಚ್ಚಿನ ಆದ್ಯತೆ ನೀಡಿ. ಕುಷ್ಠರೋಗ ಸಂಪೂರ್ಣ ವಾಸಿಯಾಗಬಲ್ಲ ರೋಗವಾಗಿದ್ದು, ವೈಜ್ಞಾನಿಕವಾಗಿ ನಿರಂತರ ಚಿಕಿತ್ಸೆಯ ಅಗತ್ಯವಿದೆ ಎಂಬುದನ್ನು ರೋಗಿಗೆ ಹಾಗೂ ರೋಗಿಯ ಕುಟುಂಬಕ್ಕೆ ಮನದಟ್ಟು ಮಾಡಬೇಕು. ರೋಗದ ಲಕ್ಷಣಗಳು ಕಂಡುಬರುವವರಿಗೆ ಸಮೀಪದ ಸರ್ಕಾರಿ ಆಸ್ಪತ್ರೆಗಳಲ್ಲಿ ಪರೀಕ್ಷೆ ಮತ್ತು ಚಿಕಿತ್ಸೆ ಪಡೆದುಕೊಳ್ಳುವಂತೆ ಅರಿವು ಮೂಡಿಸಬೇಕು. ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಮೂಲಕ ನಗರ ಮತ್ತು ಗ್ರಾಮೀಣ ಭಾಗದಲ್ಲಿ ಜಾಗೃತಿ ಅಭಿಯಾನವನ್ನು ಹಮ್ಮಿಕೊಳ್ಳಬೇಕು. ಜಿಲ್ಲೆಯ ಆಶ್ರಮ ಶಾಲೆ, ಹಾಸ್ಟೆಲ್‌ಗಳಲ್ಲಿ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಶಾಲೆಗಳಲ್ಲಿನ ಪ್ರರ್ಥನೆ ಸಂದರ್ಭದಲ್ಲಿ ರೋಗದ ಬಗ್ಗೆ ಅರಿವು ಮೂಡಿಸಬೇಕು ಎಂದರು.

ಜಿಲ್ಲೆಯಲ್ಲಿ ಕಂಡುಬಂದ ಕುಷ್ಠರೋಗ ಪ್ರಕರಣ, ರೋಗಿಯ ಚಿಕಿತ್ಸೆ, ನಿರಂತರ ಚಿಕಿತ್ಸೆಯ ನಂತರ ಗುಣಮುಖರಾದ ಬಗ್ಗೆ ದೃಢೀಕರಣ, ರೋಗಿಗಳಿಗೆ ಸಿಗಬೇಕಾದ ಸರ್ಕಾರದ ಸೌಲಭ್ಯಗಳು ದೊರೆತಿರುವ ಬಗ್ಗೆ ಹಾಗೂ ನಿರಂತರ ಚಿಕಿತ್ಸೆ ನಂತರ ಅಥವಾ ಸಮರ್ಪಕ ಚಿಕಿತ್ಸೆಯ ಕೊರತೆಯಿಂದಾಗಿ ರೋಗ ವಾಸಿಯಾಗದೆ ಇರುವ ಕುರಿತಾಗಿ 5 ವರ್ಷಗಳ ಒಟ್ಟಾರೆ ತಾಲ್ಲೂಕುವಾರು ವರದಿಯನ್ನು ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ ಪ್ರಕಾಶ ಹೆಚ್. ಅವರು ಮಾತನಾಡಿ, ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನವನ್ನು ಜನವರಿ 30 ರಿಂದ ಫೆಬ್ರವರಿ 13 ರವರೆಗೆ ಹಮ್ಮಿಕೊಳ್ಳಲಾಗಿದ್ದು, ಈ ವರ್ಷದ ಘೋಷವಾಕ್ಯ "ಒಟ್ಟಾಗಿ ನಾವು ಕುಷ್ಠರೋಗದ ಬಗ್ಗೆ ಜಾಗೃತಿ ಮೂಡಿಸೋಣ, ತಪ್ಪುಕಲ್ಪನೆಗಳನ್ನು ಹೋಗಲಾಡಿಸೋಣ ಮತ್ತು ಕುಷ್ಠರೋಗದಿಂದ ಬಾಧಿತರಾದ ಎಲ್ಲರನ್ನು ಹಿಂದುಳಿಯಂತೆ ನೋಡಿಕೊಳ್ಳೋಣ" ಎಂಬುದಾಗಿದೆ. ಜನರಲ್ಲಿ ಪಾದಗಳ ದೌರ್ಬಲ್ಯ, ಬೆರಳುಗಳ ದೌರ್ಬಲ್ಯ, ಕಣ್ಣು ಮುಚ್ಚುವಲ್ಲಿ ತೊಂದರೆ, ದೇಹದ ಮೇಲೆ ಸ್ಪರ್ಶಜ್ಞಾನವಿಲ್ಲದ ಮಚ್ಚೆಗಳು ಹಾಗೂ ದೇಹದ ಮೇಲೆ ಯಾವುದೇ ಅಸಹಜ ವ್ಯತ್ಯಾಸಗಳು ಕಂಡುಬಂದಲ್ಲಿ ಅಂತಹವರಿಗೆ ಸಮೀಪದ ಸರ್ಕಾರಿ ಆಸ್ಪತ್ರೆಗೆ ತೆರಳಿ ಪರೀಕ್ಷೆಗೆ ಒಳಪಡುವಂತೆ ಅರಿವು ಮೂಡಿಸಲಾಗುತ್ತಿದೆ ಎಂದರು.

ಸಭೆಯಲ್ಲಿ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ–2025ರ ಪೋಸ್ಟರ್‌ಗಳನ್ನು ಬಿಡುಗಡೆಗೊಳಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಲಿಂಗರಾಜು ಟಿ., ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ.ಪ್ರಕಾಶ ವಿ., ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ ನಂದಕುಮಾರ, ಜಿಲ್ಲಾ ಕ್ಷಯ–ರೋಗ ನಿರ್ಮೂಲನಾಧಿಕಾರಿ ಡಾ.ಶಶೀಧರ್ ಎ., ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ವೆಂಕಟೇಶ, ತಾಲ್ಲೂಕು ಆರೋಗ್ಯಾಧಿಕಾರಿಗಳಾದ ಡಾ.ರಾಮಾಂಜನೇಯ, ಡಾ.ಗೌರಿಶಂಕರ ಹಾಗೂ ಡಾ.ಅಮರೇಶ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ಪೂಜಾರ ಸೇರಿದಂತೆ ಇತರೆ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

CITATION
IN THE COURT OF THE PRL. CIVIL JUDGE AND JMFC., AT HUMNABAD
CRL. MISC. NO.2337/2024

Petitioners:-
1) Baburao Biradar S/o Late. Sakaram Biradar Age 51 Yrs Occu Business
2) Dattu S/o Baburao Biradar Age 35 Yrs Occu Business
3) Dhanraj S/o Baburao Biradar Age 30 Yrs Occu Private work
All R/o Gada Dall Mill Humnabad Tq Humnabad Dist Bidar.
4) Radha D/o Baburao Biradar Age 27 Yrs Occu Student
R/o Town Humnabad Tq Humnabad dist Bidar.

Respondent:-
The Registrar of Birth and Death through The Chief officer TMC Humnabad

Sub:- Petition U/Sec 13(3) of Birth and Death Registration Act 1969

Whereas the above named petitioners have filed the petition under section 13(3) of Birth and Death Registration Act 1969 praying this Honorable court to issue Death certificate sons of petitioner No.1 to 3 and Daughters of Petitioner No.4 namely; Late. Sakaram S/o Hanamanth who died on 05-10-1980 at Town Humnabad Tq Humnabad Dist Bidar. The petitioners claiming the death certificate of said Sakaram for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 05-03-2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 21-01-2025
//By order of the court//
sd/-
Chief Ministerial Officer,
Prl.Civil Judge & JMFC Humnabad.

CITATION
IN THE COURT OF THE PRL. CIVIL JUDGE AND JMFC., AT HUMNABAD
CRL. MISC. NO.2339/2024

Petitioners:-
1) Baburao Biradar S/o Late. Sakaram Biradar Age 51 Yrs Occu Business
2) Dattu S/o Baburao Biradar Age 35 Yrs Occu Business
3) Dhanraj S/o Baburao Biradar Age 30 Yrs Occu Private work
All R/o Gada Dall Mill Humnabad Tq Humnabad Dist Bidar.
4) Radha D/o Baburao Biradar Age 27 Yrs Occu Student
R/o Town Humnabad Tq Humnabad dist Bidar.

Respondent:-
The Registrar of Birth and Death through The Chief officer TMC Humnabad

Sub:- Petition U/Sec 13(3) of Birth and Death Registration Act 1969

Whereas the above named petitioners have filed the petition under section 13(3) of Birth and Death Registration Act 1969 praying this Honorable court to issue Death certificate sons of petitioner No.1 to 3 and Daughters of Petitioner No.4 namely; Late. Janabai W/o Late. Sakaram who died on 11-02-2021 at Town Humnabad Tq Humnabad Dist Bidar. The petitioners claiming the death certificate of said Janabai for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 05-03-2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 21-01-2025
//By order of the court//
sd/-
Chief Ministerial Officer,
Prl.Civil Judge & JMFC Humnabad.

# ಪುಣ್ಯಸ್ನಾನ ಸನಾತನ ಧರ್ಮದ ಮೂಲ ಧ್ಯೇಯ: ಗುರುನಾಥ ಜ್ಯಾಂತಿಕರ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 30 : ಪ್ರವಾಸಿ ಸೌಹಾರ್ದ ಸಹಕಾರಿ ನಿಯಮಿತ ವತಿಯಿಂದ ಉತ್ತರ ಪ್ರದೇಶದ ಪ್ರಯಾಗರಾಜ್‌ನಲ್ಲಿನಡೆಯುತ್ತಿರುವ ಮಹಾ ಕುಂಭ ಮೇಳಕ್ಕೆ ಮೂರು ಟ್ರಾವೆಲ್ಸ್‌ಗಳಲ್ಲಿ 108 ಜನ ಯಾತ್ರಿಕರು ಸಾಧು ಸಂತರ ದರ್ಶನ ಮತ್ತು ಪುಣ್ಯಸ್ನಾನಕ್ಕಾಗಿ ತೆರಳುತ್ತಿದ್ದೇವೆ ಎಂದು ಪ್ರವಾಸಿ ಸೌಹಾರ್ದ ಸಹಕಾರಿ ನಿಯಮಿತ ಅಧ್ಯಕ್ಷರಾದ ಗುರುನಾಥ ಜ್ಯಾಂತಿಕರ್ ತಿಳಿಸಿದರು.

ನಗರದ ನೆಹರೂ ಮೈದಾನದಿಂದ ಗುರುವಾರ ಮೂರು ಬಸ್‌ಗಳಲ್ಲಿ ಪ್ರಯಾಗರಾಜ್‌ನಲ್ಲಿನಡೆಯುತ್ತಿರುವ ಮಹಾ ಕುಂಭಮೇಳಕ್ಕೆ ತೆರಳುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದರು.

144 ವರ್ಷಗಳ ನಂತರ ಮಹಾ ಕುಂಭಮೇಳ ಒದಗಿ ಬಂದಿದೆ. ಇದು ನಮ್ಮೆಲ್ಲರ ಪುಣ್ಯವಾಗಿದೆ. ಎಲ್ಲರೂ ಸ್ವಯಂಪ್ರೇರಿತರಾಗಿ ತಯಾರಾಗಿದ್ದು, ಓಂಕಾರೇಶ್ವರ, ಉಜ್ಜೈನ್, ವಾರಣಾಸಿ, ಆಯೋಧ್ಯೆ ವೀಕ್ಷಣೆ ಮಾಡಿ ಕೊನೆಗೆ ಪುಣ್ಯ ಸ್ನಾನಕ್ಕಾಗಿ ಮಹಾ ಕುಂಭಮೇಳಕ್ಕೆ ಹೋಗುತ್ತಿದ್ದೇವೆ. ಪ್ರವಾಸಿ ಸೌಹಾರ್ದ ಸಹಕಾರಿ ನಿಯಮಿತ ವತಿಯಿಂದ ಯಾತ್ರಾರ್ಥಿಗಳಿಗೆ ಶುಭವಾಗಲಿ, ಯಶಸ್ವಿಯಾಗಿ ಯಾತ್ರೆಮುಗಿಸಿಕೊಂಡು ಬರುತ್ತೇವೆ ಎಂದು ಶುಭ ಹಾರೈಸಿದರು.

ಪ್ರವಾಸಿ ಸೌಹಾರ್ದ ಸಹಕಾರಿ ನಿಯಮಿತ ನಿರ್ದೇಶಕ ಜಗನ್ನಾಥ ಕರಂಜಿ ಮಾತನಾಡಿ, ಸಮುದ್ರ ಮಂಥನದಲ್ಲಿ ಅಮೃತ ಹೊರಬಂದಾಗ ನಾಲ್ಕು ಸ್ಥಳಗಳಾದ ಪ್ರಯಾಗರಾಜ್, ನಾಸಿಕ್, ಹರಿದ್ವಾರ್‌ದಲ್ಲಿಯೂ ಮಾನವರಿಗೆ ಶುಭವಾಗಲೆಂದು ಕುಂಭ ಮೇಳ ನಡೆಸಲಾಗುತ್ತದೆ. ಈ ಬಾರಿ ಪ್ರಯಾಗ್‌ರಾಜ್‌ನಲ್ಲಿ ಮಹಾಕುಂಭ ಮೇಳ ನೋಡುವುದೇ ಒಂದು ಸೌಭಾಗ್ಯ. ಇಲ್ಲಿ ಪುಣ್ಯಸ್ನಾನ ಮಾಡಿದರೆ ಪಾಪಗಳು ಪರಿಹಾರವಾಗಿ ಬದುಕು ಸಾರ್ಥಕವಾಗುತ್ತದೆ ಎಂಬುದು ಸನಾತನ ಧರ್ಮದ ಮಹಾ ನಂಬಿಕೆಯಾಗಿದೆ. ಯಾತ್ರಾರ್ಥಿಗಳಿಗೆ ಶುಭವಾಗಲಿ ಎಂದು ಕರಂಜೆ ತಿಳಿಸಿದರು.

ಬೀದರ ಲಾಡಗೇರಿಯ ಹಿರೇಮಠ ಸಂಸ್ಥಾನದ ಪೀಠಾಧ್ಯಕ್ಷರಾದ ಪೂಜ್ಯ ಶ್ರೀ ಷ.ಬ್ರ. ಗಂಗಾಧರ ಶಿವಾಚಾರ್ಯರು ಯಾತ್ರೆಗೆ ಧ್ವಜ ತೋರಿಸುವ ಮೂಲಕ ಚಾಲನೆ ನೀಡಿದರು.

ಇದೇ ವೇಳೆ ಪೂಜಾ ಬಸ್ ಮಾಲಿಕರಾದ ರಾಜಪ್ಪ ಪಾಟೀಲ ಭಾಲ್ಕಿ, ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷ ಬಾಬುರಾವ ಕಾರಬಾರಿ, ಮಾಜಿ ಜಿ.ಪಂ ಸದಸ್ಯ ರಾಜಶೇಖರ ನಾಗಮೂರ್ತಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ, ಪ್ರವಾಸಿ ಸೌಹಾರ್ದ ಸಹಕಾರಿ ನಿಯಮಿತದ ನಿರ್ದೇಶಕರಾದ ಶ್ರೀಕಾಂತ ಸ್ವಾಮಿ ಸೋಲಪುರ, ನಾಗಶೆಟ್ಟಿ ಪಾಟೀಲ, ಸಂಜೀವಕುಮಾರ ಸಜ್ಜನಶೆಟ್ಟಿ, ಶಿವಬಸವ ಚನಮಲ್ಲೆ, ಸಂಜೀವಕುಮಾರ ಪಾಟೀಲ, ಸಂಜಯ್ ಕ್ಯಾಸಾ, ಕಾರ್ತಿಕ ಮಠಪತಿ, ಶ್ರೀಕಾಂತ ಪಾಟೀಲ, ಗುಂಡು ಬಿರಾದಾರ, ಅಮೃತಪ್ಪ, ಅನುಸೂಯಾ ಬಾಡದ್, ವಾಣಿ ಬಿರಾದಾರ, ರಾಜೇಶ್ವರಿ ಸಿಂಧೋಲ್, ಶಕುಂತಲಾ ಸ್ವಾಮಿ ಸೋಲಪುರ, ಸಿದ್ದಮ್ಮ ಮಠ ಸೇರಿದಂತೆ ಇನ್ನಿತರ 108 ಜನ ಯಾತ್ರಾರ್ಥಿಗಳು, ಬಸ್‌ನ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಶಿವಕುಮಾರ ಅವರದ್ದು ಮಾತೃಹೃದಯ: ಡಾ. ರಾಜಾಸಮರಸೇನ ಮೋದಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 30 : ಶಿಸ್ತು ಸಮಯಪಾಲನೆ ಮತ್ತು ಸರಳ ಸಜ್ಜನಿಕೆಗೆ ಇನ್ನೊಂದು ಹೆಸರೇ ಡಾ. ಶಿವಕುಮಾರ ಉಪ್ಪೆಯವರಾಗಿದ್ದಾರೆ. ಸದಾ ಹಸನ್ಮುಖಿ, ವಿದ್ಯಾರ್ಥಿಗಳಲ್ಲಿ ಪ್ರೀತಿ, ಸಹಕಾರ ಮನೋಭಾವನೆ ಸೇರಿದಂತೆ ಮಾನವೀಯ ಮೌಲ್ಯಗಳ ಸಾಕಾರ ಮೂರ್ತಿ ಉಪ್ಪೆಯವರಾಗಿದ್ದಾರೆ ಎಂದು ಕಲಬುರಗಿಯ ಪ್ರಾಧ್ಯಾಪಕ ಡಾ. ರಾಜಾಸಮರಸೇನ ಮೋದಿ ತಿಳಿಸಿದರು.



ಸ್ನಾತಕೋತ್ತರ ಇತಿಹಾಸ ಅಧ್ಯಯನ ಮತ್ತು ಸಂಶೋಧನಾ ವಿಭಾಗ ಮತ್ತು ಸರಕಾರಿ ಪ್ರಥಮ ದರ್ಜೆ ಕಾಲೇಜು ಬೀದರ ವತಿಯಿಂದ ಇತಿಹಾಸ ವಿಭಾಗ ಮುಖ್ಯಸ್ಥರು ಹಾಗೂ ಪ್ರಾಧ್ಯಾಪಕರಾದ ಡಾ. ಶಿವಕುಮಾರ ಉಪ್ಪೆಯವರ ಸೇನಾ ನಿವೃತ್ತಿ ಪ್ರಯುಕ್ತ ಆಯೋಜಿಸಿದ ಬಿಳ್ಕೊಡುಗೆ ಸಮಾರಂಭದಲ್ಲಿ ಭಾಗವಹಿಸಿ ತಮ್ಮ ವಿಚಾರಗಳನ್ನು ಪ್ರತಿಪಾದಿಸಿದರು. ಉಪ್ಪೆಯವರು ತಮ್ಮ ಬದುಕಿನಲ್ಲಿ ಹೊಂದಾಣಿಕೆ ಮಾಡಿಕೊಂಡು ಜೀವನ ನಡೆಸಿದ ಉದಾಹರಣೆಯೇ ಇಲ್ಲ. ಸತ್ಯ, ನ್ಯಾಯ ನೀತಿ, ದೇಶಭಕ್ತಿ, ವಿದ್ಯಾರ್ಥಿಗಳಲ್ಲಿ ಪ್ರೀತಿ, ಸಹೋದ್ಯೋಗಿಗಳಲ್ಲಿ ವಿನಯಭಾವ ಅವರ ಬದುಕಿನ ಸೂತ್ರಗಳಾಗಿದ್ದವು ಎಂದು ತಿಳಿಸಿದರು.

ಇನ್ನೋರ್ವ ಪ್ರಾಧ್ಯಾಪಕರಾದ ಅಂಜುಮ್ ನಜ್ಮಾ ಅವರು ಮಾತನಾಡಿ ಡಾ. ಶಿವಕುಮಾರ ಉಪ್ಪೆಯವರು ಯಶಸ್ವಿಯಾಗಿ ತಮ್ಮ ಪ್ರಾಧ್ಯಾಪಕ ವೃತ್ತಿ ಜೀವನವೆಂಬ ಮೊದಲನೇ ಇನ್ನಿಂಗ್ಸ್ ಮುಗಿಸಿದ್ದಾರೆ. ಮುಂದಿನ ಪ್ರವೃತಿ ಜೀವನ ಎಂಬ ಎರಡನೇ ಇನ್ನಿಂಗ್ಸ್ ಪ್ರಾರಂಭಕ್ಕೆ ಸಜ್ಜಾಗಿದ್ದಾರೆ. ಅವರು ಗುರುತಿಸಿಕೊಂಡ ಸಂಘಟನೆಗಳಾದ ಆರ್‌ಎಸ್‌ಎಸ್ ಮತ್ತು ಇನ್ನಿತರ ದೇಶಸೇವೆ ಮಾಡುವ ಸಂಸ್ಥೆಗಳೊಂದಿಗೆ ಅವರ ದೇಶಸೇವೆ, ಸಮಾಜಸೇವೆ ಮತ್ತು ಇನ್ನಿತರ ಅವರಿಗೆ ತೃಪ್ತಿ ಕೊಡುವ ಅರ್ಥಪೂರ್ಣ ಜೀವನ ಯಶಸ್ವಿಯಾಗಿ ಸಾಗಲಿ. ದೇವರು ಅವರಿಗೆ ಸೇವೆ ಮಾಡಲು ಇನ್ನಷ್ಟು ಆಯುಷ್ಯ ಆರೋಗ್ಯ ನೀಡಿ ಕಾಪಾಡಲಿ ಎಂದು ಶುಭ ಹಾರೈಸಿದರು.

ಇದೇ ವೇಳೆ ಅವರ ಪಿಎಚ್‌ಡಿ ಹಾಗೂ ಪದವಿ ವಿದ್ಯಾರ್ಥಿಗಳು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು. ಇದೇ ವೇಳೆ ಭಾವುಕರಾಗಿ ಮಾತನಾಡಿದ ಪ್ರಾಧ್ಯಾಪಕರಾದ ಡಾ. ಶಿವಕುಮಾರ ಉಪ್ಪೆಯವರು ನನ್ನ ಜೀವನದಲ್ಲಿ ಶಿಕ್ಷಕ ವೃತ್ತಿಗೆ ಇಚ್ಚೇಪಟ್ಟು ಬಂದೆ. ವಿದ್ಯಾರ್ಥಿಗಳ ಪ್ರೀತಿಗಳಿಸಿಕೊಂಡೆ. ಸಹೋದ್ಯೋಗಿಗಳ ವಿಶ್ವಾಸ ಗಳಿಸಿಕೊಂಡೆ. ಎಲ್ಲಕ್ಕಿಂತ ಹೆಚ್ಚಾಗಿ ಎಲ್ಲರೂ ನನ್ನ ಕೈಬಿಟ್ಟಾಗ ನನ್ನ ಧರ್ಮಪತ್ನಿ ಸಂಗೀತಾ ನನ್ನ ಕೈಹಿಡಿದು ಮುನ್ನಡೆಸಿದರು. ನನ್ನ ಸಮವೇಗದಲ್ಲಿ ನಡೆದು ಹೆಜ್ಜೆಯಲ್ಲಿ ಹೆಜ್ಜೆಯಿಟ್ಟು ತಿದ್ದಿ ತೀಡಿ ಮುನ್ನಡೆಸಿದರು. ಹೀಗಾಗಿ ಇಲ್ಲಿವರೆಗೆ ನನ್ನ ಬದುಕು ಸಾಗಿತು. ಬದುಕಿನ ಪಯಣದಲ್ಲಿ ತಂದೆ–ತಾಯಿಗಳ ಸಹಕಾರ ಮತ್ತು ಬೆನ್ನ ಹಿಂದೆ ನಿಂತು ಸಹಕಾರ ನೀಡುವ ಸ್ನೇಹಿತರಿಂದಲೇ ಸಾಧನೆಗೆ ಕಾರಣವಾಯಿತು. ಮುಂದಿನ ವಿದ್ಯಾರ್ಥಿಗಳು ದೇಶಸೇವೆಯನ್ನು ಮೈಗೂಡಿಸಿಕೊಳ್ಳಬೇಕು. ಶಿಸ್ತು, ಸಮಯಪಾಲನೆ, ಸಹಕಾರ, ಪ್ರೀತಿ, ವಿಶ್ವಾಸ, ನಂಬಿಕೆ ಮತ್ತು ಸತತ ಪರಿಶ್ರಮದೊಂದಿಗೆ ಸಾಧನೆಯ ಕಡೆಗೆ ಹೆಜ್ಜೆಯಿಡಬೇಕು. ಅಂದಾಗ ಮಾತ್ರ ಬದುಕಿನಲ್ಲಿ ಯಶಸ್ವಿಯಾಗಲು ಸಾಧ್ಯವಾಗುತ್ತದೆ ಎಂದು ತಮ್ಮ ವೃತ್ತಿನ ಜೀವನದ ಕೊನೆಯ ಭಾಷಣದಲ್ಲಿ ಉಪ್ಪೆಯವರು ಭಾವುಕರಾಗಿ ಮಾತನಾಡಿದರು.

ಇದೇ ವೇಳೆ ಅವರ ವೃತ್ತಿ ಜೀವನದ ಸಹೋದ್ಯೋಗಿಗಳು, ವಿದ್ಯಾರ್ಥಿ ವಿದ್ಯಾರ್ಥಿನಿಯರು, ಸ್ನೇಹಿತರು, ಆತ್ಮೀಯರು ಉಪಸ್ಥಿತರಿದ್ದರು.

# ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷರಾಗಿ ಶಿವಶರಣಪ್ಪ ಮಾಳಗೆ







ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 30 : ಇಲ್ಲಿಯ ಪ್ರಾಥಮಿಕ ಸಹಕಾರ, ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನೂತನ ಅಧ್ಯಕ್ಷರಾಗಿ ಶಿವಶರಣಪ್ಪ (ರಾಜಕುಮಾರ) ಮಾಳಗೆ ಹಾಗೂ ಉಪಾಧ್ಯಕ್ಷರಾಗಿ ನಾಗರಾಜ ಪಾಟೀಲ ಕೊಳಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ನಗರದ ಬ್ಯಾಂಕ್‌ನಲ್ಲಿ ಮಂಗಳವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ತಲಾ ಒಬ್ಬರೇ ನಾಮಪತ್ರ ಸಲ್ಲಿಸಿದ ಕಾರಣ ಎರಡೂ ಸ್ಥಾನಗಳಿಗೆ ಅವಿರೋಧ ಆಯ್ಕೆ ನಡೆಯಿತು. ಚುನಾವಣಾಧಿಕಾರಿಯಾಗಿದ್ದ ತಹಶೀಲ್ದಾರ್ ಡಿ.ಜಿ. ಮಹಾತ್ ಅವರು ಆಯ್ಕೆ ಪ್ರಕಟಿಸುತ್ತಿದ್ದಂತೆಯೇ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಬೆಂಬಲಿಗರು ಸಂಭ್ರಮ ಆಚರಿಸಿದರು. ಗುಲಾಲು ಎರಚಿ, ಶಾಲು ಹೊದಿಸಿ, ಹಾರ ಹಾಕಿ ಮಾಳಗೆ ಹಾಗೂ ಪಾಟೀಲ ಅವರನ್ನು ಸನ್ಮಾನಿಸಿದರು.

ಅಲಿಯಂಬರ್ ಕ್ಷೇತ್ರದಿಂದ ಎರಡನೇ ಬಾರಿಗೆ ನಿರ್ದೇಶಕರಾಗಿ ಆಯ್ಕೆಯಾದ ರಾಜಕುಮಾರ ಮಾಳಗೆ ಅವರಿಗೆ ಮೊದಲ ಬಾರಿಗೆ ಅಧ್ಯಕ್ಷ ಸ್ಥಾನ ಒಲಿದಿದೆ.

ಅಧ್ಯಕ್ಷನಾಗಿ ಆಯ್ಕೆಯಾಗಿದ್ದಕ್ಕೆ ಸಂತಸವಾಗಿದೆ. ಎಲ್ಲ ನಿರ್ದೇಶಕರ ಜತೆಗೂಡಿ ರೈತರ ಹಿತರಕ್ಷಣೆ ಹಾಗೂ ಬ್ಯಾಂಕ್ ಅಭಿವೃದ್ಧಿಗೆ ಸರ್ವ ಪ್ರಯತ್ನ ನಡೆಸುವೆ ಎಂದು ಯುವ ಉದ್ಯಮಿಯೂ ಆದ ಮಾಳಗೆ ಹೇಳಿದರು.

ಸನ್ಮಾನ: ನೂತನ ಅಧ್ಯಕ್ಷ ಮಾಳಗೆ ಅವರನ್ನು ಕಲಬುರಗಿ, ಬೀದರ್, ಯಾದಗಿರಿ ಹಾಲು ಒಕ್ಕೂಟದ ಮಾಜಿ ಅಧ್ಯಕ್ಷರೂ ಆದ ಹಾಲಿ ನಿರ್ದೇಶಕ ಮಲ್ಲಿಕಾರ್ಜುನ ಬಿರಾದಾರ (ಪರಿಹಾರ), ನಿರ್ದೇಶಕರಾದ ರಾಜಕುಮಾರ ಕರಂಜಿ ಗಾದಗಿ, ನೀಲಕಂಠರಾವ್ ಪಾಟೀಲ ಮೈಲೂರು, ಮಾಣಿಕರಾವ್ ಯಾಬಾ ಕಮಠಾಣ, ವಿಜಯಕುಮಾರ ಬುಯ್ಯಾ ಮರಕಲ್, ಮುಖಂಡರಾದ ಸಂಗಮೇಶ ಪಾಟೀಲ ಅಲಿಯಂಬರ್, ರಾಜಕುಮಾರ ಶಿವಪೂಜೆ ಚಿಲ್ಲರ್ಗಿ, ವಿರೂಪಾಕ್ಷ ಗಾದಗಿ, ವೀರಶೆಟ್ಟಿ ಪಟ್ನೆ, ಸಂಜುಕುಮಾರ ಸಿದ್ದಾಪುರ, ಸಿದ್ದೋಬಾ ಲೌಟೆ ಮೊದಲಾದವರು ಸನ್ಮಾನಿಸಿದರು.

## ಫೆ. 1 ಮತ್ತು 2 ರಂದು ನೂಪುರ ರಜತ ಮಹೋತ್ಸವ

# ಪಾಲ್ಗೊಳ್ಳಲು ಉಷಾ ಪ್ರಭಾಕರ ಕರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 30 : ನೂಪುರ ನೃತ್ಯ ಅಕಾಡೆಮಿ (ರಿ) ಬೀದರ ವತಿಯಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಫೆ.1 ಮತ್ತು 2 ರಂದು ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಎರಡು ದಿವಸಗಳ ಕಾಲ ನೂಪುರ ರಜತ ಸಂಭ್ರಮ ಹಾಗೂ ಸಾಧಕರಿಗೆ ಸನ್ಮಾನ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಸಾರ್ವಜನಿಕರು ತಪ್ಪದೇ ಪಾಲ್ಗೊಳ್ಳಬೇಕೆಂದು ನೂಪುರ ನೃತ್ಯ ಅಕಾಡೆಮಿಯ ನಿರ್ದೇಶಕಿ ಶ್ರೀಮತಿ ಉಷಾ ಪ್ರಭಾಕರ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು ಫೆ. 1 ರಂದು ಶನಿವಾರ ಸಾ. 4 ಕ್ಕೆ ಜೆಮಿನಿ ಗ್ರಾಫಿಕ್ಸ್ ಬೀದರನ ಅಧ್ಯಕ್ಷೆ ವೀಣಾ ಜಿ. ಶೆಣ್ಯೆ ಉದ್ಘಾಟನೆ ಮಾಡಲಿದ್ದಾರೆ. ಪುಷ್ಪಾರ್ಚನೆಯನ್ನು ಕ.ಸಾ.ಪ. ಅಧ್ಯಕ್ಷ ಸುರೇಶ ಚನಶೆಟ್ಟಿ ಮಾಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಖ್ಯಾತ ಎಲುಬು ಮತ್ತು ಕೀಲು ತಜ್ಞ ಡಾ. ಜಿ.ಬಿ. ಮಲ್ಲಿಕಾರ್ಜುನ, ತಜ್ಞ ವೈದ್ಯ ಡಾ. ಶ್ರೀಕಾಂತ ಚಿಂಚೋಳಿಕರ, ಕಾಜಲ್ ಈಶ್ವರಸಿಂಗ್ ಠಾಕೂರ್ ಆಗಮಿಸಲಿದ್ದಾರೆ.

ಅಂದು ಸಾ. 5–30 ಕ್ಕೆ ಭಾಲ್ಕಿಯ ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು ಆಶೀರ್ವಚನ ನೀಡಲಿದ್ದಾರೆ. ದಿವ್ಯ ಸಾನಿಧ್ಯವನ್ನು ಮಂತ್ರಮಹರ್ಷಿ ಪೂಜ್ಯ ಸದ್ಗುರುಜಿ ವಹಿಸಲಿದ್ದಾರೆ. ಉದ್ಘಾಟನೆ ಸಂಸದ ಸಾಗರ ಖಂಡ್ರೆ ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ನಿರ್ದೇಶಕಿ ಡಾ. ಗೀತಾ ಈಶ್ವರ ಖಂಡ್ರೆ, ಹಿರಿಯ ರಂಗಕರ್ಮಿ ಶ್ರೀನಿವಾಸ ಜಿ. ಕಪ್ಪಣ್ಣ, ಸಿದ್ರಾಮಪ್ಪ ಮಾಸಿಮಾಡೆ, ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ, ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಿದ್ರಾಮ ಶಿಂಧೆ, ಡಾ. ಆರತಿ ರಘು, ಪೂಜಾ ಜಾರ್ಜ್ ಭಾಗವಹಿಸಲಿದ್ದಾರೆ.

ಅಂದು ರಾ. 7–30 ಕ್ಕೆ ಕುಟುಂಬದಲ್ಲಿ ಒಡಕು ಹರಟೆ ಕಟ್ಟೆ ಕಾರ್ಯಕ್ರಮ ಶ್ರೀಮತಿ ಮಂಗಲಾ ಭಾಗವತ್ ಅವರ ನೇತೃತ್ವದಲ್ಲಿ ಜರುಗಲಿದೆ.

ಚಿಣ್ಣರ ಗೆಜ್ಜೆ ನಾಟ್ಯೋತ್ಸವ, ಸಾಧಕರಿಗೆ ನೂಪುರ ರಜ–ತ ರತ್ನ ಪ್ರಶಸ್ತಿ ಸನ್ಮಾನ ಜರುಗಲಿದೆ.

ಫೆ. 2 ರಂದು ಸಾ. 4 ಗಂಟೆಗೆ ಗೀತಾ ಎಂ. ಅವರಿಂದ ಸಾಮೂಹಿಕ ಭಗವದ್ಗೀತೆ ಗಾಯನ, ವಿವಿಧ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

ಸಾ. 6 ಗಂಟೆಗೆ ಜರುಗುವ ಸಮಾರೋಪ ಸಮಾರಂಭದ ದಿವ್ಯ ಸಾನಿಧ್ಯವನ್ನು ಬ್ರಹ್ಮಾಕುಮಾರಿ ಕೇಂದ್ರದ ಬಿಕೆ ಪ್ರತಿಮಾ ಬೆಹೆನ್ ಜೀ, ಬಸವ ಸೇವಾ ಪ್ರತಿಷ್ಠಾನದ ಡಾ. ಗಂಗಾಂಬಿಕಾ ಅಕ್ಕ ವಹಿಸಲಿದ್ದಾರೆ.

ಘನ ಉಪಸ್ಥಿತಿಯನ್ನು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಸೋಮಶೇಖರ ಬಿರಾದಾರ, ಡಾ. ರಾಜಕುಮಾರ ಹೆಬ್ಬಾಳೆ, ರಾಮಕೃಷ್ಣನ್ ಸಾಳೆ, ಡಾ. ಸಿ.ಎಸ್. ಮಾಲಿಪಾಟೀಲ ಆಗಮಿಸಲಿದ್ದಾರೆ.

ಕೊನೆಯಲ್ಲಿ ಸಾಮಾಜಿಕ ಮತ್ತು ಉದ್ಯಮ ಕ್ಷೇತ್ರದ ಸಾಧಕರಿಗೆ ಸನ್ಮಾನ ನೆರವೇರಲಿದೆ ಎಂದು ಉಷಾ ಪ್ರಭಾಕರ ತಿಳಿಸಿದ್ದಾರೆ.

# ಕರ್ನಾಟಕ ನಿವೃತ್ತ ನೌಕರರ ವೇದಿಕೆಯಿಂದ ಮುಖ್ಯಮಂತ್ರಿಗಳಿಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 30 : ನಾಳೆಯಿಂದ 31.07.2024 ರ ಅವಧಿಯಲ್ಲಿ ಸೇವೆಯಿಂದ ನಿವೃತ್ತರಾದ ನೌಕರರಾಗಿದ್ದು. 6 ನೇ ವೇತನ ಆಯೋಗದ ಲೆಕ್ಕಾಚಾರದ ಅನುಸಾರ ಡಿ.ಸಿ.ಆರ್.ಜಿ. ಕಮ್ಯುಟೇಶನ್, ಗಳಿಕೆ ರಜೆ ನಗದೀಕರಣ (ಆಅಖಉ,ಅಔಒಗಖಿಂಖಿಚಔಓ(ಔಕಖಿಚಔಓ) (5) ,ಇಐ ಇಓಅಂಖಉೂ–ಒಇಓಖ)ಗಳ ನಿವೃತ್ತಿ ಆರ್ಥಿಕ ಸೌಲಭ್ಯವನ್ನು ನೀಡಿದ್ದಾರೆ. ಈ ನಿಟ್ಟಿನಲ್ಲಿ ನಮಗೆ ಆರ್ಥಿಕ ನಷ್ಟ ಉಂಟಾಗಿ ಅನ್ಯಾಯವಾಗಿರುತ್ತದೆ.

ಈ ದಿಸೆಯಲ್ಲಿ ನಾವೂಗಳು ಕರ್ನಾಟಕ ಸರಕಾರದ ಮಾನ್ಯ ಮುಖ್ಯಮಂತ್ರಿಗಳಿಗೆ ಮೇಲಿನ ಅವಧಿಯಲ್ಲಿ ನಿವೃತ್ತರಾದವರಿಗೆ 7 ನೇ ವೇತನ ಆಯೋಗದ ಲೆಕ್ಕಾಚಾರದ ಅನುಸಾರ ಡಿ.ಸಿ.ಆರ್.ಜಿ. ಕಮ್ಯುಟೇಶನ್, ಗಳಿಕೆ ರಜೆ ನಗದೀಕರಣಗಳ ನಿವೃತ್ತಿ ಆರ್ಥಿಕ ಸೌಲಭ್ಯವನ್ನು ನೀಡಬೇಕೆಂದು ಆಗ್ರಹಿಸಿ ದಿನಾಂಕ 30–01–2025 ರಂದು ಮಹಾತ್ಮಾ ಗಾಂಧಿಜಿಯವರ ಪುಣ್ಯ ಸ್ಮರಣೆ ಅಂಗವಾಗಿ ಹುತಾತ್ಮರ ದಿನಾಚರಣೆ ಸಂದರ್ಭದಲ್ಲಿ ಬೀದರ ತಹಶೀಲ್ದಾರರು ಹಾಗೂ ತಾಲ್ಲೂಕು ದಂಡಾಧಿಕಾರಿಗಳು ಇವರ ಮುಖಾಂತರ ಮನವಿ ಪತ್ರ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಬೀದರ ತಾಲ್ಲೂಕಿನಲ್ಲಿ ಬೀದರ ಜಿಲ್ಲಾ ವೇದಿಕೆಯ ಸಂಚಾಲಕರಾದ ಬಾಬುರಾವ ಬಿರಾದಾರ, ಭೀಮಣ್ಣಾ ಹಡಪದ, ನರಸಪ್ಪ ಹಾಲೋಳ್ಳಿ, ರೇವಣಪ್ಪಾ ಪಾಟೀಲ, ವಿ ಎಸ್ ಮಠ, ಈರಣ್ಣಾ ಲೋಣ, ಶಶಿಕಾಂತ, ಅನಿಲ ಕಮಠಾಣಾ, ಮಹ್ಮದ ಅಹಮದ ಹುಸೇನ, ಅಂಬಾದಾಸ, ಶ್ರೀ ನರಸಪ್ಪಾ ಕೀರ್ತಿ, ವಿ ಕೆ ಖಪಲೆ, ಶಿವರಾಜ ಸರ್, ಮಾರುತಿ, ತಾತ್ಯಾರಾವ, ಶ್ರೀಮತಿ ಚುಕ್ಕಮ್ಮಾ, ಶ್ರೀಮತಿ ಸರಸ್ವತಿ. ಶ್ರೀಮತಿ ವೇದಮಣಿ ಶ್ರೀಮತಿ ಶಕುಂತಲಾ ಇವರೆಲ್ಲರ ಜೊತೆ ಸುಮಾರು ಜನರು ಉಪಸ್ಥಿತರಿದ್ದರು.

# ನಿವೃತ್ತ ನೌಕರರ ವೇತನ ತಾರತಮ್ಯ ಹೋಗಲಾಡಿಸಲು ಸಂಸದರಿಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಜ.30: ಪಟ್ಟಣದ ಸಂಸದರ ನಿವಾಸ ಕಚೇರಿಯಲ್ಲಿ, 2022 ರ ಜು.1 ರಿಂದ 2024 ರ ಜು.31 ರ ಒಳಗೆ ನಿವೃತ್ತರಾದ ನೌಕರರ ವೇತನದಲ್ಲಾದ ತಾರತಮ್ಯ ಹೋಗಲಾಡಿಸುವಂತೆ ಆಗ್ರಹಿಸಿ ಗುರುವಾರ ಸಂಸದ ಸಾಗರ ಈಶ್ವರ ಖಂಡ್ರೆಯವರಿಗೆ ಕರ್ನಾಟಕ ನಿವೃತ್ತ ನೌಕರರ ವೇದಿಕೆಯ ಪದಾಧಿಕಾರಿಗಳು ಮನವಿ ಪತ್ರ ಸಲ್ಲಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಸಂಸದ ಸಾಗರ ಈಶ್ವರ ಖಂಡ್ರೆ, ಜು.1 ರ 2022 ರಿಂದ 7ನೇ ವೇತನ ಆಯೋಗ ಜಾ–ರಿಯಾಗಿದೆ. ಆದರೆ 2022 ರ ಜು.1 ರಿಂದ 2024 ರ ಜು.31 ರ ವರೆಗೆ 25 ತಿಂಗಳಲ್ಲಿ ನಿವೃತ್ತಿಯಾದ ನೌಕರರಿಗೆ ಹಳೆಯ ವೇತನ ಆಯೋಗದಂತೆ ನಿವೃತ್ತಿ ವೇತನ ನೀಡಲಾಗಿದೆ. ಇದರಿಂದ ಈ ಸಂದರ್ಭದಲ್ಲಿ ನಿವೃತ್ತಿ ಹೊಂದಿರುವ ನೌಕರರ ವೇತನದಲ್ಲಿ ತುಂಬಾ ವ್ಯತ್ಯಾಸ ವಾಗಿದೆ. ಇದನ್ನು ಸರಿಪಡಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವರಿಗೂ ಹಾಗು ಮುಖ್ಯಮಂತ್ರಿಗಳ ಗಮನಕ್ಕೂ ತಂದು ವೇತನದಲ್ಲಾದ ವ್ಯತ್ಯಾಸವನ್ನು ಸರಿಪಡಿಸಲು ಸಹಕರಿಸುತ್ತೇನೆ ಎಂದು ಹೇಳಿದರು. ಇದಕ್ಕೆ ಎಲ್ಲಾ ನಿವೃತ್ತ ನೌಕರರು ಮೆಚ್ಚುಗೆ ವ್ಯಕ್ತ ಪಡಿಸಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಸುಭಾಷ ಹುಲಸೂರೆ, ಶಿವಕುಮಾರ ಘಂಟೆ, ಹರಿದೇವ ಸುಕನಾಳ, ರಮೇಶಬಾಬು ಇಂಚೂರೆ, ಕಿಶನರಾವ ಜಾಧವ ಸೇರಿದಂತೆ ನೂರಾರು ನಿವೃತ್ತ ನೌಕರರು ಹಾಜರಿದ್ದರು.

# ಗುಲಾಬಿ ಹೂ ಕೊಟ್ಟು ಸಂಚಾರ ನಿಯಮ ಜಾಗೃತಿ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಜ. 30 : ನೆಹರೂ ಯುವ ಕೇಂದ್ರ ಹಾಗೂ ರೈಸಿಂಗ್ ಹ್ಯಾಂಡ್ ಯುವ ನಗರ ಮತ್ತು ಗ್ರಾಮೀಣ ಅಭಿವೃದ್ಧಿ ಸಂಸ್ಥೆ ವತಿಯಿಂದ ನಗರದಲ್ಲಿ ವಾಹನ ಚಾಲಕರಿಗೆ ಗುಲಾಬಿ ಹೂ ಹಾಗೂ ಕರಪತ್ರ ಕೊಟ್ಟು ಸಂಚಾರ ನಿಯಮಗಳ ಜಾಗೃತಿ ಮೂಡಿಸಲಾಯಿತು.

ನಗರದ ಪ್ರಮುಖ ವೃತ್ತಗಳಲ್ಲಿ ವಾಹನ ಚಾಲಕರು ಹಾಗೂ ಸಾರ್ವಜನಿಕರಿಗೆ ಸಂಚಾರ ನಿಯಮಗಳ ತಿಳಿವಳಿಕೆ ಕೊಡಲಾಯಿತು.

ವಾಹನ ಚಾಲಕರು ಕಡ್ಡಾಯವಾಗಿ ಹೆಲ್ಮೇಟ್ ಧರಿಸಬೇಕು. ಕಾರುಗಳಲ್ಲಿ ಸೀಟ್ ಬೆಲ್ಟ್ ಹಾಕಿಕೊಳ್ಳಬೇಕು. ಜೀವ ರಕ್ಷಣೆಗಾಗಿ ಸಂಚಾರ ನಿಯಮಗಳನ್ನು ಪಾಲಿಸಬೇಕು ಎಂದು ಸಲಹೆ ನೀಡಲಾಯಿತು.

ನೆಹರೂ ಯುವ ಕೇಂದ್ರದ ಜಿಲ್ಲಾ ಯುವ ಅಧಿಕಾರಿ ಮಯೂರಕುಮಾರ ಗೋರಮೆ, ರೈಸಿಂಗ್ ಹ್ಯಾಂಡ್ ಯುತ್ ನಗರ ಮತ್ತು ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಅಧ್ಯಕ್ಷ ಸತೀಶ್ ಎಸ್. ಬೆಳಕೋಟೆ, ಸಂಚಾರ ಪೊಲೀಸರು, ಗೃಹ ರಕ್ಷಕರು ಇದ್ದರು.

# ಯುವಕರು ರಾಷ್ಟ್ರ ಅಭಿಮಾನ ಹಾಗೂ ಮಾನವ ಮೌಲ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು : ಡಾ. ಶಿವಯೋಗಿ ಬಾಳಿ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜ. 30 : ಯುವ ಜನತೆಯು ರಾಷ್ಟ್ರಾಭಿಮಾನ ಹಾಗೂ ಮಾನವೀಯ ಮೌಲ್ಯಗಳನ್ನು ಜೀವನದಲ್ಲಿ ಕಟ್ಟು ನಿಟ್ಟಾಗಿ ಅಳವಡಿಸಿಕೊಂ ಡು ಹೋಗಬೇಕೆಂದು ಬ್ರಿಮ್ಸ ನಲ್ಲಿ ವೈದ್ಯಕೀಯ ಅಧೀಕ್ಷಕ ರಾದ ಡಾ. ಶಿವಯೋಗಿ ಬಾಳಿಯವರು ಯುವಜನತೆಗೆ ಕರೆ ನೀಡಿದರು. ಅವರು ಇಂದು ಅಖಿಲ ಭಾರತ ವಿಶ್ವವಿದ್ಯಾಲಯಗಳ ನೌಕರರ ಒಕ್ಕೂಟ, ಈಶ್ವರಮ್ಮ ಬುಯ್ಯಾ ಹೆಲ್ತ್ ಕೇರ್ ಫೌಂಡೇಶನ್ ಮರ್ಕಲ್, ನ್ಯೂ ಮದರ್ ತೆರೇಸಾ ನಗರ ಹಾಗೂ ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ಕಲ್ಯಾಣ ಭಾರತಿ ಕಲೆ ಸಾಹಿತ್ಯ ಹಾಗೂ ಸಾಂಸ್ಕೃತಿಕ ಟ್ರಸ್ಟ್ ಮತ್ತು ಪ್ರಗತಿ ಆರೋಗ್ಯ ಮತ್ತು ಶಿಕ್ಷಣ ಸಂಸ್ಥೆ ಇವುಗಳ ಸಂಯುಕ್ತ ಆಶ್ರಯದಲ್ಲಿ, ನಗರದಲ್ಲಿ ಹಮ್ಮಿಕೊಂಡ ಗಣರಾಜ್ಯೋತ್ಸವ, ಸ್ವಾಮಿ ವಿವೇಕಾನಂದ ಜಯಂತಿ, ರಾಷ್ಟ್ರೀಯ ಯುವಜನೋತ್ಸವ ಸಾಧಕರಿಗೆ ಸನ್ಮಾನ ಹಾಗೂ ಪರಿಸರ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಯುವಕರು ತಮ್ಮ ಭವಿಷ್ಯದ ಚಿಂತೆ ಇಲ್ಲದೆ ಗೊತ್ತು ಇಲ್ಲದ ಜೀವನ ನಡೆಸುತ್ತಿರುವುದು ಖೇದಕ ರವಾಗಿದೆ. ಮೊಬೈಲಿನ ದುರ್ಬಳಕೆಯು ಹೆಚ್ಚಾಗಿ ಆಗುತ್ತಿದ್ದು, ಇದು ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಇದರಿಂದ ಜ್ಞಾಪಕ ಶಕ್ತಿಯು ಕಡಿಮೆಯಾಗಿ ಸಮಾಜದ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ. ಆದ್ದರಿಂದ ಮೊಬೈಲನ್ನು ಮಿತವ್ಯಯವಾಗಿ ಬಳಸಬೇಕೆಂದು ಕಿವಿಮಾತು ಹೇಳಿದರು. ಮುಖ್ಯ ಅತಿಥಿಗಳಾಗಿ ಆಗಮಿ ಸಿದ ಬೀದರ್ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ರಾದ ಸುರೇಶ ಚನಶೆಟ್ಟಿಯವರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಪುಸ್ತಕಗಳನ್ನು ಓದುವುದು, ಬರೆಯುವುದು ಕಡಿಮೆಯಾಗುತ್ತಿದೆ. ಅಧ್ಯಯನ ಮಾಡದೆ ಇರುವುದರಿಂದ ಜ್ಞಾನ ಸಂಪಾದನೆ ಮಾಡುವುದು ಸಾಧ್ಯವಾಗುತ್ತಿಲ್ಲ. ಇದರಿಂದ ಮಾನಸಿಕ ಸಮ ತೋಲನೆಯು ಹಳಿ ತಪ್ಪಿ ಕೊಲೆ, ದ–ರೋಡೆ, ಸುಲಿಗೆ, ಅತ್ಯಾಚಾರ, ಅನಾಚಾರ ಬೆಳೆದು, ಆತ್ಮಹತ್ಯೆಗಳು ಹೆಚ್ಚುತ್ತಿದ್ದು ಇದು ಕಳ ವಳಕಾರಿ ಸಂಗತಿಯಾಗಿದೆ ಎಂದರು. ವಿಜ್ಞಾನ ಪರಿಷತ್ತಿನ ರಾಜ್ಯ ಸಂಯೋಜಕ ರಾದ ಬಾಬುರಾವ ದಾನಿಯವರು ಮಾತನಾಡಿ, ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸುಮಾರು 60 ಜನ ಸಾಧಕರಿಗೆ ಈ ಎಲ್ಲಾ ಸ್ವಯಂ ಸೇವಾ ಸಂಸ್ಥೆಗಳು ಕೂಡಿ ಗೌರವ ಸನ್ಮಾನ ನೀಡಿರುವುದು ಶ್ಲಾಘನೀಯವಾಗಿದೆ ಎಂದು ನುಡಿದರು. ನಿವೃತ್ತ ಮುಖ್ಯ ಗುರುಗಳಾದ ಶ್ರೀ ಗಣಪತರಾವ ಬುಯ್ಯರವರು ಮಾತನಾಡಿ ಗ್ರಾಮೀಣ ಭಾಗದಲ್ಲಿ ಅನೇಕ ಪ್ರತಿಭಾವಂತ ವ್ಯಕ್ತಿಗಳಿದ್ದಾರೆ. ಇಂಥ ವಿಶಿಷ್ಟ ಕಾರ್ಯಕ್ರಮಗಳನ್ನು ಗ್ರಾಮೀಣ ಭಾಗದಲ್ಲಿ ಹಮ್ಮಿಕೊಂಡರೆ, ಅಲ್ಲಿನ ಪ್ರತಿಭೆಗಳನ್ನು ಹೊರತರುವುದು ಸಾಧ್ಯವಾಗುತ್ತದೆ ಎಂದು ನುಡಿದರು. ಕಲ್ಯಾಣ ಕರ್ನಾಟಕ ಪ್ರೌಢ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಪಾಂಡುರಂಗ ಬೆಲ್ದಾರ ರವ ರು ರಾಷ್ಟ್ರೀಯ ಭಾವೈಕ್ಯ ತೆಯ ಸಂಬಂಧದ ಈ ಕಾರ್ಯ ಕ್ರಮಕ್ಕೇ ಮೆಚ್ಚುಗೆ ವ್ಯಕ್ತಪಡಿಸಿದರು.

ಪಶು ವೈದ್ಯಕೀಯ ವಿಶ್ವವಿದ್ಯಾ ಲಯದ ನಿವೃತ್ತ ಅಧಿಕಾರಿ ವೀರಭದ್ರಪ್ಪ ಉಪ್ಪಿನರವರು ಪ್ರಾಸ್ತಾವಿಕ ವಾಗಿ ಮಾತನಾಡಿ, ಈ ಎಲ್ಲ ಸಂಘ ಸಂಸ್ಥೆಗಳಿಂದ ಸುಮಾರು ಇಪ್ಪತ್ತು ವರ್ಷಗಳಿಂದ ಯಾವುದೇ ಫಲಾಪೇಕ್ಷೆ ಇಲ್ಲದೇ, ಅನೇಕ ಸಾಮಾಜಿಕ ಚಟುವಟಿಕೆಗಳನ್ನು ನಡೆಸುತ್ತಾ ಬರಲಾಗಿದ್ದು, ಇದನ್ನು ಮುಂದುವರಿಸಿ ಕೊಂಡು ಹೋಗಲಾಗುವುದೆಂದು ತಿಳಿಸಿದರು.

ನ್ಯೂ ಮದರ ತೆರೇಸಾ ನಗರ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಸಂಜೀವಕುಮಾರ ಸ್ವಾಮಿ ಯವರು ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿ, ಗೌರವ ಸನ್ಮಾನ ಸ್ವೀಕರಿಸಿರುವ ಸಾಧಕರು ಮುಂದಿನ ದಿನಗಳಲ್ಲಿ ಹೆಚ್ಚು ಹೆಚ್ಚಿನ ಕಾರ್ಯಗಳನ್ನು ಮಾಡಲಿ ಎಂದು ಹಾರೈಸಿದರು. ಸರಕಾರಿ ಶಾಲೆಯ ನಿವೃತ್ತ ಶಿಕ್ಷಕಿ ಶಾಂತಾಬಾಯಿ ರಾಸುರ್ ರವರು ಅತಿಥಿಗಳಾಗಿದ್ದರು. 2025ನೇ ಜಿಲ್ಲಾ ಗಣರಾಜ್ಯೋ ತ್ಸವ ಪ್ರಶಸ್ತಿ ಪುರಸ್ಕೃತರಾದ ಬ್ರೀಮ್ಸ್ ಆಸ್ಪತ್ರೆಯ ತಂತ್ರಜ್ಞಾಧಿ ಕಾರಿಯಾದ ಅರವಿಂದ ಕುಲಕರ್ಣಿ ಯವರನ್ನು ಇದೇ ಸಂದ ರ್ಭದಲ್ಲಿ ಗೌರವ ಸನ್ಮಾನ ನೀಡಲಾಯಿತು. ಪರಿಸರ ಜಾಗೃತಿ ಅಭಿಯಾನದ ಅಂಗವಾಗಿ, ಪ್ರತಿಜ್ಞಾ ಬೋಧನೆಯು ನಡೆ ಯಿತು. ಸಸಿಗೆ ನೀರೆರೆದು ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು .

ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತಿನ ಕಾರ್ಯ ದರ್ಶಿ ಓಂಕಾರ್ ಪಾಟೀಲ್ ರವರು ಸ್ವಾಗತಿಸಿದರು. ಸಂಜೀವಕುಮಾರ ಬುಯ್ಯಾರವರು ವಂದಿಸಿದರು. ಸಾಮೂಹಿಕ ರಾಷ್ಟ್ರಗೀತೆ ಯೊಂದಿಗೆ ಕಾರ್ಯಕ್ರಮವು ಮುಕ್ತಾಯಗೊಂಡಿತು. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಾದ ಮಾಜಿ ಸೈನಿಕ ಮಲ್ಲಯ್ಯ ಸ್ವಾಮಿ ಹಾಗೂ ನರೇಂದ್ರ ಕುಮಾರ, ನಾಗೇಶ್ ಸ್ವಾಮಿ, ಚಂದ್ರಕಲಾ, ಪತ್ರಕರ್ತ ರಾದ ಕ ಕ ಪಾ ಸಂಘ ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾದ ಸಂತೋಷ್ ಚೆಟ್ಟಿ, ಯೂಸುಫ್ ರಹಿಂ, ವಿದ್ಯಾರ್ಥಿ ನಿಯರಾದ ನೇಹಾ, ಜ್ಯೋತಿ, ವಿಶ್ವನಾಥ, ಅರುಣ್ ಕುಮಾರ್, ಸುನೀತಾ ಆನಂದ, ಅರವಿಂದ, ಶಿವಶಂಕರ್, ಬಾಲಾಜಿ ಹುಗ್ಗಿ, ವೈಜನಾಥ ಅಶೋಕ್, ಪ್ರೇಮ ಅವಿನಾಶ್, ಅನಂತ ಕುಲಕರ್ಣಿ, ಸಿದ್ದರಾಮೇಶ್ವರ, ಲೋಕೇಶ್ ಸಲಗರ್, ಸಂಗಮೇಶ ಜಾಂತೆ, ಶಿವಶಂಕರ್ ವೀರಶೆಟ್ಟಿ ಕುಂ, ಅಹಮದ್, ಸತೀಶ್ ಬಾಳಿ, ವಿನಾಯಕ್ ಕುಲಕರ್ಣಿ, ಸಣ್ಮುಖ, ವೆಂಕಟರಾವ್ ಕುಲಕರ್ಣಿ, ಭೀಮರಾವ, ಸುಶೀಲ್ ಕುಮಾರ್, ಸಮಾಜ ಸೇವಕರಾದ ಭಾಗ್ಯ ಜ್ಯೋತಿ, ಮಹಾದೇವಿ, ಸವಿತಾ, ವಿಜಯಲಕ್ಷ್ಮಿ, ಜಗದೇವಿ ಭೋಸ್ಲೆ, ಸುವರ್ಣಾ ವಾಘಮಾರೆ, ಜಗದೇವಿ ಮೈನಾಳೆ, ವಾಣಿ, ಮಮತಾ, ಸಿದ್ದಾ ರೂಢ ಭಾಲ್ಕಿ, ಶರಣಪ್ಪ ಖೇಡಕರ್, ಅಶೋಕ್ ದಿಡಿಗೆ, ವಿನೋದ, ಸಂತೋಷ, ರವಿಕುಮಾರ್ ಸುರೇಶ್ ರಾಜೇಂದ್ರ ವಿಜಯ ಕುಮಾರ್, ಅನಿಲ್ ಅಣದೂರೆ ಮುಂತಾದವರನ್ನು ಗೌರವಿಸಲಾಯಿತು.

# ಜನತೆ ನೆಮ್ಮದಿಯಿಂದ ಬದುಕುವಂತಾಗಲಿ: ಶಾಸಕ ಪ್ರಭು ಚವ್ಹಾಣ



ರೈತರ ಸಮಸ್ಯೆಗೆ ಸ್ಪಂದನೆ: ಬೆಂಬಲ ಬೆಲೆ ಯೋಜನೆಯಡಿ ಸೋಯಾ ಬೆಳೆ ಮಾರಾಟ ಮಾಡಲು ರೈತ ಸಂಪರ್ಕ ಕೇಂದ್ರದಲ್ಲಿ ಹೆಸರು ನೋಂದಾಯಿಸಲಾಗಿದೆ. ಆದರೂ ನಮ್ಮ ಬೆಳೆಯನ್ನು ತೆಗೆದುಕೊಳ್ಳುತ್ತಿಲ್ಲವೆಂದು ದಾಬಕಾ(ಸಿಹೆಚ್) ಗ್ರಾಮಸ್ಥರು ದೂರು ನೀಡಿದರು. ಸರ್ಕಾರದಿಂದಲೇ ಸೋಯಾ ಖರೀದಿಯನ್ನು ನಿಲ್ಲಿಸಲಾಗಿದೆ ಎಂದು ಅಧಿಕಾರಿಗಳು ಸಮಜಾಯಿಸಿ ನೀಡಿದಾಗ, ಶಾಸಕರು ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಜಿಲ್ಲಾಧಿಕಾರಿಗಳನ್ನು ದೂರವಾಣಿ ಮುಖಾಂತರ ಸಂಪರ್ಕಿಸಿ ಮಾಹಿತಿ ಪಡೆದರು. ಬೆಂಬಲ ಬೆಲೆ ಯೋಜನೆಯಡಿ ರೈತರ ಸೋಯಾ ಖರೀದಿಗೆ ಅವಕಾಶ ಮಾಡಿಕೊಡಲು ವ್ಯವಸ್ಥೆ ಮಾಡಿಕೊಡೇಕೆಂದು ಹೇಳಿದರು.

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜ.30:ಗ್ರಾಮಸ್ಥರ ಸಮಸ್ಯೆಗಳನ್ನು ಆಲಿಸಿ ಅಗತ್ಯ ಪರಿಹಾರ ಕಲ್ಪಿಸಿ ಜನರು ನೆಮ್ಮದಿಯಿಂದ ಬದುಕುವಂತಾಗಬೇಕು ಎಂಬುದೇ ನನ್ನ ಪರಮ ಉದ್ದೇಶವಾಗಿದ್ದು, ಈ ದಿಶೆಯಲ್ಲಿ ಕ್ಷೇತ್ರಾದ್ಯಂತ ಗ್ರಾಮ ಸಂಚಾರ ನಡೆಸುತ್ತಿದ್ದೇನೆ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು.ಬಿ ಚವ್ಹಾಣ ಅವರು ತಿಳಿಸಿದರು.

ಕಲಮನಗರ ತಾಲೂಕಿನ ಮುತಖೇಡ, ದಾಬಕಾ(ಸಿಹೆಚ್), ಗಂಗನಬೀಡ, ಗಣೇಶಪೂರ(ಯು), ವಾಗನಗೇರಾ, ಶಿವಪುರ, ಮುರ್ಕಿ, ಮುರ್ಕಿ ವಾಡಿ, ಕುರುಬುರವಾಡಿಯಲ್ಲಿ ಗ್ರಾಮ ಸಂಚಾರ ನಡೆಸಿ ಅವರು ಮಾತನಾಡಿದರು.

ಜನರಸಂಕಷ್ಟಗಳಿಗೆಸ್ಪಂದಿಸಬೇಕೆಂದು ಉದ್ದೇಶದಿಂದ ಶಾಸಕನಾದ ನಂತರ ಪ್ರತಿ ವರ್ಷ ಕ್ಷೇತ್ರದ ಎಲ್ಲ ಗ್ರಾಮಗಳಿಗೆ ಬೇಟಿ ನೀಡುತ್ತಾ ಬರುತ್ತಿದ್ದೇನೆ. ಅದರಂತೆ ಈ ವರ್ಷವೂ ಕೂಡ ಗ್ರಾಮ ಸಂಚಾರ ನಡೆಸುತ್ತಿದ್ದು, ಗ್ರಾಮ ಮಟ್ಟದಲ್ಲಿ ಕೆಲಸ ಮಾಡುವ ಗ್ರಾಮ ಪಂಚಾಯಿತಿ, ಶಾಲೆ, ಅಂಗನವಾಡಿ, ಆಸ್ಪತ್ರೆ, ಪಶು ಆಸ್ಪತ್ರೆಗಳು, ರೈತ ಸಂಪರ್ಕ ಕೇಂದ್ರ, ನಾಡಕಛೇರಿಗಳಿಗೆ ಭೇಟಿ ನೀಡುತ್ತಿದ್ದೇನೆ. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಲೆಕ್ಕಾಧಿಕಾರಿಗಳು, ಶಿಕ್ಷಕರು, ಅಂಗನವಾಡಿಕಾರ್ಯಕರ್ತೆಯರು ಹಾಗೂ ಮತ್ತಿತರೆ ಸಿಬ್ಬಂದಿ ಹೇಗೆ ಕೆಲಸ ಮಾಡುತ್ತಿದ್ದಾರೆ ಎಂಬುದನ್ನು ತಿಳಿದುಕೊಂಡು ಕೊರತೆಗಳಿದ್ದಲ್ಲಿ ಸರಿಪಡಿಸುವ ಕೆಲಸ ಮಾಡುತ್ತಿದ್ದೇನೆ ಎಂದರು.

ರೈತರ ಅಭಿವೃದ್ಧಿಗೆ ವಿವಿಧ ಇಲಾಖೆಗಳಲ್ಲಿ ನಾನಾ ರೀತಿಯ ಯೋಜನೆಗಳಿವೆ. ಇವುಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕು. ಸರ್ಕಾರದ ಎಲ್ಲ ಸೌಲಭ್ಯಗಳು ಅರ್ಹರಿಗೆ ತಲುಪಿಸಬೇಕಿದೆ. ಜನರಲ್ಲಿಯೂ ಕೂಡ ತಮ್ಮ ಗ್ರಾಮದ ಅಭಿವೃದ್ಧಿಯ ಬಗ್ಗೆ ಕಾಳಜಿ ಮೂಡಬೇಕು. ತಮ್ಮ ಊರಿನಲ್ಲಿ ಸರ್ಕಾರದ ಯೋಜನೆಗಳನ್ನು ತರಲು ಪ್ರಯತ್ನಿಸಬೇಕು. ಅಭಿವೃದ್ಧಿ ಕಲಸಗಳಿಗೆ ಸಹಕರಿಸಬೇಕು ಮತ್ತು ಅವುಗಳು ಸರಿಯಾಗಿ ಆಗುವಂತೆ ಮುತುವರ್ಜಿ ವಹಿಸಬೇಕು ಎಂದು ತಿಳಿಸಿದರು.

ಮುತಖೇಡ್, ಗಣೇಶಪೂರ (ಯು), ಕುರುಬುರವಾಡಿ ಶಿವಪುರದಲ್ಲಿ 14 ಲಕ್ಷದ ಶಾಲೆ ಉನ್ನತೀಕರಣ, ದುರಸ್ತಿ, ಓಹೆಚ್‌ಟಿ ಟ್ಯಾಂಕ್, ಸೋಲಾರ್ ಪೆನಲ್ ಅಳವಡಿಸುವ ಕಾಮಗಾರಿಗಳು, ದಾಬಕಾನಲ್ಲಿ 25 ಲಕ್ಷದ ಸಾರ್ವಜನಿಕ ಶೌಚಾಲಯ, ಗಣೇಶಪೂರನಲ್ಲಿ 22.50 ಲಕ್ಷದ ಅಂಗನವಾಡಿ ಕಟ್ಟಡ, ಮುರ್ಕಿಯಲ್ಲಿ 6 ಲಕ್ಷದ ಸರ್ಕಾರಿ ಶಾಲೆ ದುರಸ್ತಿ ಕಾಮಗಾರಿಗೆ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರರಾದ ಅಮಿತಕುಮಾರ ಕುಲಕರ್ಣಿ, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ ಸುಭಾಷ, ಜೆಸ್ಕಾಂ ಎಇಇ ರವಿ ಕಾರಬಾರಿ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಗಾಯತ್ರಿ, ಕೃಷಿ ಇಲಾಖೆಯ ಧೂಳಪ್ಪ, ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆಯ ವೆಂಕಟರಾವ ಶಿಂಧೆ, ಮುಖಂಡರಾದ ವಸಂತ ಬಿರಾದಾರ, ರಾಮಶೆಟ್ಟಿ ಪನ್ನಾಳೆ, ಕಿರಣ ಪಾಟೀಲ, ಸತೀಷ ಪಾಟೀಲ, ಶಿವರಾಜ ಅಲ್ಮಾಜೆ, ಅಶೋಕ ಅಲ್ಮಾಜೆ, ಝಾಕೀರ್ ಶೇಖ್, ಸುಜಿತ್ ರಾಠೋಡ್, ರಾಜು ಪೋಕಲವಾರ, ಸಂಜು ಮುರ್ಕೆ, ಯೋಗೇಶ ಪಾಟೀಲ, ಮಂಜು ಸ್ವಾಮಿ, ಬಾಬು ಬಿರಾದಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಮುಖಂಡರು ಹಾಗೂ ಗ್ರಾಮಸ್ಥರಿದ್ದರು.

# ವ್ಯಕ್ತಿ ಕಣ್ಮರೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ : ತಾಲೂಕಿನ ಹೋಳಸಮುದ್ರ ಗ್ರಾಮದ ಶಂಕರರಾವತಂದೆಅರ್ಜುನರಾವ ಗಾಯಕವಾಡ(80) ವ್ಯಕ್ತಿ ಕಾಣೆಯಾಗಿದ್ದಾನೆಂದು ತಿಳಿದು ಬಂದಿದೆ.

(80) ವೃದ್ದರಾದ ಇವರು ಬೆನ್ನಿನ ಭಾಗದಲ್ಲಿ ಗಂಟು ಇದ್ದ ಕಾರಣ ಬಾಗಿ ನಿಧಾನವಾಗಿ ಚಲಿಸುತ್ತಿದ್ದರು. ಪರಿವಾರದವರು ಎಷ್ಟು ಕಡೆ ಹುಡುಕಿದರು ಸಿಗುತ್ತಿಲ್ಲ.

ಈ ಕುರಿತು ಕಾಣೆಯಾದ ವ್ಯಕ್ತಿಯ ಮಗ ಶಂಕರರಾವ ಅವರು ಕಮಲನಗರ ಠಾಣೆಗೆ ನೀಡಿನ ದೂರಿನಲ್ಲಿ ದಿನಾಂಕ : 26.08.2023 ರಂದು ನನ್ನ ತಂದೆ ಮನೆಯಿಂದ ನಾಪತ್ತೆಯಾಗಿರುತ್ತಾರೆ. ಎಲ್ಲಾ ಸ್ಥಳಗಳಲ್ಲಿ ಹುಡುಕಿದರೂ ಪತ್ತೆಯಾಗಿರುವುದಿಲ್ಲ. ಕಾಣೆ–ಯಾದ ವ್ಯಕ್ತಿ ಪತ್ತೆಯಾದಲ್ಲಿ ಜಿಲ್ಲಾ ಕಂಟ್ರೋಲ್ ರೂಮ ಬೀದರ. 9480803400, ಪೊಲೀಸ್ ಉಪಾಧೀಕ್ಷಕರು ಭಾಲ್ಕಿ. 9480803421, ಸಿಪಿಐ ಕಮಲನಗರ 9480803436 ಮತ್ತು ಪಿಎಸ್ಐ ಕಮಲನಗರ 9480803470 ಅವರನ್ನು ಸಂಪರ್ಕಿಸಲು ವಿನಂತಿ.

# ಪತ್ರಿಕಾ ದಿನಾಚರಣೆ ಮತ್ತು ಭಾರತದಲ್ಲಿ ಪ್ರಸಕ್ತ ಮಾಧ್ಯಮ ಸ್ಥಿತಿಗತಿ ಕುರಿತು ವಿಶೇಷ ಉಪನ್ಯಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜ. 30 : ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ, ಶರಣಬಸವ ವಿಶ್ವವಿದ್ಯಾಲಯ ಕಲಬುರಗಿ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ಜಿಲ್ಲಾ ಘಟಕ ಕಲಬುರಗಿ ಇವುಗಳ ಸಂಯುಕ್ತಾಶಯದಲ್ಲಿ ಪತ್ರಿಕಾ ದಿನಾಚರಣೆ ಮತ್ತು ಭಾರತದಲ್ಲಿ ಪ್ರಸಕ್ತ ಮಾಧ್ಯಮ ಸ್ಥಿತಿಗತಿ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಶುಕ್ರವಾರದಂದು ಜನವರಿ 31 ರಂದು ಬೆಳಿಗ್ಗೆ 11 ಗಂಟೆಗೆ ಅನುಭವ ಮಂಟಪ, ಪತ್ರಿಕೋದ್ಯಮ ವಿಭಾಗ, ಶರಣಬಸವ ವಿಶ್ವವಿದ್ಯಾಲಯ ಕಲಬುರಗಿಯಲ್ಲಿ ಜರಗುವುದು.

ಕಲಬುರಗಿ ಶರಣಬಸವ ವಿಶ್ವವಿದ್ಯಾಲಯದ ಡೀನ್ ಡಾ. ಲಕ್ಷ್ಮೀ ಪಾಟೀಲ ಮಾಕಾ ಉದ್ಘಾಟಿಸುವರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ಜಿಲ್ಲಾ ಘಟಕ ಅಧ್ಯಕ್ಷ ಬಾಬುರಾವ ಯಡ್ರಾಮಿ, ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ರಾಜ್ಯ ಘಟಕ ಉಪಾಧ್ಯಕ್ಷ ಭವಾನಿ ಸಿಂಗ್ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಶರಣ ಬಸವ ವಿಶ್ವವಿದ್ಯಾಲಯ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಡೀನ್ ಟಿ.ವಿ. ಶಿವಾನಂದನ್ ಭಾರತದಲ್ಲಿ ಪ್ರಸಕ್ತ ಮಾಧ್ಯಮ ಸ್ಥಿತಿಗತಿ ಕುರಿತು ವಿಶೇಷ ಉಪನ್ಯಾಸ ನೀಡುವರು. .

# ಜೆಜೆಎಮ್ ಕಾಮಗಾರಿ ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜ.30: ತಾಲೂಕಿನಲ್ಲಿ ನಡೆದ ಜೆಜೆಎಮ್ ಕಾಮಗಾರಿ ಕಳಪೆ ಮಟ್ಟದಿಂದ ಕೂಡಿದ್ದು, ಸೂಕ್ತ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಪ್ರಜಾ ಪ್ರಭುತ್ವ ಸಂರಕ್ಷಣಾ ಸಮಿತಿಯ ಪದಾಧಿಕಾರಿಗಳು ಆಗ್ರಹಿಸಿದ್ದಾರೆ.

ಈ ಕುರಿತು ಪಟ್ಟಣದ ತಹಸೀಲ ಕಚೇರಿಯ ಎದುರಿನಲ್ಲಿ ಪ್ರಜಾ ಪ್ರಭುತ್ವ ಸಂರಕ್ಷಣಾ ಸಮಿತಿಯ ಸಂಸ್ಥಾಪಕ ಗಗನ ಫುಲೆ ನೇತೃತ್ವದಲ್ಲಿ ಗುರವಾರ ಒಂದು ದಿನದ ಸಾಂಕೇತಿಕ ಧರಣಿ ಸತ್ಯಾಗ್ರಹ ನಡೆಸಿದ ಸಮಿತಿಯ ಪದಾಧಿಕಾರಿಗಳು, ತಾಲೂಕಿನಲ್ಲಿ ನಡೆದ ಜೆಜೆಎಮ್ ಯೋಜನೆಯ ಅಡಿಯಲ್ಲಿನ ಸಂಪೂರ್ಣ ಕಾಮಗಾರಿ ಕಳಪೆ ಮಟ್ಟದಿಂದ ಕೂಡಿದ್ದು, ಈ ಕುರಿತು ಉನ್ನತ ಅಧಿಕಾರಿಗಳು ಸೂಕ್ತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಒಂದು ವೇಳೆ 15 ದಿವಸಗಳ ಒಳಗೆ ಕ್ರಮ ಕೈಗೊಳ್ಳದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.

ಈ ಸಂದರ್ಭದಲ್ಲಿ ಪ.ಪ.ಸಂ.ಸ ಮುಖಂಡ ಗಗನ ಫುಲೆ ಸೇರಿದಂತೆ ದಲಿತ ಮೈನಾರಿಟಿ ಸೇನೆ, ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ, ಅಂಬೇಡ್ಕರ್ ಸೇವಾ ಸಮಿತಿಯ ಪದಾಧಿಕಾರಿಗಳೊಂದಿಗೆ ಮುಖಂಡರಾದ ಮಹೇಂದ್ರ ಪ್ಯಾಗೆ, ಸಿಧಾರ್ಥ ಪ್ಯಾಗೆ, ಶ್ರೀಮಂತ ಭೋಸ್ಲೆ, ರಾಜೇಂದ್ರ ಕರವಂದ, ಗೌತಮ ಹಳ್ಳಿಖೆಡೆ, ಶ್ರೀನಿವಾಸ ಫುಲೆ, ಗೌತಮ ಗಿವಾರೆ, ಅಶೋಕ, ಅವಿನಾಶ ಪಟ್ನೆ, ಆಕಾಶ ಸಿಂದೆ, ಎಸ್. ಕೆ.ಜಯ್, ನಾಗಾರ್ಜುನ ಫುಲೆ, ಸುಶೀಲಕುಮಾರ ಕಲವಂಡೆ, ಪುಟ್ಟು ಕಣಜೆ, ಆಕಾಶ, ದಿಲೀಪಕುಮಾರ ಸೇರಿಕಾರ ಸೇರಿದಂತೆ ಹಲವರು ಇದ್ದರು.

# ವೇತನ ತಾರತಮ್ಯ ಹೊಗಲಾಡಿಸಲು ಅಗ್ರಹ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜ.30: ಕರ್ನಾಟಕ ರಾಜ್ಯ ನಿವೃತ್ತ ನೌಕರರ ವೇದಿಕೆಯ ತಾಲೂಕು ಘಟಕದ ವತಿಯಿಂದ ಗುರುವಾರ 7ನೇ ವೇತನ ಆಯೋಗದಲ್ಲಾದ ವೇತನ ತಾರತಮ್ಯ ಹೊಗಲಾಡಿಸುವಂತೆ ಆಗ್ರಹಿಸಿ ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರ ತಹಸೀಲ್ದಾರ ಮೂಲಕ ಸಲ್ಲಿಸಲಾಯಿತು. 2022 ರ ಜು.1 ರಿಂದ 2024 ರ ಜು.31 ರ ಒಳಗೆ ನಿವೃತ್ತರಾದ ನೌಕರರ ವೇತನದಲ್ಲಿ ತುಂಬಾ ವೆತ್ಯಾಸ ವಾಗಿದೆ. ಇದನ್ನು ತಕ್ಷಣವೇ ಸರಿಪಡಿಸಬೇಕು ಎಂದು ಆಗ್ರಹಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ, ಉಪ ತಹಸೀಲ್ದಾರ ಪಲ್ಲವಿ, ನಿವೃತ್ತ ನೌಕರರ ವೇದಿಕೆಯ ತಾಲೂಕು ಸಂಚಾಲಕ ಸುಭಾಷ ಹುಲಸೂರೆ, ಪ್ರಮುಖರಾದ ಹರಿದೇವ ಸುಕನಾಳೆ, ರಮೇಶ ಬಾಬು ಇಂಚೂರ, ಶಿವಕುಮಾರ ಘಂಟೆ, ಸಿದರಾಮ ಚಿದ್ರೆ, ಐಜಿಕ ಬಂಗಾರೆ, ಬಸವರಾಜ ಚನಶೆಟ್ಟಿ, ವೆಂಕಟರಾವ ಬಿರಾದಾರ, ಸುಭಾಷ ಇಟಗೆ, ಗೋವಿಂದರಾವ ಬಿರಾದಾರ, ಸುಭಾಷ ಮೇತ್ರೆ, ಶಿವರಾಜ ಗಾದಗೆ, ವಿರಶೆಟಿ ಭಾಲ್ಕೆ, ಉಮಾ ವಿರಶೆಟ್ಟಿ, ಶಾಹಜಿ ಭೊಸಲೆ, ಮಲ್ಲಿಕಾರ್ಜುನ ಗಂಗು, ಲಕ್ಷ ??ಣರಾವ ಮಾನಕಾರೆ, ದಿಲೀಪ ಗಾಯಕವಾಡ, ಕಿಶನರಾವ ಜಾಧವ, ರಮೆಶ ಮಾನಶೆಟ್ಟೆ, ಶಿವರಾಜ ಸ್ವಾಮಿ, ಲಕ್ಷ ??ಣ ನಾಗರೆ, ವೆಂಕಟರಾವ ಬೋರೋಳೆ, ಡಿ.ರಾಜಕುಮಾರ, ವಿರಶೆಟ್ಟಿ ಇಟಗೆ, ಧನರಾಜ ಬಿರಾದಾರ, ಶಿವಕುಮಾರ ಬಿರಾದಾರ, ವೆಂಕಟರಾವ ಸೂರ್ಯವಂಶಿ, ವಿಜಯಕುಮಾರ ಖಂಡುಮಲ್ಕೆ, ಎನ್.ಜಿ.ಪೋಟಲೆ, ಶೋಭಾ ಪಾಂಡುರಂಗರಾವ, ರಮೇಶ ದಿಗಂಬರಾವ, ಚಂದ್ರಕಾಂತ ವಾಡೆ, ಮಿಲಿಂದಾ ಕಲ್ಲಪ್ಪ, ಮುರಳಿಧರ ಕಾಮಶೆಟ್ಟಿ, ಚಾಂದಪಾಶಾ ವರವಟ್ಟಿ, ಅಂಗದರಾವ ಗರಾಂಡೆ, ದಿಲೀಪ ಧೂಳಪ್ಪ, ಧನರಾಜ ಮಲಶೆಟ್ಟೆಪ್ಪ, ಮಂಗಲಾ ಜಾಯಗಾಂವ, ರಮೆಶ ರಾಜೋಳೆ, ಪ್ರಕಾಶ ರಾಮಚಂದ್ರರಾವ, ರಾಚಪ್ಪ ಮಡೆಪ್ಪ, ವಿಠಲರಾವ ಬಿರಾದಾರ ಕಲವಾಡಿ, ಅಮೃತ ಹಣಮಂತಪ್ಪ ಫುಲೆ, ಇಂದಿರಾ ಹರನಾಳ ಸೇರಿದಂತೆ ಹಲವರು ಇದ್ದರು.

# ನಿವೃತ್ತ ನೌಕರರಿಗಾದ ಅನ್ಯಾಯ ಸರಿಪಡಿಸಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜ.30:ರಾಜ್ಯ ಸರ್ಕಾರ ಜಾರಿಗೊಳಿಸಿರುವ 7ನೇ ವೇತನ ಆಯೋಗದಲ್ಲಿ ನಿವೃತ್ತ ಸರ್ಕಾರಿ ನೌಕರರಿಗೆ ಅನ್ಯಾಯವಾಗಿದ್ದು, ಪರಿಷ್ಕೃತ ವೇತನಕ್ಕೆ ಅನುಗುಣವಾಗಿ ನಿವೃತ್ತಿ ಉಪಧನ, ಗಳಿಕೆ ರಜೆಯ ನಗದೀಕರಣದ ಸೌಲಭ್ಯಗಳಲ್ಲಿಅನ್ಯಾಯವಾಗಿದ್ದು, ಸರಿಪಡಿಸಬೇಕೆಂದು ತಾಲೂಕು ನಿವೃತ್ತ ನೌಕರರ ವೇದಿಕೆ ಆಗ್ರಹಿಸಿದೆ.

ಈ ಕುರಿತು ನಿವೃತ್ತ ನೌಕರರ ವೇದಿಕೆ ತಾಲೂಕು ಅಧ್ಯಕ್ಷ ರಘುನಾಥ ರೊಟ್ಟೆ ನೇತೃತ್ವದ ನಿಯೋಗ ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬರೆದ ಮನವಿ ಪತ್ರವನ್ನು ತಹಸೀಲ್ದಾರ್ ಅವರಿಗೆ ಸಲ್ಲಿಸಿದರು.

ಜುಲೈ 2022 ರಿಂದ ಜುಲೈ 2024 ರ ಅವಧಿಯಲ್ಲಿ 25 ತಿಂಗಳು ಸೇವೆ ಸಲ್ಲಿಸಿ ನಿವೃತ್ತರಾದ ನೌಕರರಿಗೆ 7ನೇ ವೇತನ ಆಯೋಗದ ಅನುಷ್ಠಾನದಲ್ಲಿ ನಿವೃತ್ತಿ ಉಪಲಬ್ದಗಳನ್ನು ಪಾವತಿಸುವ ಸಂದರ್ಭದಲ್ಲಿ ಆರ್ಥಿಕ ನಷ್ಟವಾಗಿದೆ ಎಂದು ದೂರಿದರು.

ನಿವೃತ್ತಿವೇತನದ ವ್ಯತ್ಯಾಸವನ್ನು ಕೇಳುತ್ತಿಲ್ಲ. ಬದಲಾಗಿ ನಿವೃತ್ತಿ ಆರ್ಥಿಕ ಸೌಲಭ್ಯಗಳಾದ ಡಿಸಿಆರ್‌ಜಿ, ಕಮ್ಯುಟೇಶನ್ ಮತ್ತು ಗಳಿಕೆ ರಜೆ ನಗದೀಕರಣಗಳ ಲೆಕ್ಕಾಚಾರದ ಮೊತ್ತವನ್ನು ಮಾತ್ರ ಕೊಡಬೇಕೆಂದು ಆಗ್ರಹಿಸಿದರು.

ನಮ್ಮ ಬೇಡಿಕೆಗೆ ಆಗ್ರಹಿಸಿ ಬೆಳಗಾವಿಯಲ್ಲಿ ಜರುಗಿದ ಚಳಿಗಾಲದ ಅಧಿವೇಶನದ ಸಂದರ್ಭದಲ್ಲಿ ಸಚಿವ ಸತೀಶ ಜಾರಕಿಹೊಳಿಯವರು ಸರ್ಕಾರದ ಪರ ಮನವಿ ಸ್ವೀಕರಿಸಿ, ಅಧಿವೇಶನ ಮುಗಿದ ಬಳಿಕ ಈ ಕುರಿತು ಸಭೆ ಕರೆದು ಚರ್ಚಿಸಿ ನಿರ್ಧರಿಸೋಣ ಎಂದು ಭರವಸೆ ನೀಡಿದ್ದರು. ಆದರೆ ಇಲ್ಲಿಯವರೆಗೆ ಸಭೆ ಕರೆದಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಶೀಘ್ರದಲ್ಲಿ ನಮ್ಮ ಬೇಡಿಕೆ ಈಡೇರಿಕೆ ಬಗ್ಗೆ ಚರ್ಚಿಸಲು ನಿವೃತ್ತ ನೌಕರರ ವೇದಿಕೆ ಪ್ರಮುಖರೊಂದಿಗೆ ಒಂದು ವಾರದೊಳಗೆ ದಿನಾಂಕ ನಿಗದಿಗೊಳಿಸಿ ಸಭೆ ಕರೆಯಬೇಕೆಂದು ಒತ್ತಾಯಿಸಿದರು.

ನಿವೃತ್ತ ನೌಕರರಾದ ವೆಂಕಟರಾವ ಮುರ್ಗೆ, ಯಶವಂತ ಬಿರಾದಾರ, ಪ್ರಭುರಾವ ಕಳಸೆ, ರಮೇಶ ಪಾಟೀಲ್, ದಿಲೀಪ ಸೋಮವಂಶಿ, ಅರವಿಂದ ಮಾನೆ, ವಿಶ್ವನಾಥ ಕುಂಬಾರಗಿರೆ, ಸುಧಾಕರ ಭಾಸಕರೆ, ರಮೇಶ ಭಯರಪ್ಪ, ಬಾಲಾಜಿ ಕಾಳೇಕರ, ರಾಜಕುಮಾರ ರಾಂಪುರೆ, ಉಮಾಕಾಂತ ಬಿರಾದಾರ, ಉಮಾಕಾಂತ ಸುಲಾಕೆ, ವೀರಭದ್ರಪ್ಪ ಸಜ್ಜನಶೆಟ್ಟಿ, ರಾಜಕುಮಾರ ಬಿರಾದಾರ ಇತರರಿದ್ದರು.

# ಸ್ವಂತ ಕಟ್ಟಡ ನಿರ್ಮಿಸಲು ಅಣಬಿ ಮನವಿ



ಮಲ್ಲಮ್ಮ ನುಡಿ

ಶಹಾಪೂರ:ಜ.30:ತಾಲೂಕಿನ ಕೆಲವು ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಸರಕಾರಿ ಕೈಗಾರಿಕಾ ತರಬೇತಿ ಕೇಂದ್ರ ಶಹಾಪುರ ಇವುಗಳು ಖಾಸಗಿ ಕಟ್ಟಡಗಳಲ್ಲಿ ನಡೆಯುತ್ತಿದ್ದು, ಪ್ರತಿ ವರ್ಷ ಕೋಟಿಗಟ್ಟಲೆ ಸರಕಾರದ ಹಣ ಬಾಡಿಗೆಗಾಗಿ ವ್ಯಮಾಡಲಾಗುತ್ತಿದೆ.

ಅದರಬದಲಾಗಿ ಸ್ವಂತ ಸರಕಾರಿ ಕಟ್ಟಡ ನಿರ್ಮಿಸಿ, ಬಾಡಿಗೆಗೆ ನೀಡುತ್ತಿರುವ ಹಣದಲ್ಲಿ ವಸತಿ ಶಾಲೆ ವಿದ್ಯಾರ್ಥಿಗಳಿಗೆ ಹೆಚ್ಚಿನ ಸೌಕರ್ಯ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ

ಸರ್.ಎಂ.ವಿಶ್ವೇಶ್ವರಯ್ಯ ಕಟ್ಟಡ ಕಾರ್ಮಿಕರ ಸಂಘವು ತಹಸೀಲ್ದಾರ ಮೂಲಕ ಸಮಾಜ ಕಲ್ಯಾಣ ಇಲಾಖೆ ಸಚಿವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.

ಈ ಸಂದರ್ಭದಲ್ಲಿ ಸಂಸ್ಥೆ ಅಧ್ಯಕ್ಷ ಪ್ರದೀಪ ಅಣಬಿ, ಶಿವು ಶಿರವಾಳ,

ಸುಭಾಷ ಹೋತಪೇಟ ರಾಜ್ಯಾಧ್ಯಕ್ಷರು ಅಂಗವಿಕಲರ ಸಂಘ, ಮಹೇಶ

ನಾಯಕ, ನಾಗು ಗುತ್ತಿಪೇಟ, ಇಂದ್ರ ಪೂಜಾರಿ, ದೇವು ರಸ್ತಾಪುರ, ಸಂಗು

ಶಹಾಪುರ, ದೇವು ತಳವಾರ, ಭೋಜಪ್ಪ ಮುಂಡಾಸ, ಅಂಬ್ರೇಶ ಶಿರವಾಳ, ಶರಣು ದಿಗ್ಗಿ, ಪರಶುರಾಮ ಇನ್ನಿತರರು ಇದ್ದರು.

# ಫೆ.04ರಂದು ಜಿಲ್ಲಾಡಳಿತದಿಂದ ಶ್ರೀಸವಿತಾ ಮಹರ್ಷಿ ಜಯಂತಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜ.30 : ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಫೆ.04ರ ಬೆಳಿಗ್ಗೆ 11 ಗಂಟೆಗೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಶ್ರೀಸವಿತಾ ಮಹರ್ಷಿ ಜಯಂತಿ ಹಮ್ಮಿಕೊಳ್ಳಲಾಗಿದೆ. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಶಾಲಾ ಶಿಕ್ಷಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಕೃಷ್ಣ ಭಾಜಪೇಯಿ, ರಾಯಚೂರ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಮಹಾದೇವಪ್ಪ ಅವರು ಉಪನ್ಯಾಸ ನೀಡುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ದತ್ತಪ್ಪ ಸಾಗೂರು ನಾಯಕ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕ್ಷಯ ನಿಯಂತ್ರಣಕ್ಕಾಗಿ 100 ದಿನ ಅಭಿಯಾನ; ವಿಶೇಷ ಜಾಥಾ



ರಾಯಚೂರು ಜ.30 : ಜಿಲ್ಲೆಯಲ್ಲಿ ಕ್ಷಯ (ಟಿ.ಬಿ) ರೋಗಿಗಳನ್ನು ಗುರುತಿಸಿ, ಅವರಿಗೆ ಸೂಕ್ತ ಚಿಕಿತ್ಸೆ ನೀಡಲು 100 ದಿನಗಳ ಟಿಬಿ ಅಭಿಯಾನವನ್ನು ಕೈಗೊಂಡಿದ್ದು, ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಬೇಕೆಂದು ಜಿಲ್ಲಾ ಕ್ಷಯ ಮತ್ತು ಏಡ್ಸ್ ನಿಯಂತ್ರಣಾಧಿಕಾರಿ ಡಾ.ಮಹ್ಮದ್ ಶಾಕೀರ ಮೊಹಿಯುದ್ದೀನ್ ಅವರು ಹೇಳಿದರು.

ಜನವರಿ 30ರ ಗುರುವಾರ ದಂದು ನಗರದ ಪೂರ್ಣಿಮಾ ಆಯುರ್ವೇದಿಕ್ ವೈದ್ಯಕೀಯ ಕಾಲೇಜಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ರಾಯಚೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಪೂರ್ಣಿಮಾ ಆಯುರ್ವೇದಿಕ್ ವೈದ್ಯಕೀಯ ಸಂಸ್ಥೆಯ ವತಿಯಿಂದ ಕ್ಷಯ ಅಭಿಯಾನದ ಅಂಗವಾಗಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

60 ವರ್ಷ ಮೇಲಿನವರು, ಮದ್ಯ, ಧೂಮಪಾನ ವ್ಯಸನಿಗಳು, ಕಡಿಮೆ ತೂಕ ಇರುವವರು ಹಾಗೂ ಕ್ಷಯ–ರೋಗದ ಹಾಗೂ ಇನ್ನಿತರ ಲಕ್ಷಣ ಹೊಂದಿರುವವರನ್ನು ದುರ್ಬಲ ಗುಂಪಿನ ವ್ಯಕ್ತಿಗಳು ಎಂದು ಗುರುತಿಸಲಾಗಿದ್ದು, ಈ ಹಿನ್ನೆಲೆಯಲ್ಲಿ ಕ್ಷಯ–ರೋಗದ ಬಗ್ಗೆ ನಿರಂತರ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮವು (ಎನ್‌ಟಿಇಪಿ) ಕೇಂದ್ರ ಸರ್ಕಾರದ ಯೋಜನೆಯಾಗಿದ್ದು, ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ (ಎನ್‌ಎಚ್‌ಎಂ) ಜಾರಿಗೊಳಿಸಲಾಗಿದೆ. ದೇಶವನ್ನು ಕ್ಷಯಮುಕ್ತಗೊಳಿಸುವುದು, ಕ್ಷಯರೋಗಕ್ಕೆ ಸಂಬಂಧಿಸಿದಂತೆ ಉಚಿತ ಪರೀಕ್ಷೆ ನಡೆಸುವುದು ಹಾಗೂ ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ಒದಗಿಸುವುದು ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದರು.

ಕ್ಷಯರೋಗಕ್ಕೆ ಚಿಕಿತ್ಸೆ, ಸೌಲಭ್ಯ; ಕ್ಷಯ ಪತ್ತೆಯಾದ ರೋಗಿಗಳಿಗೆ ಸಾಮಾನ್ಯವಾಗಿ 6 ತಿಂಗಳು ಚಿಕಿತ್ಸೆ ನೀಡಲಾಗುತ್ತದೆ. ಮಾತ್ರೆಗಳನ್ನು ನಿತ್ಯವೂ ಸೇವಿಸುವುದು, ಧೂಮಪಾನ–ಮದ್ಯಪಾನ ಮಾಡದಿರುವುದು, ಸಮಯಕ್ಕೆ ಸರಿಯಾಗಿ ಪೌಷ್ಟಿಕ ಆಹಾರ ಸೇವಿಸುವುದು ಸೇರಿದಂತೆ ವೈದ್ಯರು ಸೂಚಿಸಿದ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿದರೆ 6 ತಿಂಗಳಲ್ಲಿ ಕ್ಷಯದಿಂದ ಸಂಪೂರ್ಣವಾಗಿ ಗುಣಮುಖರಾಗಬಹುದು. ಕೆಲವು ಪ್ರಕರಣಗಳಲ್ಲಿ 18 ತಿಂಗಳುವರೆಗೆ ಚಿಕಿತ್ಸೆ ನೀಡಲಾಗುತ್ತದೆ ಎಂದು ಹೇಳಿದರು.

ಈ ವೇಳೆ ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿ ಡಾ.ಶಂಕರಗೌಡ ಎಸ್.ಪಾಟೀಲ್ ಅವರು ಮಾತನಾಡಿ, ಮನೆಮನೆ ಭೇಟಿ ವೇಳೆ ಗುರುತಿಸಿದ ವ್ಯಕ್ತಿಗಳಿಗಾಗಿ ಪ್ರತಿಯೊಂದು ಹಳ್ಳಿ ಹಾಗೂ ವಾರ್ಡ್ ಮಟ್ಟದಲ್ಲಿ ಆರೋಗ್ಯ ಶಿಬಿರ ನಡೆಸಲಾಗುತ್ತಿದೆ. ಆಸ್ಪತ್ರೆಗಳಲ್ಲಿ ಕಫ ಪರೀಕ್ಷೆಗೆ ಒಳಗಾಗಬೇಕು. ಆರಂಭದಲ್ಲೇ ಕ್ಷಯರೋಗ ಪತ್ತೆ ಮಾಡಿದರೆ ಚಿಕಿತ್ಸೆ ನೀಡುವುದು ಹಾಗೂ ಬೇರೆಯವರಿಗೆ ರೋಗ ಹರಡುವುದನ್ನು ತಡೆಯಲು ಸಹಕಾರಿಯಾಗುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಪೂರ್ಣಿಮಾ ಆಯುರ್ವೇದಿಕ್ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಚಂದ್ರಶೇಖರರೆಡ್ಡಿ ಎಸ್.ಕರಮುಡಿ, ಸಂಸ್ಥೆಯ ಉಪನ್ಯಾಸಕರಾದ ಡಾ.ಅಕ್ಕಮಹಾದೇವಿ, ಡಾ.ಉಮಾ ಯಾಳಗಿ, ಡಾ.ಸ್ವಾತಿ, ಡಾ.ಸಂತೋಷ ಕುಮಾರ್ ಸೇರಿದಂತೆ ಸಂಸ್ಥೆಯ 200ಕ್ಕೂ ಅಧಿಕ ವಿದ್ಯಾರ್ಥಿಗಳು ಇದ್ದರು.

# ವಂದಲಿ ಗ್ರಾಮದಲ್ಲಿ

## ಆರೋಗ್ಯ ತಪಾಸಣಾ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜ.30 : ದೇವದುರ್ಗ ತಾಲೂಕಿನ ಗಾಣಧಾಳ ಪ್ರಾಥಮಿಕ ಆರೋಗ್ಯ ಕೇಂದ್ರದ ವಂದಲಿ ಗ್ರಾಮದಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಅವರ ನೇತೃತ್ವದಲ್ಲಿ ಗರ್ಭಿಣಿಯರ ಮತ್ತು ಮಕ್ಕಳಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಯಿತು.

ಗ್ರಾಮದಲ್ಲಿ ಒಟ್ಟು 11,340 ಜನಸಂಖ್ಯೆಯಿದ್ದು, 1,797 ಮನೆಗಳಲ್ಲಿ 68 ಗರ್ಭಿಣಿಯರಿದ್ದಾರೆ. ಇದರಲ್ಲಿ 18 ಗಂಡಾಂತರ ಗರ್ಭಿಣಿಯರನ್ನು ಗುರುತಿಸಿ ಅವರಿಗೆ ಅಗತ್ಯವಿರುವ ಆರೋಗ್ಯ ಸೌಲಭ್ಯಗಳನ್ನು ಹಾಗೂ ಹೆಚ್ಚಿನ ಚಿಕಿತ್ಸೆ ಮತ್ತು ಗುರುತಿಸಿರುವ ಗರ್ಭಿಣಿಯರಿಗೆ ಪ್ರಾಥಮಿಕ ಹಂತದಲ್ಲಿ ಹೆಚ್ಚಿನ ಆರೋಗ್ಯ ಕಾಳಜಿ ವಹಿಸಲಾಗುತ್ತದೆ.

ಸ್ಕಾನಿಂಗ್, ರಕ್ತತಪಾಸಣೆ, ಪ್ರತಿ ತಿಂಗಳು 9ನೇ ದಿನಾಂಕದಂದು ವಿಶೇಷವಾಗಿ ಆರೋಗ್ಯ ಸೇವೆ ಕಡ್ಡಾಯವಾಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ಹಂತದಲ್ಲಿಯೇ ನೀಡಲಾಗುವುದು.

ಪ್ರತಿ ವಾರ ಗರ್ಭಿಣಿಯರ ನೋಂದಣಿ, ಗರ್ಭಿಣಿಯರಿಗೆ ಲಸಿಕೆ ನೀಡುವುದು, ಗರ್ಭಿಣಿಯರಿಗೆ ಪೌಷ್ಠಿಕ ಆಹಾರ ಸೇವನೆ ಮಾಡುವ ಕುರಿತು, ಗರ್ಭಿಣಿಯರಲ್ಲಿ ರಕ್ತ ಹೀನತೆ ಕುರಿತು ಜಾಗೃತಿ ಮೂಡಿಸಲಾಗುತ್ತದೆ.

0–5 ವರ್ಷದ ಮಕ್ಕಳಿಗೆ ಮಾರಣಾಂತಿಕ ಕಾಯಿಲೆಗಳಾದ ಬಾಲಾಕ್ಷಯ, ಪೋಲಿಯೊ, ಗಂಟಲುಮಾರಿ, ಜಾಂಡೀಸ್, ಅತಿಸಾರ, ನಾಯಿ ಕೆಮ್ಮು, ಧರ್ನುವಾಯು, ಧಢಾರ ಮತ್ತು ರುಬೆಲ್ಲ, ಮಿದುಳು ಜ್ವರ, ಇತ್ಯಾದಿ ಕಾಯಿಲೆಗಳಿಗೆ ಶಿಬಿರದಲ್ಲಿ ಸ್ಥಳದಲ್ಲಿಯೇ ಮಕ್ಕಳಿಗೆ ಲಸಿಕೆ ನೀಡಲಾಗುವುದು ಎಂದು ತಿಳಿಸಲಾಯಿತು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳ ತಂಡ, ದೇವದುರ್ಗ ತಾಲೂಕ ಆರೋಗ್ಯ ಅಧಿಕಾರಿಗಳು ಹಾಗೂ ತಂಡ, ಗಾಣಧಾಳ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಸೇರಿದಂತೆ ಇತರೆ ಸಿಬ್ಬಂದಿ ಉಪಸ್ಥಿತರಿದ್ದರು.

# ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ಸೇರಿಸಿ, ಮುಖ್ಯವಾಹಿನಿಗೆ ತನ್ನಿ: ಶಶಿಧರ್ ಕೋಸಂಬೆ

ಯಾದಗಿರಿ:ಜ:30:ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಪುನಃ ಶಾಲೆಗೆ ಸೇರಿಸುವ ಮೂಲಕ ಅವರನ್ನು ಮುಖ್ಯವಾಹಿನಿಗೆ ತರುವಂತೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶ್ರೀ ಶಶಿಧರ್ ಕೋಸಂಬೆ ಅವರು ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು "ಶಾಲೆಯಲ್ಲಿದೆ ಶಿಕ್ಷಣದ ಜೊತೆಗೆ ರಕ್ಷಣೆ "ಶೀರ್ಷಿಕೆಯಡಿಯಲ್ಲಿ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಏರ್ಪಡಿಸಲಾಗಿದ್ದ "ಉಚಿತ ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ– 2009 ಕುರಿತ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಪುನಃ ಶಾಲೆಗೆ ಸೇರಿಸುವ ಗುರುತರ ಜವಾಬ್ದಾರಿ ಶಿಕ್ಷಣ ಇಲಾಖೆ ಅಧಿಕಾರಿಗಳ ಮೇಲಿದೆ. ಜಿಲ್ಲೆಯ ಸುಮಾರು 54,481 ಮಕ್ಕಳ ಆಧಾರ್ ಮೌಲ್ಯೀಕರಣ ಆಗಬೇಕಾಗಿದ್ದು, ಶಿಕ್ಷಣ ಇಲಾಖೆಯ ಆಯುಕ್ತರ ನಿರ್ದೇಶನದ ಮೇರೆಗೆ ಒಂದು ವಾರದಲ್ಲಿ ಇದನ್ನು ಪೂರ್ಣಗೊಳಿಸಲು ಸೂಚ್ಚಿಸಲಾಗಿದೆ. ಇನ್ನೂ ವರೆಗೆ ಈ ಕಾರ್ಯ ಆಗದೇ ಇರುವ ಬಗ್ಗೆ ಶಿಕ್ಷಣ ಇಲಾಖೆ ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ಅವರು, ಈ ಕುರಿತು ಆಯೋಗ ಗಂಭೀರವಾಗಿ ಪರಿಗಣಿಸಲಿದೆ ಎಂದು ಹೇಳಿದರು.

ಬಡ ಮಕ್ಕಳು ಸರ್ಕಾರದ ವಿವಿಧ ಸೌಲಭ್ಯಗಳಿಂದ ವಂಚಿತರಾಗಬಾರದು. ಶಿಶ್ಯವೇತನ, ಶೈಕ್ಷಣಿಕ



ಸೌಲಭ್ಯಗಳು ಅವರಿಗೆ ಸಕಾಲಕ್ಕೆ ದೊರಕಿಸುವ ಸದುದ್ದೇಶವನ್ನು ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಹೊಂದಿದೆ. ಈ ಹಿನ್ನೆಲೆಯಲ್ಲಿ ಆಧಾರ ಪರಿಶೀಲಿಸಿ ಸರಿಪಡಿಸುವ ಕಾರ್ಯ ತುರ್ತಾಗಿ ಕೈಗೊಳ್ಳಬೇಕು. ಸ್ಯಾಟ್ಸ(ಖಂಖಿಖ) ಅಪಾರ(ಂಕಂಂಖ) ತಂತ್ರಾಂಶಗಳ ಬಗ್ಗೆ ಈಗಾಗಲೇ ಗೂಗಲ್ ಮತ್ತು ಭೌತಿಕ ತರಬೇತಿಗಳನ್ನು ಸಹ ನೀಡಲಾಗಿದೆ. ಕಾರಣ ಆಧಾರ್ ಸರಿಪಡಿಸುವ ಜೊತೆಗೆ ಶಾಲೆಯಿಂದ ಹೊರಗೆ ಉಳಿದ ಮಕ್ಕಳನ್ನು ಪುನಃ ಶಾಲೆಗೆ ಸೇರಿಸಿ ಮುಖ್ಯವಾಹಿನಿಗೆ ತರುವಂತೆ ಅವರು ಸೂಚಿಸಿದರು. ಜಿಲ್ಲೆಯ ಎಲ್ಲ ಶಾಲೆಗಳಲ್ಲಿ ಮಕ್ಕಳ ರಕ್ಷಣಾ ನೀತಿ –2016ರ ಅನ್ವಯ ಸಕಲ ಕ್ರಮಗಳನ್ನು ಕೈಗೊಳ್ಳಬೇಕು. ಮಕ್ಕಳ ಸುರಕ್ಷಾ ಸಮಿತಿಗಳನ್ನು ರಚಿಸಬೇಕು. ಕಡ್ಡಾಯವಾಗಿ ಸಲಹಾ ಪೆಟ್ಟಿಗೆ ಇಡಬೇಕು. ಕಾಲಕಾಲಕ್ಕೆ ಬಿಸಿಊಟ ಸಮಸ್ಯೆಗಳನ್ನು ಬಗೆಹರಿಸಬೇಕು. ಮಕ್ಕಳಿಗೆ ಸಮರ್ಪಕ ಆಹಾರ ಪೂರೈಕೆ ಆಗದಿದ್ದಲ್ಲಿ, ಆಹಾರ ಭದ್ರತಾ ಕಾಯ್ದೆಯ ಉಲ್ಲಂಘನೆ ಎಂದು ಪರಿಗಣಿಸಲಾಗುವುದು. ಪದೇ ಪದೇ ಲೋಪ ಸಂದರ್ಭದಲ್ಲಿ ಸೊ– ಮೋಟೊ ಪ್ರಕರಣ ದಾಖಲೆಗೂ ಕ್ರಮ ಕೈಗೊಳ್ಳಲಾಗುವುದು. ಉಚಿತ ಮತ್ತು ಕಡ್ಡಾಯ ಶಿಕ್ಷಣದ ಹಕ್ಕು ಕಾಯ್ದೆ–2009 ರನ್ವಯ ಕ್ರಮ ಸಹ ಕೈಗೊಳ್ಳಬೇಕು. ಇದಕ್ಕೆ ತಪ್ಪಿದಲ್ಲಿ ಸಂಬಂಧ ಪಟ್ಟವರ ವಿರುದ್ಧ ಬೆಂಗಳೂರಿಗೆ ಕರೆದು ಆಯೋಗದ ಮುಂದೆ ವಿಚಾರಣೆಗೆ ಒಳಪಡಿಸಲಾಗುವುದು. ವಿಶೇಷ ಸಂದರ್ಭದಲ್ಲಿ ಅವಮಾನತ್ತುನಂತಹ ಮತ್ತು ಇನ್ಕ್ರಿಮೆಂಟ್ ತಡೆ ಹಿಡಿಯುವಂತಹ ಕ್ರಮದ ಬಗ್ಗೆಯೂ ಕ್ರಮ ಕೈಗೊಳ್ಳಲು ಮೇಲಾಧಿಕಾರಿಗಳಿಗೆ ತಿಳಿಸಲಾಗುವುದೆಂದು ಎಚ್ಚರಿಕೆ ನೀಡಿದರು.

ಅತಿಥಿ ಉಪನ್ಯಾಸಕರ ನೇಮಕಾತಿ ಸಂದರ್ಭದಲ್ಲಿ ಕಡ್ಡಾಯವಾಗಿ ಅಭ್ಯರ್ಥಿಗಳ ಪೊಲೀಸ್ ವೆರಿಫಿಕೇಶನ್ ಆಗಿರಬೇಕು. ಶಾಲೆಗಳಲ್ಲಿ ಕಡ್ಡಾಯವಾಗಿ ಬದ್ಧತಾ ಪ್ರಮಾಣಪತ್ರವನ್ನು ಪಡೆಯಲು ಸೂಚಿಸಿದ ಅವರು, ಜಿಲ್ಲಾ ಮಟ್ಟದಿಂದ ತಾಲೂಕ ಹಾಗೂ ಗ್ರಾಮ ಮಟ್ಟದ ವರೆಗಿನ ಅಧಿಕಾರಿಗಳು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು. ಮಕ್ಕಳ ಭವಿಷ್ಯವನ್ನು ರೂಪಿಸುವಂತಹ ಗುರುತರ ಜವಾಬ್ದಾರಿ ಹೊಂದಿದ ಇಲಾಖೆ ಇದಾಗಿರುವುದರಿಂದ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಬಿ.ಆರ್.ಪಿ ,ಸಿ ಆರ್ ಪಿ , ಶಿಕ್ಷಣ ಸಮನ್ವಯಾಧಿಕಾರಿಗಳು ಹಾಗೂ ಆಯಾ ಶಾಲೆಗಳ ಮುಖ್ಯೋಪಾಧ್ಯಾಯರು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಮಕ್ಕಳ ಸಮಸ್ಯೆಗಳನ್ನು ಆದ್ಯತೆ ಮೇಲೆ ಪರಿಹರಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಅವರು ಜಿಲ್ಲೆಯ ವಿವಿಧ ಶಾಲೆಗಳಲ್ಲಿರುವ ಶಿಕ್ಷಕರ ಕೊರತೆ, ಮೂಲಸೌಕರ್ಯಗಳ ಕೊರತೆ, ಶೌಚಾಲಯ, ಶುದ್ಧ ಕುಡಿಯುವ ನೀರು, ಆಟದ ಮೈದಾನ, ಕಾಂಪೌಂಡ್ ಸೇರಿದಂತೆ ಇನ್ನಿತರ ಕುಂದುಕೊರತೆಗಳ ಬಗ್ಗೆ ಅವಶ್ಯಕ ಮಾಹಿತಿಯನ್ನು ಪಡೆದರು. ಇಲಾಖೆಯ ಉಪ ನಿರ್ದೇಶಕರಾದ ಶ್ರೀ ಚನ್ನಬಸಪ್ಪ ಮುಧೋಳ ಅವರು ಮಾತನಾಡಿ ಮಕ್ಕಳ ಹಕ್ಕುಗಳ ರಕ್ಷಣಾ ಅಯೋಗಕ್ಕೆ ಸಂಬಂಧಪಟ್ಟ ಅಧಿಕಾರಿ ಮತ್ತು ಸಿಬ್ಬಂದಿಗಳು ವಸ್ತುನಿಷ್ಠ ವರದಿಗಳನ್ನು ಸಲ್ಲಿಸಬೇಕು. ಯಾವುದೇ ರೀತಿಯ ಸಬೂಬು ಹೇಳದೆ ತಮ್ಮ ಕರ್ತವ್ಯಗಳನ್ನು ಪ್ರಾಮಾಣಿಕತೆಯಿಂದ ನಿರ್ವಹಿಸುವಂತೆ ಸೂಚನೆ ನೀಡಿದರು. ಸಭೆಯಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರು ಹುತಾತ್ಮರಾದ ಇಂದಿನ ದಿನ ಎರಡು ನಿಮಿಷ ಮೌನ ಆಚರಿಸಿ ಗೌರವ ಸಲ್ಲಿಸಲಾಯಿತು.

ಮಕ್ಕಳ ರಕ್ಷಣಾಧಿಕಾರಿ ಪ್ರೇಮಮೂರ್ತಿ ಸಿಪಿಐ ವಿಜಯಕುಮಾರ್ ಅವರು ಉಪಸ್ಥಿತರಿದ್ದರು.

## ರಾಯಚೂರ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾಗಿ ಈರಪ್ಪ ಅಧಿಕಾರ ಸ್ವೀಕಾರ

ಮಲ್ಲಮ ನುಡಿ ವಾರ್ತೆ ರಾಯಚೂರು ಜ.30: ಇಲ್ಲಿನ ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾಗಿ ಈರಪ್ಪ ಅವರು ಗುರುವಾರ ಅಧಿಕಾರ ವಹಿಸಿಕೊಂಡರು.

ಸಾರ್ವಜನಿಕರು ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರ ವೈಯಕ್ತಿಕ ಗಮನಕ್ಕೆ ತರುವಂತಹ ಸರಕಾರಿ ಪತ್ರಗಳು ಹಾಗೂ ಅರೆ ಸರಕಾರಿ ಪತ್ರಗಳನ್ನು ಈರಪ್ಪ ಆಯುಕ್ತರು, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರ, ರಾಯಚೂರು ಐ.ಡಿ.ಎಸ್.ಎಮ್.ಟಿ ಬಡವಾಣೆ, ಮಂತ್ರಾಲಯ ರೋಡ್, ರಾಯಚೂರಿಗೆ ಕಳುಹಿಸಿಕೊಡುವಂತೆ ಪ್ರಕಟಣೆ ತಿಳಿಸಿದೆ.

## ಕಂದಾಯ ಇಲಾಖೆಯ ಅಧಿಕಾರಿಗಳಿಗೆ ಮೇಲಾಧಿಕಾರಿಗಳ ಕಿರುಕುಳ ಸೂಕ್ತ ಕ್ರಮಕ್ಕೆ ಆಗ್ರಹ



ಮಲ್ಲಮ್ಮ ನುಡಿ ಶಹಾಪೂರ:ಜ.30:ಕಂದಾಯ ಇಲಾಖೆಯ ಗ್ರಾಮ ಆಡಳಿತ ಅಧಿಕಾರಿಗಳ ಮೇಲೆ ದೌರ್ಜನ್ಯ ಮಾಡುತ್ತಿರುವ ಚಿಕ್ಕಮಗಳೂರು ಜಿಲ್ಲೆಯ ಜಿಲ್ಲಾಧಿಕಾರಿ ಶ್ರೀಮತಿ ಮೀನಾನಾಗರಾಜ್ ಮತ್ತು ಅಪರ ಜಿಲ್ಲಾಧಿಕಾರಿ ಶ್ರೀ ಕನಕರೆಡ್ಡಿ ಇವರ ದುರಾಡಳಿತ ಮತ್ತು ದರ್ಪದ ಕಾರಣಗಳಿಂದಾಗಿ ಕೂಡಲೇ ಅವರನ್ನು ವರ್ಗಾವಣೆ ಮಾಡಿ ನ್ಯಾಯ ಒದಗಿಸಿಕೊಡಬೇಕೆಂದು ಶಹಾಪೂರ ತಾಲ್ಲೂಕು ಗ್ರಾಮ ಆಡಳಿತ ಅಧಿಕಾರಿಗಳ ಸಂಘದಿಂದ ಕಪ್ಪು ಪಟ್ಟಿ ಧರಿಸಿ ಮಾನ್ಯ ತಹಸೀಲ್ದಾರರ ಶ್ರೀ ಉಮಾಕಾಂತ ಹಳ್ಳೆ ಅವರಿಗೆ ಮನವಿ ಸಲ್ಲಿಸಲಾಯಿತು. ಸನ್ಮಾನ್ಯ ಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಸನ್ಮಾನ್ಯ ಶ್ರೀ ಕೃಷ್ಣಭೈರೇಗೌಡ ರವರಿಗೆ ಜಿಲ್ಲಾ ಉಪಾಧ್ಯಕ್ಷರಾದ ಶ್ರೀ ರಮೇಶ್ ರಾಠೋಡರವರ ನೇತೃತ್ವದಲ್ಲಿ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕಂದಾಯ ನಿರೀಕ್ಷಕರಾದ ಶ್ರೀ ಮಹೇಂದ್ರಸ್ವಾಮಿ ಶ್ರೀ ಭೀಮರೆಡ್ಡಿ ಹಾಗೂ ಗ್ರಾಮ ಆಡಳಿತ ಅಧಿಕಾರಿಗಳಾದ ಶ್ರೀ ರಾಜುಪೂಜಾರಿ,ವಿಜಯಕುಮಾರ ರಾಠೋಡ,ಸಂತೋಷಗಾಬರಿ, ಗುರುಬಸವರಾಜ ,ಸಿದ್ದೇಶ್ ,ಜುಲ್ಪೇಖರ್ ಶ್ರೀಮತಿಗಾಯತ್ರಿ ಮೋರಗೇರಿ,ರೇಷ್ಮಾ, ಲಕ್ಷ್ಮೀ ಪತ್ತಾರ ಹಾಗೂ ಶಹಾಪೂರ ತಾಲ್ಲೂಕಿನ ಇತರ ಗ್ರಾಮ ಆಡಳಿತ ಅಧಿಕಾರಿಗಳು ಹಾಜರಿದ್ದರು.

# ಸಡಗರ ಸಂಭ್ರಮದದಿಂದ ಜರುಗಿದ ಸ್ವಾಮಿ ವಿವೇಕಾನಂದರ ಜಯಂತಿ

## ವಿವೇಕಾನಂದರ ತತ್ವ ಆದರ್ಶಗಳು ಅಳವಡಿಸಿಕೊಳ್ಳಿ:- ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ



ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ:ಜೀವನದಲ್ಲಿ ಸ್ವಾಮಿ ವಿವೇಕಾನಂದರ ಆದರ್ಶ ತತ್ವಗಳನ್ನೂ ಅಳವಡಿಸಿಕೊಳ್ಳಿ ಎಂದು ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ನುಡಿದರು. ತಾಲೂಕಿನ ನಿರ್ಣಾ ಗ್ರಾಮದಲ್ಲಿ ಬುಧವಾರ ಸ್ವಾಮಿ ವಿವೇಕಾನಂದ ಗ್ರಾಮೀಣ ಅಭಿವೃದ್ಧಿ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ ಸ್ವಾಮಿ ವಿವೇಕಾನಂದರ 163ನೇ ಜಯಂತೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸ್ವಾಮಿ ವಿವೇಕಾನಂದ ಅವರು ಕೇವಲ ಭಾರತ ಜನರಿಗೆ ಸ್ಪೂರ್ತಿಯಾಗದೆ ಇಡೀ ಜಗತ್ತಿನ ಜನರಿಗೆ ಸ್ಪೂರ್ತಿಯಾಗಿದ್ದಾರೆ, ಸ್ವಾಮಿ ವಿವೇಕಾನಂದರ ಆದರ್ಶಗಳು, ತತ್ವಗಳು ಯುವಕರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ತಮ್ಮ ಉಜ್ವಲ ಭವಿಷ್ಯ ರೂಪಿಸಿಕೊಳ್ಳಿ. ಭಾರತ ಮತ್ತು ಅಮೇರಿಕಾ ಎರಡೂ ದೇಶಗಳಿಗೆ ಮೂಲ ಬುನಾದಿ ಹಾಕಿದ್ದು ಸ್ವಾಮಿ ವಿವೇಕಾನಂದರು ಹೀಗೆ ದೇಶ ಬಗ್ಗೆ ಹಾಗೂ ಯುವಕರ ಜೀವನ ಕಾಳಜಿ ಉಳ್ಳ ಸಂತ ಸ್ವಾಮಿ ವಿವೇಕಾನಂದರು ಎಂದರು. ಸ್ವಾಮಿ ವಿವೇಕಾನಂದ ಗ್ರಾಮೀಣ ಅಭಿವೃದ್ಧಿ ಟ್ರಸ್ಟನವರು ಪ್ರತಿ ವರ್ಷ ತುಳಜಾಪುರ್ ಅಂಬಾ ಭವಾನಿ ದೇವಿಗೆ ಹೋಗುವ ಪಾದಯಾತ್ರಿಗಳಿಗೆ ಅನ್ನದಾಸೋಹ, ಆರೋಗ್ಯ ಚಿಕಿತ್ಸೆ ಸೇವೆ ಮಾಡುತ್ತಾರೆ, ಹೀಗೆ ಅನೇಕ ಒಳ್ಳೆಯ ಕಾರ್ಯಗಳು ಟ್ರಸ್ಟ್ ವತಿಯಿಂದ ಮಾಡುತ್ತಿದ್ದಾರೆ ಅವರ ಕಾರ್ಯ ಶ್ಲಾಘನೀಯವಾಗಿದ್ದೆ ಎಂದರು. ಯುವಕರು ಕೆಟ್ಟ ಚಟಗಳಿಗೆ ಬಲಿಯಾಗದೆ ಒಳ್ಳೆಯ ನಾಗರಿಕರಾಗಬೇಕು, ಆನ್ಲೈನ್ ಜೂಜಾಟಗಳಿಗೆ ಬಲಿಯಾಗಬೇಡಿ ಎಂದು ತಿಳಿಸಿದರು. ಷ. ಬ್ರ. ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಗವಿಮಠ ಬಸವಕಲ್ಯಾಣ, ಕಾರ್ಯಕ್ರಮ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಸ್ವಾತಂತ್ರ್ಯಪೂರ್ವ ಮತ್ತು ಸ್ವಾತಂತ್ರ್ಯೋತ್ತರ ಭಾರತದ ವಿವಾದಾತೀತ ವ್ಯಕ್ತಿತ್ವಗಳಲ್ಲಿ ಮೊದಲ ಸಾಲಿನಲ್ಲಿ ಗುರುತಿಸಲ್ಪಡುವವರು ಸ್ವಾಮಿ ವಿವೇಕಾನಂದರು. 1863ರಲ್ಲಿ ಜನಿಸಿ ಕಲ್ಕತ್ತದ ದತ್ತ ಮನೆತನದ ಕಣ್ಮಣಿಯಾಗಿದ್ದ ನರೇಂದ್ರನಾಥ ದತ್ತ ಅಂದಿನ ಯುವಜನತೆಯಂತೆ ಆಧುನಿಕ ವಿದ್ಯಾಭ್ಯಾಸ ಪಡೆದು ಇಹಪ್ರಪಂಚದ ಜೀವನಕ್ಕೆ ಸನ್ನದ್ಧನಾಗುತ್ತಿದ್ದನಾದರೂ ಒಳಗೊಂದು ಆಂತರಿಕ ತುಡಿತ ಕಾಡುತ್ತಿತ್ತು. ಹಿಂದೆ ಬುದ್ಧನಿಗಾದಂತೆ ಮುಂದೆ ಕರಮಚಂದ್ರಗಾಂಧಿಗಾಗುವಂತೆ ಸಂಕುಚಿತ,ಸ್ವಾರ್ಥ ಬದುಕಿನಾಚೆಗೆ ಉತ್ತರ ಅಡಗಿರಬಹುದೆಂಬ ಶಂಕೆ ಕಾಡುತ್ತಿತ್ತು. ಯುವ ಜನರಿಗೆ ವಿವೇಕಾನಂದರು ಆದರ್ಶ ಪ್ರಾಯರಷ್ಟೇ ಅಲ್ಲ, ಅವರ ವ್ಯಕ್ತಿತ್ವ ಎಲ್ಲ ಯುವಕ□ಯುವತಿಯರನ್ನು ಸೂಜಿಗಲ್ಲಿನಂತೆ ಆಕರ್ಷಿಸುತ್ತದೆ. ಇದಕ್ಕೆ ಅನೇಕ ಕಾರಣಗಳಿವೆ. ಅದರಲ್ಲಿ ಮುಖ್ಯವಾದದ್ದು ಅವರು ಸಾರಿದ್ದು ಶಕ್ತಿಯ ಸಂದೇಶವನ್ನು. ಅವರ ಬೋಧನೆಗಳಲ್ಲಿ ನಾವು ಕಾಣುವ ಸಂದೇಶವೆ, ಶಕ್ತಿಯ ಜೀವನ ಎಂದು ಹೇಳಿದರು. ಸ್ವಾಮಿ ವಿವೇಕಾನಂದ ಗ್ರಾಮೀಣ ಅಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಾವು 1993–94ನೇ ಬ್ಯಾಚಿನಲ್ಲಿ ನಾವು 10ನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡಿರುವ ಎಲ್ಲಾ ಸ್ನೇಹಿತರು ಸೇರಿ–ಕೊಂಡು ಸ್ವಾಮಿ ವಿವೇಕಾನಂದ ಗ್ರಾಮೀಣ ಅಭಿವೃದ್ಧಿ ಟ್ರಸ್ಟ್ ಸ್ಥಾಪನೆ ಮಾಡಿದ್ದೇವೆ. ಪ್ರತಿ ವರ್ಷ 15 ಜನ ಬಡ ವಿದ್ಯಾರ್ಥಿಗಳ ಶಾಲಾ ಶುಲ್ಕ ನಾವೇ ಭರಿಸುತ್ತೇವೆ, ಮುಂಬರುವ ಒಂದು ವರ್ಷದಲ್ಲಿ 1 ಎಕರೆ 10 ಗುಂಟೆ ಜಮೀನಿನಲ್ಲಿ ಅನಾಥಾಶ್ರಮ, ವೃದ್ಧಾಶ್ರಮ ಸ್ಥಾಪಿಸಿ, ಅದೇ ಸ್ಥಳದಲ್ಲಿ ಸ್ವಾಮಿ ವಿವೇಕಾನಂದರ ಜಯಂತಿ ಆಚರಣೆ ಮಾಡುವುದಾಗಿ ಭರವಸೆ ನೀಡಿದರು. ನಂತರ ವಿವಿಧ ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳಿಂದ ಸಂಸ್ಕೃತಿ ಕಾರ್ಯಕ್ರಮಗಳು ಜರುಗಿದವು. ಈ ಸಂದರ್ಭದಲ್ಲಿ ರಾಜ್ಯ ಪರಿಷತ್ ಸದಸ್ಯ ರಾಜ–ರೆಡ್ಡಿ ಶಾಹಬಾದೆ, ಗ್ರಾಮ ಪಂಚಾಯತ್ ಪ್ರಭಾರಿ ಅಧ್ಯಕ್ಷ ಸಂಜೀವಕುಮಾರ ಕಿರಣ, ತಹಶೀಲ್ದಾರ್ ಮಂಜುನಾಥ ಪಂಚಾಳ, ಶಿವಾಜಿ ಬ್ರಿಗೇಡ್ ರಾಜ್ಯಾಧ್ಯಕ್ಷ ಗುರುಶಾಂತಟೆಂಗಳಿ, ಗುರುನಾಥ ಬಗದಲ, ಶಂಕರ ಕುಲಕರ್ಣಿ, ಅರುಣಕುಮಾರ ಪಿ. ಬಾವಗಿ, ಟ್ರಸ್ಟನ ಪದಾಧಿಕಾರಿಗಳು ಸೇರಿದಂತೆ ವಿದ್ಯಾರ್ಥಿಗಳು, ಹಿರಿಯರು, ಯುವಕರು, ಗ್ರಾಮಸ್ಥರು ಉಪಸ್ಥಿತರಿದ್ದರು.

## ಶಾಲೆಯಲ್ಲಿದೆ ಶಿಕ್ಷಣದ ಜೊತೆ ರಕ್ಷಣೆ ಕುರಿತು ಕಾರ್ಯಾಗಾರ

ಬಾಗಲಕೋಟೆ : ಜ. 30 : ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಮಕ್ಕಳ ರಕ್ಷಣಾ ಆಯೋಗ, ಜಿಲ್ಲಾಡಳಿತ, ಜಿ.ಪಂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಜನೇವರಿ 31 ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾಡಳಿತ ಭವನದಲ್ಲಿರುವ ಆಡಿಟೋರಿಯಂ ಹಾಲ್‌ನಲ್ಲಿ ಶಾಲೆಯಲ್ಲಿದೆ ಶಿಕ್ಷಣದ ಜೊತೆ ರಕ್ಷಣೆ ಕುರಿತು ಒಂದು ದಿನದ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ.

# ಜೆಸ್ಕಾಂನಿಂದ ಹುತಾತ್ಮರಿಗೆ ಗೌರವ ಸಮರ್ಪಣೆ



ಮಲ್ಲಮ ನುಡಿ ವಾರ್ತೆ ಕಲಬುರಗಿ, ಜ.30, 2025: ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪ್ರಾಣತ್ಯಾಗ ಮಾಡಿರುವರ ಸ್ಮರಣಾರ್ಥವಾಗಿ ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಗಮ ಕಚೇರಿಯಲ್ಲಿ ಅಧಿಕಾರಿಗಳು ಹಾಗೂ ನೌಕರರ ವತಿಯಿಂದ ಗುರುವಾರ ಬೆಳಗ್ಗೆ 11 ಗಂಟೆಗೆ ಎರಡು ನಿಮಿಷಗಳ ಕಾಲ ಮೌನ ಆಚರಿಸುವ ಮೂಲಕ ಹುತಾತ್ಮರಿಗೆ ಗೌರವ ಸಲ್ಲಿಸಲಾಯಿತು. ಸ್ವಾತಂತ್ರ್ಯಕ್ಕಾಗಿ ಹಾಗೂ ದೇಶಕ್ಕಾಗಿ ಹುತಾತ್ಮರಾದ ಎಲ್ಲ ಸೈನಿಕರಿಗೆ, ಸ್ವಾತಂತ್ರ್ಯ ಹೋರಾಟಗಾರರಿಗೆ ನಮ್ಮ ಕಡೆಯಿಂದ ನಮನ. ಅವರ ಈ ಒಂದು ಕಾರ್ಯಕ್ಕೆ ಹಾಗೂ ತ್ಯಾಗದ ಪ್ರತೀಕವಾಗಿ ಪ್ರತಿ ವರ್ಷ ಜನವರಿ 30 ರಂದು ಹುತಾತ್ಮರ ದಿನವನ್ನು ಆಚರಿಸಲಾಗುತ್ತದೆ. ನಾವು ನಾಡಿನಲ್ಲಿ ಚನ್ನಾಗಿ ಇದ್ದೇವೆ ಎಂದರೆ, ಬಿಸಿಲು, ಗಾಳಿ, ಮಳೆ ಎನ್ನದೇ ದಿನದ 24 ಯೂ ಗಡಿ ಕಾಯುವ ಸೈನಿಕರಿಂದ ಮತ್ತು ನಮಗೆ ಸ್ವಾತಂತ್ರ್ಯ ಒದಗಿಸಿಕೊಟ್ಟ ಸ್ವಾತಂತ್ರ್ಯ ಹೋರಾಟಗಾರರಿಂದ. ತಮ್ಮ ಪ್ರಾಣವನ್ನು ಪಣಕ್ಕಿಟ್ಟು ನಮ್ಮನ್ನು ರಕ್ಷಿಸಿದವರಿಗೆ ಈ ಮೂಲಕ ಗೌರವ ಅರ್ಪಿಸೋಣ ಎಂದು ಜೆಸ್ಕಾಂ ಮುಖ್ಯ ಅಭಿಯಂತರರಾದ ವೇಂಕಟೇಶ್ ಪ್ರಸಾದ್ ಅವರು ಹೇಳಿದರು.

ಈ ವೇಳೆ ಆರ್ಥಿಕ ಅಧಿಕಾರಿಗಳಾದ ಸಂತೋಷ ಹಿಬಾರೆ, ಅಧೀಕ್ಷಕ ಅಂಭಿಯಂತರರಾದ ಮಹೇಶ್ ಮತ್ತು ರಾಮಚಂದ್ರ, ಮುಖ್ಯ ಹಣಕಾಸು ಅಧಿಕಾರಿ ಮುರಳಿಧರನ್ ನಾಯಕ್, ಸಲೀಂ ಪಟೇಲ್ ಹಾಗೂ ಅನೀಲ್ ಕುಮಾರ್ ಸೇರಿದಂತೆ ಜೆಸ್ಕಾಂನ ಎಲ್ಲ ಅಧಿಕಾರಿಗಳು ಹಾಗೂ ನೌಕರರು ಪಾಲ್ಗೊಂಡಿದ್ದರು.

# ಉತ್ತಮ ಆರೋಗ್ಯದ ಕಡೆ ಗಮನ ಹರಿಸಬೇಕು




ಯಾದಗಿರಿ : ಜ. 30 : ಮಾಜಿ ದೇವದಾಸಿ ಮಹಿಳೆಯರು,ಮೇಲಿಂದ ಮೇಲೆ ಆರೋಗ್ಯ ತಪಾಸಣೆ ಮಾಡಿಕೊಂಡು ಮಾಹಿತಿಯ ಜೊತೆಗೆ ಸೂಕ್ತ ಚಿಕಿತ್ಸೆಯನ್ನು ಪಡೆದುಕೊಳ್ಳಬೇಕು ಎಂದು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಮಹೇಶ ಬಿರದಾರ ಸಲಹೆ ನೀಡಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಭಾಂಗಣದಲ್ಲಿ ಜ.30ರ ಗುರುವಾರ ರಂದು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ದೇವದಾಸಿ ಪುನರ್ವಸತಿ ಯೋಜನೆ, ಯಾದಗಿರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,ಮತ್ತು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಮಾಜಿ ದೇವದಾಸಿ ಮಹಿಳೆಯರಿಗಾಗಿ ಜಿಲ್ಲಾ ಮಟ್ಟದ ಆರೋಗ್ಯ ತಪಾಸಣೆ ಹಾಗೂ ಜಾಗೃತ ಅರಿವು ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾದಿಂದ ಸಿಗುವ ಸೇವಾ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು, ಪೌಷ್ಟಿಕ ಆಹಾರವನ್ನು ಸೇವಿಸಬೇಕು. ರಕ್ತ ಹೀನತೆ ಆಗದಂತೆ ನೊಡಿಕೊಳ್ಳಬೇಕು, ಉತ್ತಮ ಆರೋಗ್ಯದ ಕಡೆ ಗಮನ ಹರಿಸಬೇಕು, ದೇವದಾಸಿ ಪದ್ಧತಿ ಸಮಾಜಕ್ಕೆ ಅಂಟಿದ ಕಳಂಕ. ಇದು ಸಾಮಾಜಿಕ ಪಿಡುಗಾಗಿದ್ದು, ಇದರಿಂದ ಹತ್ತು ಹಲವು ರೋಗಗಳು ತಗಲುವ ಸಾಧ್ಯತೆಗಳಿವೆ. ಆದ್ದರಿಂದ ದೇವದಾಸಿಯರು ಈ ಪದ್ಧತಿಯನ್ನು ಕಟ್ಟುನಿಟ್ಟಾಗಿ ವಿರೋಧಿಸುವಂತೆ ತಿಳಿಸಿದರು.

ದೇವದಾಸಿ ಪುನರ್ವಸತಿ ಯೋಜನೆ (ಪ್ರ) ಯೋಜನಾ ಅಧಿಕಾರಿಗಳಾದ ಶ್ರೀಮತಿ ಶಿವಮಂಗಳ ಅವರು ಪ್ರಸ್ತಾವಿಕವಾಗಿ ಮಾತನಾಡಿ, ದೇವದಾಸಿ ಪದ್ಧತಿಯ ಅನಿಷ್ಟ ಪದ್ಧತಿಯಿಂದ ಹೊರಬರಲು ಮತ್ತು ಮಾಜಿ ದೇವದಾಸಿ ಮಹಿಳೆಯರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸುವ ಉದ್ದೇಶದಿಂದ ಆರೋಗ್ಯ ಶಿಬಿರಗಳು ಮತ್ತು ಇತರೆ ಕಾರ್ಯಕ್ರಮಗಳನ್ನು ಈ ಪದ್ಧತಿಯನ್ನು ತೊಡೆದುಹಾಕಲು ಜಿಲ್ಲೆಗಳಲ್ಲಿ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಈ ಕಾರ್ಯಕ್ರಮವನ್ನು ಸದುಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಡಿಟಿಓ ಸಂಜೀವ್‌ಕುಮಾರ ರಾಯಚೂರಕರ್, ಡಿಎಮ್‌ಓ ಡಾ.ಸಾಜಿದ್, ಡಿಎಲ್‌ಓ ಡಾ.ಪದ್ಮಾನಂದ ಎ.ಗಾಯಕವಾಡ, ಎಫ್‌ಡಬ್ಲೂ ??ಓ ಡಾ.ಜೋತಿ ಕಟ್ಟಿಮನಿ, ನಿವೃತ, ಡಿಟಿಓ ಡಾ.ಭಗವಂತ್ ಅನ್ವಾರ್, ಟಿಹೆಚ್‌ಓ ಡಾ.ಹಣಮಂತರೆಡ್ಡಿ, ಡಿಹೆಚ್‌ಇಓ ತುಳಸಿರಾಮ ಚವ್ಹಾಣ, ಡಿ.ಎನ್.ಓ ರತ್ನಮ್ಮ, ಶ್ರೀ ಮತಿ ಸಹನಾ, ಡಾ.ಸುನಿತಾ, ಡಾ.ವಿನುತಾ, ಶ್ರೀ ಶಾಂತಿಲಾಲ್, ಶ್ರೀ ಬಾಗಪ್ಪ, ಶ್ರೀ ಶರಣಯ್ಯ ಸ್ವಾಮಿ, ಶ್ರೀ ನಾಗರಾಜ, ಶ್ರೀ ಬಸ್ಸಯ್ಯ ಗುತೆ–ದಾರ, ಶ್ರೀಮತಿ ಶೀಬಾರಾಣಿ, ಹಾಗೂ ಆರೋಗ್ಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆ ಅಧಿಕಾರಿ, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಶ್ರೀ ಮಾಳಪ್ಪ ಯಾದವ ಸ್ವಾಗತ ಹಾಗೂ ವಂದನಾರ್ಪಣೆಯನ್ನು ನೇರವೆರಿಸದರು.



ಚಿಟಗುಪ್ಪ:– ಇತ್ತಿಚೆಗೆ ವಿದ್ಯುತ್ ತಂತಿ ತಗುಲಿ ಸಾವನ್ನಪ್ಪಿದ್ದ ತಾಲೂಕಿನ ತಾಳಮಡಗಿ ಗ್ರಾಮದ ನಾಗೇಶ ಪಂಚಾಳ ಅವರ ಕುಟುಂಬಕ್ಕೆ ಸರ್ಕಾರದಿಂದ ಮಂಜೂರಾದ 5 ಲಕ್ಷ ರೂಪಾಯಿ ಮೊತ್ತದ ಪರಿಹಾರ ಚೆಕ್ ಕ್ಷೇತ್ರದ ಶಾಸಕ ಡಾ. ಸಿದ್ದು ಪಾಟೀಲ್ ಅವರ ಗೃಹ ಕಛೇರಿಯಲ್ಲಿ ವಿತರಿಸಿದರು. ಈ ಸಂದರ್ಭದಲ್ಲಿ ಜೆಸ್ಕಾಂ ಇಲಾಖೆ ಅಧಿಕಾರಿ ಅನೀಲಕುಮಾರ್ ಪಾಟೀಲ್ ಸೇರಿದಂತೆ ಮೃತರ ಕುಟುಂಬಸ್ಥರು ಉಪಸ್ಥಿತರಿದ್ದರು.

# ಇಂದು ಲಿಂ. ಕರಬಸಯ್ಯ ಸ್ವಾಮಿ ಹಿರೇಮಠ ಪುಣ್ಯ ಸ್ಮರಣೋತ್ಸವ



ಬಸವಕಲ್ಯಾಣ:–ತಾಲೂಕಿನ ಸುಕ್ಷೇತ್ರ ಹಾರಕೂಡ ಸಂಸ್ಥಾನ ಹಿರೇಮಠದ ಶ್ರೀ ಚನ್ನರೇಣುಕಾ ಬಸವ ಮಂಟಪದಲ್ಲಿ ಇಂದು ಸಂಜೆ 8:30 ಗಂಟೆಗೆ ಶ್ರೀ ಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ಪಾವನ ಸಾನಿಧ್ಯದಲ್ಲಿ ಪೂಜ್ಯಶ್ರೀ ಲಿಂಗೈಕ್ಯ ಕರಬಸಯ್ಯ ಸ್ವಾಮಿ ಹಿರೇಮಠ ಹಾರಕೂಡ ಇವರ ಪುಣ್ಯ ಸ್ಮರಣೋತ್ಸವದ ಅಂಗವಾಗಿ "ಕಲ್ಯಾಣ ಕರ್ನಾಟಕದ 9ನೇ ಸಂಗೀತ ದಿನಾಚರಣೆ" ಹಾಗೂ "ಕಲ್ಯಾಣ ಕರ್ನಾಟಕ ಸಂಗೀತ ರತ್ನ" ಪ್ರಶಸ್ತಿ ಪ್ರಧಾನ ಸಮಾರಂಭ ಜರುಗಲಿದೆ.

ದಿವ್ಯನೇತೃತ್ವವನ್ನು ಪೂಜ್ಯಶ್ರೀ ಡಾ. ಚನ್ನಬಸವಾನಂದ ಸ್ವಾಮಿಗಳು, ಪೀಠಾಧ್ಯಕ್ಷರು, ಚನ್ನಬಸವೇಶ್ವರ ಜ್ಞಾನಪೀಠ ಕುಂಬಳಗೋಡು, ಬೆಂಗಳೂರು ವಹಿಸುವರು.

ಅಧ್ಯಕ್ಷತೆಯನ್ನು ಸುಭಾಷಚಂದ್ರ ನಾಗರಾಳೆ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಹಾರಕೂಡ ವಹಿಸಲಿದ್ದಾರೆ. ಪಂಡಿತರವ ಚೌದರಿ, ವಕೀಲರು ಹಾರಕೂಡ, ಸಮಾರಂಭವನ್ನು ದೀಪ ಬೆಳಗಿಸಿ ಉದ್ಘಾಟಿಸುವರು.

ರವೀಂದ್ರ ಸೋರಗಾಂವಿ, ಖ್ಯಾತ ಚಲನಚಿತ್ರ ಹಿನ್ನೆಲೆ ಗಾಯಕರು ಬೆಂಗಳೂರು.

ಡಾ.ಕೇಶವರಾವ ಸೂರ್ಯವಂಶಿ ಭಾಲ್ಕಿ, ತಬಲಾವಾದಕರು.

ಕರ್ನಾಟಕ ಕಲಾಶ್ರೀ ವಿಶೇಷ ಗೌರವ ಪ್ರಶಸ್ತಿ ಪುರಸ್ಕೃತರಾದ ಸದಾಶಿವ ಪಾಟೀಲ ಬೇನೂರ.

ಪಂಡಿತ ವೆಂಕಟೇಶ ಆಲಕೋಡ, ಆಕಾಶವಾಣಿ ಎ ಗ್ರೇಡ್ ಕಲಾವಿದರು ಗದಗ.

ಶರಣಕುಮಾರ ಜಾಲಹಳ್ಳಿ, ಗಾಯಕರು, ದೂರದರ್ಶನ, ಆಕಾಶವಾಣಿ ಕಲಾವಿದರು ನಾಲವಾರ ಇವರನ್ನು ಹಾರಕೂಡ ಶ್ರೀ ಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು "ಕಲ್ಯಾಣ ಕರ್ನಾಟಕ ಸಂಗೀತ ರತ್ನ" ಪ್ರಶಸ್ತಿ ಪ್ರಧಾನ ಮಾಡಿ ಆಶೀರ್ವದಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಲ್ಲಿನಾಥ ಕರಬಸಯ್ಯ ಹಿರೇಮಠ ಹಾರಕೂಡ.

ಶ್ರೀ ಗುಂಡಯ್ಯ ಸ್ವಾಮಿ ಪೋಲಿಸ ಪಾಟೀಲ ಆಲೂರ ಬಿ.

ಗುರುಸಿದ್ದಯ್ಯ ಶಿವಯ್ಯ ಮಠಪತಿ, ನಿವೃತ್ತ ಅಸಿಸ್ಟೆಂಟ್ ಸಬ್ ಇನ್ಸೆಕ್ಟರ್ ಜಂಬಗಾ ಬಿ.

ಜಗದೇವಿ ಶರಣಯ್ಯ ಮಠಪತಿ, ಚುಂಗಿ ಕಲಬುರಗಿ.

ರೇವಣಸಿದ್ದಯ್ಯ ಮಠಪತಿ ಕಮಲಾನಗರ.

ರೇವಣಸಿದ್ದಯ್ಯ ಮಠಪತಿ ಕಲಬುರಗಿ.

ದಯಾನಂದ ಹಿರೇಮಠ ರಾಮತೀರ್ಥ ಡಿ.

ಸಿದ್ದಯ್ಯ ಆರ್. ಮಠ ದೇವಣಗಾಂವ.

ನಾಗಯ್ಯ ರೇವಣಸಿದ್ದಯ್ಯ ಮಠಪತಿ, ಕಿಣ್ಣಿ ಸುಲ್ತಾನ.

ದಿಲೀಪ ಕುಮಾರ ಸ್ವಾಮಿ ರಾಜೇಶ್ವರ.

ಶಿವಕುಮಾರ ವೈಜನಾಥಯ್ಯ ಸ್ವಾಮಿ ಘಾಳೆ ನಾರಾಯಣಪೂರ.

ಶಂಕ್ರಯ್ಯ ಸ್ವಾಮಿ ಚೌಕಿಮಠ ದುಬಲಗುಂಡಿ.

ಬಸವರಾಜ ಕರಬಸಯ್ಯ ಸ್ವಾಮಿ ಕಲಬುರಗಿ.

ರಾಜಕುಮಾರ ವೈಜನಾಥಯ್ಯ ಸ್ವಾಮಿ ಘಾಳೆ ನಾರಾಯಣಪೂರ.

ಡಾ. ಶಿವಶರಣಯ್ಯ ಎಂ. ಮಠಪತಿ ಕೌಠಾ ಬಿ. ಬಿದರ.

ವಿಶೇಷ ಸೂಚನೆ : ಅನಿತಾ ಅಯ್ಯರ್, ಪಂಚ ಭಾಷಾ ಗಾಯಕರು.ಶರಣೆ ಹರ್ಷಿತಾ ಶಿವರುದ್ರಯ್ಯ, ಜನ್ಯ ಆರ್ಕೆಸ್ವಾಮ್ಯೆಸೂರು.ಶಿವಶಂಕರ ಕೋಟನೂರ ಡಿ. ಕುಮಾರಿ ಶಿವಾನಿ ಶಿವದಾಸ ಸ್ವಾಮಿ, ಇಂಡಿಯನ್ ಐಡಿಯಲ್ ಮತ್ತು ಜೀ ಕನ್ನಡ ಗಾಯಕರು ಬೀದರ. ಕುಮಾರಿ ರಾಜಶ್ರೀ.ದಿಲೀಪಕುಮಾರ ಸ್ವಾಮಿ, ರಾಜೇಶ್ವರ.ಕಾರ್ತಿಕ ಸ್ವಾಮಿ ಯಲದಗುಂಡಿ ಇವರಿಂದ ಸಂಗೀತ ಕಾರ್ಯಕ್ರಮ ಜರುಗುವುದು.

ಆಕಾಶವಾಣಿ ಕಲಾವಿದರಾದ ನವಲಿಂಗ ಪಾಟೀಲ ಮನ್ನಾಖೇಳ್ಳಿ ಸಮಾರಂಭದ ಸಂಚಲನೆ ಮಾಡುವರು.

9ನೇ ಪುಣ್ಯಸ್ಮರಣೋತ್ಸವದ ದಾಸೋಹ ಸೇವೆಯನ್ನು ಹೊಸಳ್ಳಿ ಎಚ್. ಗ್ರಾಮದ ಸುಭಾಷಚಂದ್ರ ಪಾರೇಶ, ಸಿದ್ದಪ್ಪಾ ಪಾರೇಶ, ಬಸವರಾಜ ಪಾರೇಶ ಸಹೋದರರು ಮಾಡಲಿದ್ದಾರೆ.

# ಜಿಲ್ಲಾ ಮಟ್ಟದ ಸಿರಿಧಾನ್ಯ,ಸಾವಯವ ಹಬ್ಬ

ಮಲ್ಲಮನುಡಿವಾರ್ತೆ ಯಾದಗಿರಿ : ಜ. 30: ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಹಬ್ಬ ಆಯೋಜಿಸಲಾಗಿದೆ ಎಂದು ಯಾದಗಿರಿ ಜಂಟಿ ಕೃಷಿ ನಿರ್ದೇಶಕರು ಅವರು ತಿಳಿಸಿದ್ದಾರೆ.ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಸಾವಯುವ ಹಬ್ಬದ ಅಂಗವಾಗಿ 2025ರ ಫೆಬ್ರವರಿ 4ರ ಮಂಗಳವಾರ ರಂದು ಬೆಳಿಗ್ಗೆ 7 ಗಂಟೆಗೆ ರೋಡ್ ಶೋ ಅನ್ನು ಬಸ್ ನಿಲ್ದಾಣದಿಂದ ಶ್ರೀ ಲಾಲ್‌ಬಹದ್ದೂರ್ ಶಾಸ್ತ್ರಿ ವೃತ್ತ, ಶ್ರೀ ಸುಭಾಷಚಂದ್ರ ಬೋಸ್ ವೃತ್ತದ ಮೂಲಕ ಯಾದಗಿರಿ ಸರ್ಕಾರಿ ಪದವಿ ಮಹಾವಿದ್ಯಾಲಯವರೆಗೆ 2025ರ ಫೆಬ್ರವರಿ 4 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಹಬ್ಬವನ್ನು ಯಾದಗಿರಿ ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದೆ.

# ಕ್ಷಯ ಪ್ರಕರಣ ಶೂನ್ಯಕ್ಕೆ ತರಲು ಶ್ರಮಿಸಿ: ಡಿಸಿ ಮಿಶ್ರಾ




ಮಲ್ಲಮ ನುಡಿ ವಾರ್ತೆ ಬಳ್ಳಾರಿ,ಜ.30:ಜಿಲ್ಲೆಯಲ್ಲಿಕ್ಷಯ-ರೋಗಪ್ರಕರಣಗಳನ್ನುಶೂನ್ಯಕ್ಕೆ ತಂದು,ಜಿಲ್ಲೆಯನ್ನುಕ್ಷಯರೋಗ ಮುಕ್ತಜಿಲ್ಲೆಯನ್ನಾಗಿ ಮಾಡಲು ಅಧಿಕಾರಿಗಳು ಶ್ರಮಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ,ತಾರಾನಾಥ ಸರ್ಕಾರಿ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಇವರಸಂಯುಕ್ತಾಶ್ರಯದಲ್ಲಿ ನೂತನ ಜಿಲ್ಲಾಡಳಿತ ಭವನದ ಆವರಣದಲ್ಲಿ ಗುರುವಾರ ಆಯೋಜಿಸಿದ್ದ ಕ್ಷಯರೋಗ ಜಾಗೃತಿ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು.

ಈಗಾಗಲೇ ರೋಗ ಪತ್ತೆಹಚ್ಚಲು ನಗರದ ವಿಮ್ಸ್, ಜಿಲ್ಲಾ ಆಸ್ಪತ್ರೆಗಳಲ್ಲಿ ಸಿಬಿನ್ಯಾಟ್ ಯಂತ್ರ ಹಾಗೂ ಟ್ರುನ್ಯಾಟ್ ಮಿಷನ್‌ಗಳಿದ್ದು,ಸಮುದಾಯ ಆರೋಗ್ಯ ಕೇಂದ್ರಗಳಲ್ಲಿಯೂ ಅನುಷ್ಠಾನ ಮಾಡಲಾಗಿದೆ. ಇದರಿಂದ ಕ್ಷಯ ಪೀಡಿತರನ್ನು ಶೀಘ್ರವಾಗಿ ಪತ್ತೆ ಹಚ್ಚಿ ಚಿಕಿತ್ಸೆ ನೀಡಲು ಸಹಕಾರಿಯಾಗಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಕ್ಷಯರೋಗ ಪೀಡಿತರನ್ನುಶೂನ್ಯಕ್ಕೆತರಬೇಕು ಹಾಗೂವಿವಿಧೆಡೆಸಮುದಾಯದಲ್ಲಿ ಗ್ರಾಮವಾರು ಸಮೀಕ್ಷೆ ಕಾರ್ಯ ನಡೆಸಬೇಕು. ಕ್ಷಯರೋಗಕ್ಕೆ ಸಂಬಂಧಿಸಿದಂತೆಆಯುರ್ವೇದದಲ್ಲಿ ಚಿಕಿತ್ಸೆ ನೀಡಬೇಕು. ಇದಕ್ಕೆ ಜಿಲ್ಲಾಡಳಿತದಿಂದ ಸಹಕಾರ ನೀಡಲಾಗುವುದು ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಮಾತನಾಡಿ,ಈ ವರ್ಷದ ಘೋಷವಾಕ್ಯ 'ಟಿಬಿಯನ್ನು ಸೋಲಿಸಿ ದೇಶವನ್ನುಗೆಲ್ಲಿಸಿ' ಎಂಬುದಾಗಿದೆ ಎಂದು ತಿಳಿಸಿದರು.

ಜಾಥಾವುನಗರದಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನದ ಆವರಣದಿಂದ ಆರಂಭಗೊಂಡು ತಾರಾನಾಥ ಸರ್ಕಾರಿ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಆವರಣಕ್ಕೆ ತಲುಪಿತು.

ಜಾಥಾದಲ್ಲಿಆಯುಷ್ ಇಲಾಖೆಯ ಎಲ್ಲಾ ವೈದ್ಯಾಧಿಕಾರಿಗಳು, ಮಹಾವಿದ್ಯಾಲಯದಪ್ರಾಧ್ಯಾಪಕರು, ಸ್ನಾತಕೋತ್ತರ ವಿದ್ಯಾರ್ಥಿಗಳು, ಕಲಿಕೆಯ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ವರ್ಗದವರು ದಾರಿ ಉದ್ದಕ್ಕೂ ಘೋಷಣೆಗಳನ್ನು ಕೂಗುತ್ತಾ ಜನರಲ್ಲಿ ಕ್ಷಯ ರೋಗದ ಬಗ್ಗೆ ಜಾಗೃತಿ ಮೂಡಿಸುತ್ತಾ ಸಾಗಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆಯುಷ್ ಅಧಿಕಾರಿ ಡಾ.ಸರಳಾದೇವಿ,ಜಿಲ್ಲಾಕ್ಷಯ-ರೋಗನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ,ಜಿಲ್ಲಾಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ, ತಾರಾನಾಥ ಸರ್ಕಾರಿ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಪ್ರಾಚಾರ್ಯರಾದ ಡಾ.ಮಾಧವದಿಗ್ಗಾವಿ,ಸಹಾಯಕ ಆಡಳಿತಾಧಿಕಾರಿ ಶ್ರೀನಿವಾಸ್, ಎನ್‌ಎಸ್‌ಎಸ್ ಅಧಿಕಾರಿ ಡಾ.ದೊಡ್ಡಬಸಯ್ಯ,ಆಸ್ಪತ್ರೆಯ ಸ್ಥಾಯಿ ವೈದ್ಯಾಧಿಕಾರಿಗಳಾದ ಡಾ.ಕೊಟ್ರೇಶ್,ಡಾ.ರಾಜೇಶ್, ಡಾ.ರವಿ ಚವ್ಹಾಣ್,ಡಾ.ಶಿವು ಅರಕೇರಿಸೇರಿದಂತೆವಿದ್ಯಾಲಯದ ವಿದ್ಯಾರ್ಥಿಗಳು ಹಾಗೂ ಇತರರು ಭಾಗವಹಿಸಿದ್ದರು.

## ಫೆ.13ರ ವರೆಗೆ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ

## ಸಮೀಕ್ಷೆ ಕಾರ್ಯ ವ್ಯವಸ್ಥಿತವಾಗಿರಲಿ: ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ




ಮಲ್ಲಮ ನುಡಿ ವಾರ್ತೆ ಬಳ್ಳಾರಿ,ಜ.30:ಜಿಲ್ಲೆಯಲ್ಲಿ ಜ.30 ರಿಂದ ಫೆ.13 ರ ವರೆಗೆ ಸ್ಪರ್ಶ್ ಕುಷ್ಠರೋಗಜಾಗೃತಿಅಭಿಯಾನ ಹಮ್ಮಿಕೊಳ್ಳಲಾಗುತ್ತಿದ್ದು,ನಗರ ಮತ್ತು ಇತರೆ ಪ್ರದೇಶಗಳಲ್ಲಿ ಸಮೀಕ್ಷೆಕಾರ್ಯವ್ಯವಸ್ಥಿತವಾಗಿ ಕೈಗೊಳ್ಳಬೇಕುಎಂದುಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಗುರುವಾರದಂದುಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸ್ಪರ್ಶ್ ಕುಷ್ಠರೋಗಜಾಗೃತಿಅಭಿಯಾನದ ಕುರಿತು ಆಯೋಜಿಸಿದ್ದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕುಷ್ಠರೋಗದ ಬಗ್ಗೆ ಸಾರ್ವಜನಿಕರಲ್ಲಿ ಹೆಚ್ಚಿನ ಅರಿವು ಮೂಡಿಸಬೇಕು. ವ್ಯಾಪಕ ಮಾಹಿತಿ ನೀಡುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯ ಪ್ರಾಥಮಿಕ ಆರೋಗ್ಯ ಸಂರಕ್ಷಣಾಧಿಕಾರಿಗಳಿಗೆಹಾಗೂ ಆಶಾ ಕಾರ್ಯಕರ್ತೆಯರಿಗೆ ತಿಳಿಸಬೇಕು ಎಂದರು.

ಅಭಿಯಾನದಲ್ಲಿ ಮಾಡುವ ಸರ್ವೇ ಕಾರ್ಯವು ಯೋಜನಾಧಾರಿತವಾಗಿರಬೇಕು. ಸಮೀಕ್ಷೆಕಾರ್ಯದಲ್ಲಿಸ್ಥಳೀಯ ಮುಖಂಡರು ಮತ್ತು ಸ್ಥಳೀಯ-ಸಂಸ್ಥೆಗಳ ಮುಖ್ಯಾಧಿಕಾರಿಗಳ ಸಹಕಾರ ಪಡೆದುಕೊಳ್ಳಬೇಕು. ಅಂದಾಗ ಮಾತ್ರ ಪ್ರಕರಣಗಳನ್ನು ಗುರುತಿಸಲು ಸಾಧ್ಯ ಎಂದು ಅವರು ನಿರ್ದೇಶನ ನೀಡಿದರು.

ಕೇವಲಆಶಾಕಾರ್ಯಕರ್ತೆಯರು ಬೆಳಿಗ್ಗೆ ಅಥವಾ ಸಂಜೆ ಸಮಯದಲ್ಲಿ ಮನೆ-ಮನೆಗಳಿಗೆ ಭೇಟಿ ನೀಡಿ ಸಮೀಕ್ಷೆ ಕೈಗೊಳ್ಳಬೇಕು. ಒಟ್ಟಾರೆಯಾಗಿ ವ್ಯವಸ್ಥಿತ ಯೋಜನೆ ರೂಪಿಸಿ ಅಭಿಯಾನಯಶಸ್ವಿಗೊಳಿಸಬೇಕು ಎಂದು ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಕುಷ್ಠರೋಗನಿಯಂತ್ರಣಾಧಿಕಾರಿ ಡಾ.ವೀರೇಂದ್ರಕುಮಾರ್ ಅವರು ಮಾತನಾಡಿ, ಕುಷ್ಠರೋಗವು ಸಾಂಕ್ರಾಮಿಕ ರೋಗವಾಗಿದ್ದು, ಸಾರ್ವಜನಿಕರು ಇದಕ್ಕೆ ಭಯಪಡುವಅಗತ್ಯವಿರುವುದಿಲ್ಲ. ಜಿಲ್ಲೆಯ ಸಂಡೂರು ಮತ್ತು ಕುರುಗೋಡು ಭಾಗಗಳಲ್ಲಿ ಹೆಚ್ಚು ಪ್ರಕರಣ ಕಂಡುಬರುತ್ತಿದ್ದು, ಈ ಜಾಗೃತಿ ಅಭಿಯಾನದ ಸಂದರ್ಭದಲ್ಲಿ ಗ್ರಾಮಗಳಲ್ಲಿ ಜಾಗೃತಿ ಮೂಡಿಸುವುದೂ ಸೇರಿದಂತೆ ಕುಷ್ಠರೋಗ ನಿರ್ಮೂಲನೆಯ ಕುರಿತು ಎಲ್ಲರಿಗೂ ಪ್ರತಿಜ್ಞಾವಿಧಿ ಬೋಧಿಸಲಾಗುವುದು ಎಂದರು.

ಪಾದಗಳ ಮತ್ತು ಬೆರಳುಗಳ ದೌರ್ಬಲ್ಯ, ಕಣ್ಣು ಮುಚ್ಚುವಲ್ಲಿ ತೊಂದರೆ, ವ್ಯಕ್ತಿಯ ದೇಹದ ಮೇಲೆಸ್ಪರ್ಶ ಜ್ಞಾನವಿಲ್ಲ ಮಚ್ಚೆಗಳು, ತ್ವಚ್ಚೆಯ ಮೇಲೆ ಕೆಂಪಾದ ಬಾವು, ನೋವಿನಿಂದ ಕೂಡಿದ ಹಗ್ಗದ ಹಾಗೆ ಊದಿಕೊಂಡ ನರಗಳು, ವ್ಯಕ್ತಿಯ ದೇಹದ ಯಾವುದೇ ಭಾಗಗಳಲ್ಲಿ ತಿಳಿ ಬಿಳಿ ತಾಮ್ರದ ವರ್ಣದ ಸ್ಪರ್ಶ ಜ್ಞಾನವಿಲ್ಲದ ಮಚ್ಚೆಗಳು ಕಂಡು ಬಂದಲ್ಲಿ ಸಮೀಪದ ಸರ್ಕಾರಿ ಆರೋಗ್ಯ ಕೇಂದ್ರಕ್ಕೆ ತೆರಳಿ ಪರೀಕ್ಷಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಸಭೆಯಲ್ಲಿ ನಿಕ್ಷಯಮಿತ್ರ ಯೋಜನೆ, ನಾಯಿ ಕಡಿತ, ಹಾವು ಕಡಿತ ಸೇರಿದಂತೆ ವಿವಿಧ ವಿಷಯಗಳ ಕುರಿತು ಸುಧೀರ್ಘ ಚರ್ಚಿಸಲಾಯಿತು.

ಬಳಿಕರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕುರಿತು ಪ್ರತಿಜ್ಞೆಯನ್ನು ಸ್ವೀಕರಿಸಿದರು. ನಂತರಸ್ಪರ್ಶ್ ಕುಷ್ಠರೋಗಜಾಗೃತಿ ಅಭಿಯಾನದ ಭಿತ್ತಿಚಿತ್ರಗಳನ್ನು ಬಿಡುಗಡೆಗೊಳಿಸಲಾಯಿತು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ,ಜಿಲ್ಲಾಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಅಬ್ದುಲ್ಲಾ, ಜಿಲ್ಲಾ ಕುಟುಂಬ ಕಲ್ಯಾಣ ಅನುಷ್ಠಾನ ಅಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ., ಜಿಲ್ಲಾ ಕ್ಷಯರೋಗನಿಯಂತ್ರಣಾಧಿಕಾರಿ ಡಾ.ಇಂದ್ರಾಣಿ.ವಿ., ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ್ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ತಾಲ್ಲೂಕು ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

## ರಾಷ್ಟ್ರಪಿತ ಮಹಾತ್ಮಗಾಂಧೀಜಿ ವಿಶ್ವಕಂಡ ಅಮೂಲ್ಯ ರತ್ನ : ಡಾ. ಪಿ. ವಿಠ್ಠಲ ರಡ್ಡಿ



ಮಲ್ಲಮ್ಮ ನುಡಿ ವಾರ್ತೆ ಬೀದರ:ಜ.30:ಬಿ.ವಿ.ಭೂಮರಡ್ಡ ಮಹಾವಿದ್ಯಾಲಯಲದಲ್ಲಿ ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿಯರು ಮಹಾತ್ಮಗಾಂಧೀಜಿಯವರ ಭಾವಚಿತ್ರಕ್ಕೆಪೂಜೆಸಲ್ಲಿಸುವುದರ ಮುಖಾಂತರ ಮಾತನಾಡುತ್ತಾ ಗಾಂಧೀಜಿಯವರ ಆದರ್ಶ ತತ್ವಗಳು ಭೂಮಿಯ ಮೇಲೆ ಸೂರ್ಯಚಂದ್ರಯಿರುವರೆಗೆ ಅಮರ ಅವರು ಸ್ವಾತಂತ್ರ್ಯಕ್ಕಾಗಿ ಬಳಸಿದ ಅಸ್ತ್ರಗಳೆಂದರೆ ಸತ್ಯ ಮತ್ತು ಅಹಿಂಸೆ, ಬ್ರಿಟಿಷರ ವಿರುದ್ಧ ಕ್ವಿಟ್ ಇಂಡಿಯಾ ಚಳುವಳಿ, ಕಾನೂನು ಭಂಗ ಚಳುವಳಿ,ಉಪ್ಪಿನ ಸತ್ಯಾಗ್ರಹ, ಬೆಳಗಾಂವ ಕಾಂಗ್ರೇಸ್ ಅಧಿವೇಶನ ಅಧ್ಯಕ್ಷತೆವಹಿಸಿ ಬ್ರಿಟಿಷರ ವಿರುದ್ಧ ಕರ್ನಾಟಕದಲ್ಲಿ ಗಾಂಧೀಜಿಯವರಅನುಯಾಯಿ ಆಗಿ ಹರ್ಡೇಕರ ಮಂಜಪ್ಪ, ಗಂಗಾಧರರಾವ ದೇಶಪಾಂಡೆ, ಎನ್.ಎಸ್.ಹರ್ಡೇಕರ,ಮೈಲಾರ ಮಹಾದೇವಪ್ಪ ಮುಂತಾದ ಸ್ವತಂತ್ರ್ಯಹೋರಾಟಗಾರರನ್ನು ಶಾಂತಿಯುತ ಚಳುವಳಿಗಳ ಮುಖಾಂತರ ಬ್ರಿಟಿಷರನ್ನು ಭಾರತದಿಂದ ಬುಡಸಮೇತ ಓಡಿಸಬೇಕು ರಾಷ್ಟ್ರಮಾತೆಯಾದ ಭಾರತಾಂಬೆಯನ್ನು ಬ್ರಿಟಿಷ್ ಸಂಕೋಲೆಯಿಂದ ಹೊರತಂದು ಮುಕ್ತಗೊಳಿಸಬೇಕು ಎಂದು ಕರೆಕೊಟ್ಟರು,ಹಾಗೂ ಭಗತಸಿಂಗ್, ರಾಜಗುರು, ಸುಖದೇವ ಇವರ ದಿನವನ್ನು ಸಹ ಹುತಾತ್ಮ ದಿನವೆಂದು ಹಾಗೂ ಪೋಲಿಸ್ ದಿನಾಚರಣೆಯನ್ನು ಸಹ ಪೋಲಿಸ್ ಹುತಾತ್ಮ ದಿನಾಚರಣೆಯೆಂದು ಆಚರಣೆ ಮಾಡಲಾಗುತ್ತದೆ. ಇಂತಹ ದಿನದಂದು ಗಾಂಧೀಜಿಯವರ ಆದರ್ಶವನ್ನು ಇಟ್ಟುಕೊಂಡು ಜೀವನದಲ್ಲಿ ವಿದ್ಯಾರ್ಥಿಗಳಲ್ಲಿ ಮೈಗೂಡಿಸಿಕೊಳ್ಳಬೇಕೆಂದು ನುಡಿದರು.ಕಾರ್ಯಕ್ರಮದವೇದಿಕೆಯ ಮೇಲೆ ಮಹಾವಿದ್ಯಾಲಯದ ಉಪ ಪ್ರಾಂಶುಪಾಲರಾದ ಶ್ರೀ ಅನೀಲಕುಮಾರ ಅಣದೂರೆ, ಎನ್.ಎಸ್.ಎಸ್., ಎನ್.ಸಿ.ಸಿ. ಅಧಿಕಾರಿಗಳು,ಮಹಾವಿದ್ಯಾಲಯದ ವಿದ್ಯಾರ್ಥಿಗಳು,ಪ್ರಾಧ್ಯಾಪಕರು, ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಜಯ ಕರ್ನಾಟಕ ಜನಪರ ವೇದಿಕೆಗೆ ಪ್ರಭುಗೌಡ ಪೋತರಡ್ಡಿ ಮುದ್ದೂರು ನೇಮಕ



ಮಲ್ಲಮ್ಮ ನುಡಿ ವಾರ್ತೆ ಹುಣಸಗಿ :ಜ.30: ಶಹಾಪುರ ನಗರದ ಪ್ರವಾಸಿ ಮಂದಿರದಲ್ಲಿ ವೆಂಕಟೇಶ ರೆಡ್ಡಿ ತುಳೇರ ರಾಜ್ಯ ಸಂಘಟನಾ ಕಾರ್ಯದರ್ಶಿ ಅವರ ಸಮ್ಮುಖದಲ್ಲಿ. ಜಯ ಕರ್ನಾಟಕ ಜನಪರ ವೇದಿಕೆ ವತಿಯಿಂದ ಹಮ್ಮಿಕೊಂಡಿದ್ದ ಹುಣಸಗಿ ಹಾಗೂ ಶಹಾಪುರ ತಾಲೂಕು ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವನ್ನು ಹ ವಿ ್ಮ ಕೊ ೊ ಂ ಡಿ ದ ರ ು . ಕಾರ್ಯಕ್ರಮವನ್ನು ತೆ- ೀಜರಾಜ್ ರಾಠೋಡ ಜಿಲ್ಲಾಧ್ಯಕ್ಷರು ಯಾದಗಿರಿ ನೇತೃತ್ವದಲ್ಲಿ ಮಹಿಳಾ ಘಟಕದ ಜಿಲ್ಲಾಧ್ಯಕ್ಷರಾಗಿ ಶ್ರೀ ಮತಿ ರುದ್ರಾಂಬಿಕಾ ಆರ್ ಪಾಟೀಲ್ ಜಿಲ್ಲಾ ಕಾರ್ಯದರ್ಶಿಯಾಗಿ ಹುಲಗಪ್ಪ ಶಖಾಪುರರವರ ಉಪಸ್ಥಿತಿಯಲ್ಲಿ

ಹುಣಸಗಿ ತಾಲೂಕು ಅಧ್ಯಕ್ಷರಾಗಿ ಪ್ರಭುಗೌಡ ಪೋತರಡ್ಡಿ ಮುದ್ದೂರು ಅವರಿಗೆ ಆದೇಶ ಪತ್ರ ನೀಡಿ ಆಯ್ಕೆ ಮಾಡಲಾಯಿತು.

ರೈತ ಸಂಘದ ಜಿಲ್ಲಾಧ್ಯಕ್ಷ ಮಲ್ಲನಗೌಡ ಹಗರಟಗಿ, ಜಿಲ್ಲಾ ಕಾರ್ಯಾಧ್ಯಕ್ಷ ರವಿಕುಮಾರ ನಾಯಕ ಬೈರಿಮರಡಿ.

ಸಾಹೇಬಣ್ಣ ಪುರ್ಲೇ ಅಧ್ಯಕ್ಷರು ಸುದೀಪ್ ಶಿಕ್ಷಣ ಸಂಸ್ಥೆ ರಂಗಂಪೇಟ್. ಜಿಲ್ಲಾ ಉಪಾಧ್ಯಕ್ಷಗಂಗು ಮಡಿವಾಳ. ಸುರಪುರ ತಾಲೂಕು ಅಧ್ಯಕ್ಷ ಗೋಪಾಲನಾಯಕಸತ್ಯಂಪೇಟ, ಸವೀತಾ ಶಹಾಪುರ, ವೇದಿಕೆ ಮೇಲಿದ್ದರು.

# ಗಂಡಾಂತರ ಗರ್ಭಿಣಿ ಮಹಿಳೆಯರ ಮೇಲೆ ನಿಗಾವಹಿಸಿ: ಡಿಸಿ ಮಿಶ್ರಾ



ಬಳ್ಳಾರಿ,ಜ.30:ಜಿಲ್ಲೆಯಲ್ಲಿನ ಗಂಡಾಂತರ ಗಂಡಾಂತರ ಗರ್ಭಿಣಿಮಹಿಳೆಯರಮೇಲೆ ನಿರಂತರ ನಿಗಾ ವಹಿಸುವ ಮೂಲಕ ತಾಯಿ-ಶಿಶು ಮರಣ ಸಂಭಂವಿಸದಂತೆ ವೈದ್ಯಾಧಿಕಾರಿಗಳು ಕಾರ್ಯ ಪ್ರವೃತ್ತರಾಗಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ತಾಯಿ ಮತ್ತು ಶಿಶು ಮರಣ ತಡೆಗಟ್ಟುವಿಕೆ ಕುರಿತ ಅಂತರ ಇಲಾಖೆ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗಂಡಾಂತರ ಗರ್ಭಿಣಿ ಮಹಿಳೆಯರಿಗೆ ರಕ್ತಹೀನತೆ, ಪೌಷ್ಠಿಕ ಆಹಾರದ ಕೊರತೆ, ಕಬ್ಬಿಣಾಂಶ ಮಾತ್ರೆಗಳ ಸೇವನೆ ಕುರಿತುಆಶಾಕಾರ್ಯಕರ್ತೆಯರು ಮನೆ ಭೇಟಿ ಸಂದರ್ಭದಲ್ಲಿ ಸೂಚಿಸಬೇಕು. ರಕ್ತಹೀನತೆ ಉಂಟಾಗುವುದು ತಡೆಗಟ್ಟುವ ಮೂಲಕ ಜಿಲ್ಲೆಯಲ್ಲಿ ಸಹಜ ಹೆರಿಗೆಯೂಆದ್ಯತೆನೀಡಬೇಕು ಎಂದು ತಿಳಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ ತಾಯಂದಿರ ಆರೈಕೆ ಕುರಿತು ಕುಟುಂಬದ ಸದಸ್ಯರಿಗೆ ತಿಳಿ ಹೇಳಬೇಕು. ಮುಖ್ಯವಾಗಿ ಚೊಚ್ಚಲುಗರ್ಭಿಣಿಅವಧಿಯಲ್ಲಿ ವೈದ್ಯಕೀಯ ಕಾರಣಗಳಿಂದ ಗುರ್ತಿಸಲ್ಪಡುವ ಗಂಡಾಂತರ ಗರ್ಭಿಣಿ ಸಂದರ್ಭದಲ್ಲಿ ಹೆಚ್ಚಿನ ಕಾಳಜಿ ವಹಿಸಲು ಆದ್ಯತೆ ನೀಡಬೇಕು. ಮಗು ಜನನದ ಬಳಿಕ ತೂಕದ ಆಧಾರದ ಮೇಲೆಯೂ ಕಾಳಜಿ ವಹಿಸುವ ಮೂಲಕ ಜಾಗ್ರತೆ ವಹಿಸಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಎಸ್.ಸಂಕನೂರು ಅವರು ಮಾತನಾಡಿ, ಹೆರಿಗೆಯಾದ ನಂತರವು ನಿಗಧಿತ ಕಾಲಾವಧಿಯೊಳಗೆ ಸಣ್ಣ-ಪುಟ್ಟ ಆರೋಗ್ಯ ಸಮಸ್ಯೆ ಕಂಡುಬಂದರೂಸಹ ಅವುಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಕೇವಲ ದಿನನಿತ್ಯದ ಔಷಧಿಗಳ ಶಿಫಾರಸ್ಸು ಮಾಡಬಾರದು ಎಂದು ವೈದ್ಯಾಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲೆಯಲ್ಲಿ ವಿಶೇಷವಾಗಿ ಪ್ರತಿ ತಿಂಗಳು 9 ಮತ್ತು 24 ತಾರೀಖಿನಂದು ಆರೋಗ್ಯ ಕೇಂದ್ರಗಳಲ್ಲಿ ಗಭೀಣಿ ಮಹಿಳೆಯರಿಗಾಗಿಯೇ ನೀಡುವ ಊಟದಜೊತೆಗೆಪೌಷ್ಠಿಕಾಂಶಯುಕ್ತ ಆಹಾರ ನೀಡುವ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ,ಜಿಲ್ಲಾಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಅಬ್ದುಲ್ಲಾ, ಜಿಲ್ಲಾ ಕುಟುಂಬ ಕಲ್ಯಾಣ ಅನುಷ್ಠಾನ ಅಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ., ಜಿಲ್ಲಾ ಕ್ಷಯರೋಗನಿಯಂತ್ರಣಾಧಿಕಾರಿ ಡಾ.ಇಂದ್ರಾಣಿ.ವಿ., ಬಿಮ್ಸ್ ತಜ್ಞರಾದ ಡಾ.ಚಂದ್ರಶೇಖರ್, ಡಾ.ಶ್ರೀಕಾಂತ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ್ ಸೇರಿದಂತೆ ತಾಲ್ಲೂಕು ಆರೋಗ್ಯ ಅಧಿಕಾರಿಗಳು,ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

### ರನ್ನ ವೈಭವ : ಕಲಾತಂಡಗಳ ಆಯ್ಕೆಗೆ ಅರ್ಜಿ

ಬಾಗಲಕೋಟೆ:ಜ.30:ರನ್ನ ಉತ್ಸವದ ಅಂಗವಾಗಿ ವಾಹಿನಿ ಮೆರವಣಿಗೆಗೆ ಮತ್ತು ವೇದಿಕೆ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಉತ್ತಮ, ಪರಿಣಿತಿ ಹೊಂದಿದ ಕಲಾವಿದರನ್ನು ಆಯ್ಕೆಮಾಡಿ ರನ್ನ ಉತ್ಸವನ್ನು ಮಾಡುವ ಕುರಿತು ಅರ್ಜಿಯನ್ನು ತಹಶೀಲದಾರ ಕಾರ್ಯಾಲಯ ಬಾಗಲಕೋಟೆ ಕಛೇರಿಯಲ್ಲಿಸ್ವೀಕರಿಸಲಾಗುತ್ತಿದ್ದು, ನಂತರ ತಮ್ಮ ಅರ್ಜಿಗಳನ್ನು ಸಮೀತಿಯ ಮುಂದೆ ಹಾಜರು ಪಡಿಸಿ ಅಂತಿಮ ಪಟ್ಟಿಯನ್ನು ಜಿಲ್ಲಾ ಸಮಿತಿಗೆ ಶಿಫಾರಸ್ಸು ಮಾಡಲಾಗುವುದು.ಅರ್ಜಿಯನ್ನು ಫೆಬ್ರವರಿ 5 ರಂದು ಸಂಜೆ 5.30 ರೊಳಗಾಗಿ ಸಲ್ಲಿಸಲು ಅವಕಾಶವಿರುವುದಾಗಿ ಬಾಗಲಕೋಟೆ ತಹಶೀಲ್ದಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಾತಂಡಗಳ ಆಯ್ಕೆಗೆ ಅರ್ಜಿ

ಬಾಗಲಕೋಟೆ : ಜ. 30 : ಪ್ರಸಕ್ತ ಸಾಲಿನ ರಾಷ್ಟ್ರೀಯ ಆರೋಗ್ಯ ಅಭಿಯಾನದ ಅಂಗವಾಗಿ, ಸಾರ್ವಜನಿಕರಲ್ಲಿ ಆರೋಗ್ಯ ಕಾರ್ಯಕ್ರಮಗಳು ಮತ್ತು ಯೋಜನೆಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಜಾನಪದ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಜಾನಪದ ಕಲಾ ತಂಡಗಳ ಆಯ್ಕೆಗೆ ಅರ್ಜಿ ಆಹ್ವಾನಿಸಲಾಗಿದೆ.

ಬಾಗಲಕೋಟೆ ಜಿಲ್ಲಾ ವ್ಯಾಪ್ತಿಯ ಜಾನಪದ ಕಲಾ ತಂಡಗಳು ಅರ್ಜಿ ಸಲ್ಲಿಸಬಹುದು. ಅರ್ಜಿಯೊಂದಿಗೆ ಆಧಾರ್ ಕಾರ್ಡ್, ಪ್ಯಾನ್ ಕಾರ್ಡ್, ಹಾಗೂ ಬ್ಯಾಂಕ್ ಖಾತೆ ಸಂಖ್ಯೆ, ಅನುಭವ ಪ್ರಮಾಣ ಪತ್ರ, ಹಳೆ ಜಾಗೃತಿ ಕಾರ್ಯಕ್ರಮಗಳ ಛಾಯಾಚಿತ್ರಗಳು, ಕೇಂದ್ರ ಸಂಗೀತ ಮತ್ತು ನಾಟಕ ವಿಭಾಗ, ಮಾಹಿತಿ ಮತ್ತು ಪ್ರಸಾರ ಮಂತ್ರಾಲಯ ಭಾರತ ಸರ್ಕಾರ ಬೆಂಗಳೂರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವುಗಳಲ್ಲಿ ನೊಂದಣಿಗೊಂಡ ಪ್ರಮಾಣ ಪತ್ರವನ್ನು ಸಲ್ಲಿಸಬೇಕು. ಅರ್ಹ ಅರ್ಜಿದಾರರು ಫೆಬ್ರವರಿ 5 ರೊಳಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ 130 & 31 ರಲ್ಲಿ ಅರ್ಜಿ ಸಲ್ಲಿಸುವಂತ ಪ್ರಕಟಣೆ ತಿಳಿಸಿದೆ.

# ಹಾಲಹಳ್ಳಿಯಲ್ಲಿ ಇನ್ನು ನಿರಂತರ ನೀರು:ಪ್ರಭು ಚವ್ಹಾಣ ಘೋಷಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜ.30:ಕಮಲನಗರ ತಾಲ್ಲೂಕಿನ ಚಾಂದೋರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಾಲಹಳ್ಳಿ ಗ್ರಾಮದಲ್ಲಿ ಇನ್ನು ನಿರಂತರ ನೀರು ಸಿಗಲಿದೆ.

ಹಾಲಹಳ್ಳಿ ರಾಜ್ಯದ ಎಂಟನೇ, ಬೀದರ್ ಜಿಲ್ಲೆಯ ಮೂರನೇ ಹಾಗೂ ಔರಾದ್ ವಿಧಾನಸಭಾ ಕ್ಷೇತ್ರದ ಮೊದಲ ನಿರಂತರ ನೀರು ಸರಬರಾಜು ಗ್ರಾಮವಾಗಿದೆ.

ಗ್ರಾಮದಲ್ಲಿ ಗುರುವಾರ ನಡೆದ ಸಮಾರಂಭದಲ್ಲಿ ಶಾಸಕ ಪ್ರಭು ಚವಾಣ್ ಅವರು ಗ್ರಾಮವನ್ನು ನಿರಂತರ ನೀರು ಸರಬರಾಜು ಗ್ರಾಮವೆಂದು ಘೋಷಿಸಿದರು.

ಹಾಲಹಳ್ಳಿ ಗ್ರಾಮವನ್ನು ಔರಾದ್ ವಿಧಾನಸಭಾ ಕ್ಷೇತ್ರದ ಮೊದಲ ನಿರಂತರ ನೀರು ಸರಬರಾಜು ಗ್ರಾಮವಾಗಿ ಘೋಷಿಸಿದ್ದಕ್ಕೆ ಸಂತಸವಾಗಿದೆ. ಕ್ಷೇತ್ರ ವ್ಯಾಪ್ತಿಯ 175 ಗ್ರಾಮಗಳಲ್ಲಿ ಜಲ ಜೀವನ ಮಿಷನ್ ಯೋಜನೆ ಕಾಮಗಾರಿ ನಡೆದಿದ್ದು, ಇನ್ನೂ ಆರು ಗ್ರಾಮಗಳನ್ನು ನಿರಂತರ ನೀರು ಸರಬರಾಜು ಗ್ರಾಮವಾಗಿಸುವ ದಿಸೆಯಲ್ಲಿ ಅಧಿಕಾರಿಗಳು ಕಾರ್ಯ ನಿರ್ವಹಿಸಬೇಕು ಎಂದು ಸೂಚಿಸಿದರು.



ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಎಂಜಿನಿಯರ್ ರಾಮಲಿಂಗಪ್ಪ ಬಿರಾದಾರ ಮಾತನಾಡಿ, ಜಿಲ್ಲೆಯ 800 ಗ್ರಾಮಗಳಲ್ಲಿ ಜಲ ಜೀವನ ಮಿಷನ್ ಯೋಜನೆ ಕಾಮಗಾರಿ ನಡೆದಿದೆ. ಬರುವ ದಿನಗಳಲ್ಲಿ ಪ್ರತಿ ತಾಲ್ಲೂಕಿಗೆ ಒಂದು ಗ್ರಾಮವನ್ನು ಆಯ್ಕೆ ಮಾಡಿಕೊಂಡು, ನಿರಂತರ ನೀರು ಸರಬರಾಜು ಗ್ರಾಮವನ್ನಾಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಜಲ ಜೀವನ ಮಿಷನ್ ಯೋಜನೆ ರಾಜ್ಯ ಸಮನ್ವಯ ಅಧಿಕಾರಿ ಡಾ. ನಂದಕುಮಾರ ತಾಂದಳೆ ಮಾತನಾಡಿ, ಗ್ರಾಮದ ಪ್ರತಿ ಮನೆಯ ನಲ್ಲಿಗೂ ಶುದ್ಧ ಕುಡಿಯುವ ನೀರು ಪೂರೈಕೆಯಾಗಲಿದೆ. ನಿತ್ಯ ಒಬ್ಬರು ವ್ಯಕ್ತಿಗೆ ತಲಾ 55 ಲೀಟರ್ ನೀರು ದೊರೆಯಲಿದೆ ಎಂದು ಹೇಳಿದರು.

ಗ್ರಾಮಸ್ಥರು ನಿರಂತರ ನೀರಿನ ಸದ್ಬಳಕೆ ಮಾಡಿಕೊಳ್ಳಬೇಕು. ತಪ್ಪದೆ ಕರ ಪಾವತಿಸಿ ಯೋಜನೆ ಯಶಸ್ವಿ ನಿರ್ವಹಣೆಗೆ ಸಹಕರಿಸಬೇಕು ಎಂದರು.

ಜಲ ಜೀವನ ಮಿಷನ್ ಕಾಮಗಾರಿಯನ್ನು ಯಶಸ್ವಿಯಾಗಿ ಕೈಗೊಂಡಿದ್ದಕ್ಕೆ ಪ್ರಥಮ ದರ್ಜೆ ಗುತ್ತಿಗೆದಾರ ಕೊಂಡಿಬಾ ಬಿರಾದಾರ ಅವರನ್ನು ಸನ್ಮಾನಿಸಲಾಯಿತು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಔರಾದ್ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಸುಭಾಷ್ ದಳಗೊಂಡೆ, ಜಲ ಜೀವನ್ ಮಿಷನ್ ಜಿಲ್ಲಾ ಯೋಜನಾ ವ್ಯವಸ್ಥಾಪಕ ಪೆತ್ರೂ ಬಜಾಕರ್, ಕಮಲನಗರ ತಹಶೀಲ್ದಾರ್ ಅಮಿತಕುಮಾರ ಕುಲಕರ್ಣಿ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಮಾಣಿಕರಾವ್ ಪಟೀಲ, ಡಿಟಿಎಸ್‌ಯು ಸಿಬ್ಬಂದಿ ಫೀಡ್ ಬ್ಯಾಕ್ ಫೌಂಡೇಷನ್ ಜಿಲ್ಲಾ ಸಂಯೋಜಕ ಓಂಕಾರ ಅನಿಲ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಔರಾದ್ ಉಪ ವಿಭಾಗದ ಶಾಖಾ ಅಧಿಕಾರಿಗಳಾದ ಅರ್ಜುನ, ಶಿವಕುಮಾರ ಇದ್ದರು.

ಪ್ರವೀಣ್ ಕಾರಬಾರಿ

# ಸಾರ್ವಜನಿಕರು ಆರೋಗ್ಯ ಇಲಾಖೆಯೊಂದಿಗೆ ಕೈ ಜೋಡಿಸಿದರೆ ಮಾತ್ರ ಕುಷ್ಠರೋಗ ಮುಕ್ತ ಜಿಲ್ಲೆ ಮಾಡಲು ಸಾಧ್ಯ:ಡಾ.ಧ್ಯಾನೇಶ್ವರ ನಿರಗುಡಿ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಜ.30:ಕುಷ್ಠರೋಗವು ಒಂದು ಸಾಂಕ್ರಾಮಿಕ ರೋಗ, ಇದು ಯಾವುದೇ ಶಾಪ-ಪಾಪದಿಂದ ಬರುವುದಿಲ್ಲ, ಸಾರ್ವಜನಿಕರು ಆರೋಗ್ಯ ಇಲಾಖೆಯೊಂದಿಗೆ ಕೈ ಜೋಡಿಸಿದಾಗ ಮಾತ್ರ ಬೀದರ ಜಿಲ್ಲೆಯು ಕುಷ್ಠರೋಗ ಮುಕ್ತ ಜಿಲ್ಲೆ ಮಾಡಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಧ್ಯಾನೇಶ್ವರ ನಿರಗುಡಿ ಹೇಳಿದರು.

ಅವರು ಗುರುವಾರ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 'ಹುತಾತ್ಮದಿನ' ನಿಮಿತ್ಯ ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ-2025ರ"ಒಟ್ಟಾಗಿ, ನಾವು ಕುಷ್ಠರೋಗದ ಬಗ್ಗೆ ಜಾಗೃತಿ ಮೂಡಿಸೋಣ, ತಪ್ಪು ಕಲ್ಪನೆಗಳನ್ನು ಹೋಗಲಾಡಿಸೋಣ ಮತ್ತು ಕುಷ್ಠರೋಗದಿಂದ ಯಾರೂ ಬಾಧಿತರಾಗದಂತೆ ನೋಡಿಕೊಳ್ಳೋಣ"ಎಂಬ ಘೋಷಣೆಯೊಂದಿಗೆ ಹಮ್ಮಿಕೊಂಡಿದ್ದ ಅರಿವು ಅಭಿಯಾನದ ರ್ಯಾಲಿಗೆ ಚಾಲನೆ ನೀಡಿ ಮಾತನಾಡಿದರು.

ಕುಷ್ಠರೋಗವು ಒಂದು ಸಾಂಕ್ರಮಿಕ ರೋಗವಾಗಿದ್ದು ಇದು ಮುಖ್ಯವಾಗಿ ಚರ್ಮ ಹಾಗೂ ನರಕ್ಕೆ ಸಂಭಂಧಪಟ್ಟಿದ್ದು ದೇಹದ ಯಾವುದೇ ಭಾಗದಲ್ಲಿ ಸ್ಪರ್ಶಜ್ಞಾನವಿಲ್ಲದ ತಿಳಿ ಬಿಳಿ ಅಥವಾ ತಾಮ್ರ ಬಣ್ಣದ ಮಚ್ಚೆಗಳಿದ್ದಲ್ಲಿ ಅದು ಕುಷ್ಠರೋಗದ ಲಕ್ಷಣಗಳಾಗಿರಬಹುದು ಯಾವುದೆ ತರಹದ ಮಚ್ಚೆಗಳು ಇದಲ್ಲಿ ತಮ್ಮ ಸಮೀಪದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಪರಿಕ್ಷಿಸಿಕೋಳಬೇಕು, ರೋಗ ಕಂಡು ಬಂದಲ್ಲಿ ಬಹುಔಷದಿ ಚಿಕಿತ್ಸೆಯಿಂದ ಗುಣ ಪಡಿಸಬಹುದು ಇದ-ಕ್ಕೆ ಯಾವದೇ ರೀತಿಯ ಹೆದರುವಂತಹ ಅಗತ್ಯವಿಲ್ಲಾ ಎಂದು ಹೇಳಿದರು.

ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಡಾ.ರಾಜಶೇಖರ ಪಾಟೀಲ್ ಮಾತನಾಡಿ, ಇಂದು ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ'ಹುತಾತ್ಮದಿನ' ಈ ದಿನ ರಾಷ್ಟ್ರೀಯ ಕುಷ್ಠರೋಗ ದಿನವೆಂದು ಆಚರಿಸುತ್ತಿರುವುದು, ಜಿಲ್ಲೆಯಲ್ಲಿ ಕುಷ್ಟರೊಗದ ಚಿಕಿತ್ಸೆ ಪಡೆಯುತ್ತಿರುವವರ ಸಂಖ್ಯೆ 92 ಯಾಗಿದ್ದು ಈ ವರ್ಷ 85 ಹೊಸ ಪ್ರಕರಣಗಳು ಪತ್ತೆ ಹಚ್ಚಿ ಚಿಕಿತ್ಸೆ ನಿಡಲಾಗುತ್ತಿದೆ. ಸ್ಪರ್ಶ್ ಕುಷ್ಠರೋಗ ಜಾಗೃತಿ ಪಾಕ್ಷಿಕ ಅಭಿಯಾನವನ್ನು ಜನವರಿ.30 ರಿಂದ ಫೆಬ್ರವರಿ.13 ರವರೆಗೆ ಜಿಲ್ಲೆಯಾದ್ಯಂತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಬನ್ನಿರಿ ನಾವೆಲ್ಲರೂ ಸೇರಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಕನಸಾದ ಕುಷ್ಠಮುಕ್ತ ಭಾರತವನ್ನು ಮಾಡಲು ಪ್ರತಿಜ್ಞಾ ಮಾಡೋಣ ಎಂದು ಕರೆಕೊಟ್ಟರು.

ವೀರಶೆಟ್ಟಿ ಚನ್ನಶೆಟ್ಟಿ ಅವರು ಮಾತನಾಡಿ, ಜಿಲ್ಲೆಯ ಸಾರ್ವಜನಿಕರಾದ ನಾವು ಪೂಜ್ಯ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರು ಹುತಾತ್ಮರಾದ ದಿನವಾದ ಇಂದು ನನ್ನ ಕುಟುಂಬ ನೆರೆ-ಹೊರೆ ಹಾಗೂ ಸಮುದಾಯದಲ್ಲಿ ಯಾರೇ ಕುಷ್ಠರೋಗಿಗಳು ಕಂಡು ಬಂದರೆ ಅವರಿಗೆ ಆರೋಗ್ಯ ಇಲಾಖೆಯಲ್ಲಿ ದೊರೆಯುವ ಉಚಿತ ಚಿಕಿತ್ಸೆಯನ್ನು ಕೊಡಿಸುತ್ತೇನೆ. ಕುಷ್ಠರೋಗಿಗಳನ್ನು ಪ್ರೀತಿ ವಿಶ್ವಸದಿಂದ ನೋಡಿಕೋಂಡು ಅವರ ಆತ್ಮಗೌರವಕ್ಕೆ ಧಕ್ಕೆ ಬರದಂತೆ ನಡೆದುಕೋಳ್ಳುತ್ತೇನೆ. ಕುಷ್ಠರೋಗಕ್ಕೆ ಅಂಟಿಕೊಂಡಿರುವ ಕಳಂಕ ಹಾಗೂ ತಾರತಮ್ಯವನ್ನು ಹೋಗಲಾಡಿಸಲು ಬದ್ದನಾಗಿರುತ್ತೇನೆ ಹಾಗೂ ಕುಷ್ಠರೋಗಿಗಳಿಗೆ ಸಮಾಜದ ಮುಖ್ಯವಾಹಿನಿಯಲ್ಲಿ ಗೌರವಯುತವಾಗಿ ಬದುಕಲು ಅವಕಾಶ ಮಾಡಿಕೊಡುತ್ತೇನೆ. ಕುಷ್ಠರೋಗ ಸಂಪೂರ್ಣ ಗುಣಪಡಿಸಬಹುದಾದ ರೋಗ ಎಂಬ ಮಾಹಿತಿಯನ್ನು ಸಮಾಜದಲ್ಲಿ ನೀಡುತ್ತೇನೆ. ಮಹಾತ್ಮ ಗಾಂಧೀಜಿಯವರ ಕನಸಾದ ಕುಷ್ಠರೋಗ ಮುಕ್ತ ಭಾರತವನ್ನು ಕಟ್ಟಲು ಕಾಯಾ,ವಾಚಾ ಮಾನಸ ಶ್ರಮಿಸುತ್ತೇನೆ ಎಂದು ಈ ಮೂಲಕ ಪ್ರತಿಜ್ಞೆ ಮಾಡುತ್ತೇನೆ.

ಈ ಸಂದರ್ಭದಲ್ಲಿ ಅರೋಗ್ಯ ಕಾರ್ಯಕ್ರಮ ಅನೂಷ್ಠಾನ ಅಧಿಕಾರಿಗಳಾದ ಡಾ.ಮಾಹಾದೇವ ಮಳಗೆ, ಡಾ.ಶಂಕ್ರಪ್ಪ ಬೊಮ್ಮಾ, ಡಾ.ದಿಲೀಪ ಡೋಂಗರೆ, ಡಾ.ಅನೀಲ ಚಿಂತಾಮಣಿ, ತಾಲೂಕಾ ಅರೋಗ್ಯ ಅಧಿಕಾರಿ ಡಾ.ಸಂಗಾರೆಡ್ಡಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಸಂಗಪ್ಪಾ ಕಾಂಬಳೆ, ಕ್ಷೆತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಓಂಕಾರ ಮಲ್ಲಿಗೆ, ಅನಿತಾ, ಮೋಹನದಾಸ, ಸಿಬ್ಬಂದಿಗಳಾದ ಡಾ.ರೆಣ್ಣುಕಾ, ಗೋರಖನಾಥ, ಅಬ್ದುಲ ಹೈ, ಇಮಾನುವೇಲ್, ಶಾಮರಾವ, ಮಹಮ್ಮದ ಅಫಜಲೋದ್ದನ್ ಅಳಂದಕರ್, ರಮೇಶ, ಸಾಗರ, ರಾಘವೇಂದ,?? ಜಾವಿದ ಕಲ್ಯಾಣಕರ, ಅಶೋಕ ಬ್ರಮಾರಂಭಾದೇವಿ, ಜ್ಯೋತಿ, ಮಲ್ಲಿಕಾರ್ಜುನ ಗುಡ್ಡೆ, ಪ್ರಮೋದ ರಾಥೋಡ, ಪರುಶುರಾಮ್, ಸಿಮಪ್ಪಾ, ರೆಣ್ಣುಕಾ ತಾಂದಳೆ, ಶರಣ್ಣಬಸಪ್ಪಾ, ಜಿಲಾನಿ, ರಾಕೇಶ, ಸುರೆಶ, ರೇವಣಪ್ಪಾ ರವರು ಸೆರಿದಂತೆ ಸಿಬ್ಬಂದಿಗಳು ಹಾಗೂ ನರಸಿಂಗ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಅತ್ಯುತ್ತಮ ಚುನಾವಣಾಧಿಕಾರಿ ಪ್ರಶಸ್ತಿ ಪುರಸ್ಕೃತರಾದ ಡಾ. ಗಿರೀಶ ಡಿ. ಬದೋಲೆ ಅವರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-2024-25ನೇ ಸಾಲಿನಲ್ಲಿ ನಡೆದ ಲೋಕಸಭಾ ಚುನಾವಣೆ, ಮತದಾರರ ಪಟ್ಟಿ ಪರಿಷ್ಕರಣೆ ಸೇರಿದಂತೆ ಜಿಲ್ಲೆಯಲ್ಲಿ ನಡೆಸಿದ ಅತ್ಯುತ್ತಮ ಚುನಾವಣಾ ಕೆಲಸಗಳನ್ನು ಪರಿಗಣಿಸಿ ಚುನಾವಣಾ ಆಯೋಗ 2024-25ನೇ ಸಾಲಿನ ಅತ್ಯುತ್ತಮ ಚುನಾವಣಾಧಿಕಾರಿ ಪ್ರಶಸ್ತಿ ಪುರಸ್ಕೃತರಾದ ಬೀದರ್ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ದಿಲೀಪ ಬದೋಲೆ ಅವರಿಗೆ ಗುರುವಾರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಕಚೇರಿಯಲ್ಲಿ ತಾಲೂಕಿನ ಕೋಡಂಬಲ್ ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಹಾಲಿ ಉಪಾಧ್ಯಕ್ಷ ವಿಷ್ಣುವರ್ಧನ್ ಬುದ್ಧ ಅವರು ಶಾಲು ಹೊದಿಸಿ ಹೂಗುಚ್ಚ ನೀಡಿ ಶುಭಾಶಯಗಳು ತಿಳಿಸಿದರು. ಈ ಸಂದರ್ಭದಲ್ಲಿ ಚಿಟಗುಪ್ಪ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಎಸ್.ಬಿರಾದಾರ್ ಉಪಸ್ಥಿತರಿದ್ದರು.

# ಬಾವಿಗೆ ಬಿದ್ದ ಶ್ವಾನ ರಕ್ಷಿಸಿದ ಅಗ್ನಿಶಾಮಕ ದಳ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಮೆಟ್ಟಿಲುಗಳಿಲ್ಲದ ಅಂದಾಜು 35 ಅಡಿ ಆಳದ ನೀರಿಲ್ಲದ ಬಾವಿಗೆ ಬಿದ್ದಿದ್ದ ಸಾಕಿದ ಶ್ವಾನವನ್ನು ರಕ್ಷಣೆ ಮಾಡಿರುವ ಘಟನೆ ತಾಲೂಕಿನ ಕೋಡಂಬಲ್ ಗ್ರಾಮದಲ್ಲಿ ನಡೆದಿದೆ. ಇದಕ್ಕಾಗಿ ಅಗ್ನಿಶಾಮಕ ದಳ ಸಿಬ್ಬಂದಿ ಒಂದು ಗಂಟೆಗಳ ಕಾಲ ಕಾರ್ಯಾಚರಣೆ ನಡೆಸಿದರು. ಕೋಡಂಬಲ್ ಗ್ರಾಮದ ಆಕಾಶ ವಿಠಲರಾವ ಎಂಬುವರ ಸಾಕು ನಾಯಿ ತೆರೆದ ಬಾವಿಯಲ್ಲಿ ಬಿದ್ದಿತ್ತು. ಬಾವಿಯಲ್ಲಿ ಬಿದ್ದಿದ್ದ ಶ್ವಾನವನ್ನು ಕಂಡು ಅಗ್ನಿಶಾಮಕ ದಳದ ಠಾಣೆಗೆ ಕರೆ ಮಾಡಿ ಮಾಹಿತಿ ನೀಡಿದ್ದಾರೆ. ಬಳಿಕ ಸ್ಥಳಕ್ಕಾಗಮಿಸಿ ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆ ನಡೆಸಿ ಶ್ವಾನವನ್ನು ಜೀವಂತವಾಗಿ ಮೇಲೆತ್ತುವಲ್ಲಿ ಯಶಸ್ವಿಯಾದರು. ಸಹಕಾಯ ಅಗ್ನಿಶಾಮಕ ದಳದ ಠಾಣಾಧಿಕಾರಿ ನಾರಂದ ನೇತೃತ್ವದಲ್ಲಿ ರಕ್ಷಣಾ ಕಾರ್ಯಾಚರಣೆ ನಡೆದ್ದಿತು. ಸಿಬ್ಬಂದಿಗಳಾದ ರವಿ ಕನಕಟ, ವಸಂತಕುಮಾರ, ಅರುಣಕುಮಾರ, ಕಿರಣಕುಮಾರ, ಮಂಜುನಾಥ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

# ಮೊಮಿನ್‌ಪುರ ಮಾಸ್ಟರ್ಸ್ ಮಾರ್ಕೆಟ್ ಸೂಪರ್ ಕಿಂಗ್ಸ್ ವಿರುದ್ಧ 7 ವಿಕೆಟ್‌ಗಳ ಸುಲಭ ಗೆಲುವು



ಮಲ್ಲಮ ನುಡಿ ವಾರ್ತೆ

ಕಲಬುರಗಿ:ಜ.30:ಕೆಬಿಎನ್ ಟರ್ಫ್ ಮೈದಾನದಲ್ಲಿ ನಡೆಯುತ್ತಿರುವ ಏ೬ಓಕಐ2025 ಪಂದ್ಯಾವಳಿಯಲ್ಲಿ ಗುರುವಾರ ಮೊಮಿನ್‌ಪುರ ಮಾಸ್ಟರ್ಸ್ ಮಾರ್ಕೆಟ್ ಸೂಪರ್ ಕಿಂಗ್ಸ್ ವಿರುದ್ಧ 7 ವಿಕೆಟ್‌ಗಳಿಂದ ಸುಲಭವಾಗಿ ಗೆದ್ದರು. ಟಾಸ್ ಅನ್ನು ಕಳೆದುಕೊಂಡರು ಮೊಮಿನ್‌ಪುರಾ ಮಾಸ್ಟರ್ಸ್ 120 ರ ಗುರಿಯನ್ನು ಶಿವಕುಮಾರ್ ಮತ್ತು ವಾಸೀಮ್ ಮಿರ್ಜಾ ಬೇಗ್ ಅವರೊಂದಿಗೆ ಬೆನ್ನಟ್ಟಿದರು. ಸಂತೋಕ ಸಿಂಗ್ 2 ನೇ ಓವರ್‌ನಲ್ಲಿ ಮಿರ್ಜಾ ವಸೀಮ್ ಬೇಗ್ ಅವರ ವಿಕೆಟ್ ಪಡೆದರು. ಮಿರ್ಜಾ ಕೇವಲ 4 ರನ್ ಗಳಿಸಿದರು. ಸಹಭಾಗಿತ್ವದಲ್ಲಿ ಸೌರಬ್ ಮುತ್ತೂರು ಮತ್ತು ಶಿವಕುಮಾರ್ 50 ರನ್ ಗಳಿಸಿದರು. ಶಿವಕುಮಾರ್ ಅವರನ್ನು ಖುಸ್ರೋ ಅಹ್ಮದ್ ಅಲಿ ಅನ್ಸಾರಿ ಪೆವಿಲಿಯನಗೆ ಮರಳಿಸಿದರು. ಶಿವಕುಮಾರ್ 8 ಗಡಿಗಳೊಂದಿಗೆ 39 ರನ್ ಗಳಿಸಿದರು. ಸೌರಬ್ ಮುತ್ತೂರು 13 ರನ್ ಗಳಿಸಿದರೆ, ತುಷಾರ್ ಸಿಂಗ್ 4 ಸಿಕ್ಸರ್ ಮತ್ತು 5 ಗಡಿಗಳೊಂದಿಗೆ 51 ರನ್ ಗಳಿಸಿದರು. ಮೊಮಿನ್‌ಪುರ ಮಾಸ್ಟರ್ಸ್ 3 ವಿಕೆಟ್‌ಗಳ ನಷ್ಟದಲ್ಲಿ 126 ರನ್‌ಗಳನ್ನು ಸುಲಭವಾಗಿ ಸಂಗ್ರಹಿಸಿ ಪಂದ್ಯವನ್ನು ಗೆದ್ದರು.

ಆರಂಭದಲ್ಲಿ, ವಿಜಯ್ ರಾಜ್ ಮತ್ತು ಅನುರಾಗ್ ಮಾರ್ಕೆಟ್ ಸೂಪರ್ ಕಿಂಗ್ಸ್ ಓಪನರ್ಸ್ ಸ್ಥಿರ ಮತ್ತು ನಿಧಾನಗತಿಯ ಆರಂಭವನ್ನು ನೀಡಿದರು. ಇಬ್ಬರೂ ಒಟ್ಟಿಗೆ 43 ರನ್ ಗಳಿಸಿದರು. ಸೌರಬ ಮುತ್ತುರ ಅವರು ಅನುರಾಗ್ ವಿಕೆಟ್ ಪಡೆದು ಈ ಸಹಭಾಗಿತ್ವವನ್ನು ಮುರಿದರು. ಅನುರಾಗ್ ಒಂದು ಸಿಕ್ಸ್ ಮತ್ತು 3 ಗಡಿಗಳೊಂದಿಗೆ 24 ರನ್ ಗಳಿಸಿದರು. ಮುಂದಿನ ಬ್ಯಾಟ್ಸ್‌ಮನ್ ಅನಿಲ ಕುಮಾರ ಬಂದು 4 ರನ್ ಸೇರಿಸಿದ ನಂತರ ಮತ್ತೆ ಪೆವಿಲಿಯನ್‌ಗೆ ಹೋದರು. ವಿಜಯರಾಜ್ ರಾಜ್ 19 ರನ್ ಗಳಿಸಿದರು. ಫೈಜಾನ್ ಖಾನ್ 24 ರನ್ ಗಳಿಸಿದರು. ಉಳಿದ ಬ್ಯಾಟ್ಸ್‌ಮನ್‌ಗಳು ಒಂದೇ ಅಂಕಿಯ ಸ್ಕೋರ್ ಸೇರಿಸಿದರು. ಮಾರ್ಕೆಟ್ ಸೂಪರ್ ಕಿಂ-ಗ್ಸ್ ಕಷ್ಟಪಟ್ಟು ಹೋರಾಡಿ 20 ಓವರ್‌ಗಳಲ್ಲಿ 120/9 ಮಾಡಿದರು. ಮೊಮಿನ್ಪುರ ಮಾಸ್ಟಸ್ನಿರ್ಂದ. ಸೌರಬ್ ಮುತ್ತೂರು, ಮೊಹ್ಸಿನ್ ಖಾನ್ ಮತ್ತು ಶಿವಕುಮಾರ್ ತಲಾ 3 ವಿಕೆಟ್ ಪಡೆದರು.

ಶಿವಕುಮಾರ್ ಪಂದ್ಯ ಪುರುಷ. ಕೆಬಿಎನ್‌ಪಿಎಲ್ ಸಮಿತಿಯಿಂದ 2500 ರೂ, ಚಂದ್ರಶೇಖರ್ ಫೌಂಡೇಶನ್‌ನ ಪರವಾಗಿ ತುಷಾರ್ ಸಿಂಗ್-ಟಿ ಶರ್ಟ್ ಮತ್ತು ಸಿಕ್ಸರ್‌ಗಳಿಗೆ 2000 ರೂ ಬಹುಮಾನ ದೊರೆಯಿತು.


**ಪುರಸಭೆ ಕಾರ್ಯಾಲಯ, ಮಸ್ಕಿ**

ಸಂಖ್ಯೆ:ಪುಕಾಮ:ತಾಂತ್ರಿಕ:ಇ-ಟೆಂಡರ್:10:2024-25 ದಿನಾಂಕ: 27-01-2025

**ಟೆಂಡರ್ ಪ್ರಕಟಣೆ (ಕೆಪಿಪಿಪಿ ಪೋರ್ಟಲ್ ಮುಖಾಂತರ)**

ಮಸ್ಕಿ ಪುರಸಭೆಯ ಸನ್ 2023-24 & 2024-25 ನೇ ಸಾಲಿನ 15 ನೇ ಹಣಕಾಸು, ಎಸ್.ಬಿ.ಎಮ್ 2.0 ಮತ್ತು 2024-25 ನೆ ಸಲಿನ ಎಸ್.ಎಫ್.ಸಿ ಕು.ನೀ ಅನುದಾನದಲ್ಲಿ ಕೈಗೊಳ್ಳುವ ಸಿವಿಲ್ ಕಾಮಗಾರಿಗಳಿಗೆ ಪ.ಜಾತಿ ಜನಾಂಗದ ಗುತ್ತಿಗೆದಾರರಿಗೆ (ಇಂಡೆಂಟ ನಂ: 29004 CALL-3) ಮತ್ತು ಸಾಮಾನ್ಯ ವರ್ಗದ ಗುತ್ತಿಗೆದಾರರಿಗೆ (ಇಂಡೆಂಟ ನಂ: 29013 CALL-3, 29106 CALL-3, 22248 CALL-3, 25509 CALL-2, 35402) ಕಾಮಗಾರಿಗಳಿಗೆ ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿಸಿದ ಅರ್ಹ ಗುತ್ತಿಗೆದಾರರಿಂದ ಕೆ.ಡಬ್ಲ್ಯೂ-1 & 2 ರ ಷರತ್ತಿಗೊಳಪಟ್ಟು ಐಟಂವಾರು ಬಿಡ್ ದರಗಳನ್ನು ಅಹ್ವಾನಿಸಲಾಗಿದ್ದು, ಇಚ್ಛೆಯುಳ್ಳ ಗುತ್ತಿಗೆದಾರರು ಟೆಂಡರ್‌ನಲ್ಲಿ ಭಾಗವಹಿಸಿ ತಮ್ಮ ದರಗಳನ್ನು http://kppp.karnataka.gov.in ವೆಬ್‌ಸೈಟ್‌ನಿಂದ ಡೌನಲೋಡ ಮಾಡಿಕೊಂಡು ದಿನಾಂಕ: 04.02.2025 @ 4.30 ಗಂಟೆಯೊಳಗಾಗಿ ಸಲ್ಲಿಸಬಹುದಾಗಿದೆ. ಸದರಿ ಭರ್ತಿ ಮಾಡಿ ಸಲ್ಲಿಸಲಾದ ಟೆಂಡರ್‌ಳನ್ನು ದಿನಾಂಕ: 05.02.2025 @ 4.45 PM ರ ನಂತರ ತೆರೆಯಲಾಗುವುದು. ಹೆಚ್ಚಿನ ವಿವರಗಳಿಗೆ ಪುರಸಭೆಯ ವೆಬ್‌ಸೈಟ್ www.maskitown.mrc.gov.in ಮುಖಾಂತರ ಪಡೆದು ಸಲ್ಲಿಸಬಹುದು.

ಸಹಿ/- ಮುಖ್ಯಾಧಿಕಾರಿಗಳು
ಪುರಸಭೆ ಮಸ್ಕಿ

DIPR/RCR/695/KSMCA/696/2024-25


Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.